VOLUME: 16 | 12 JUNE 2026 | ಶುಕ್ರವಾರ | RS: 2 | PAGE: 06 ISSUE: 122 ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಸುಮಾರು ಒಂದು ದಶಕಗಳಿಂದ ಅಮೆರಿಕದಲ್ಲಿ ನೆಲೆಸಿದ್ದರೂ ಚಿತ್ರ ನಿರ್ದೇಶಕ ಅಮೋಘ್ ವಿಜಯ್ ಅವರಿಗೆ ಕನ್ನಡ ಚಿತ್ರ ನಿರ್ದೇಶಿಸುವ ಕನಸು ಕಮರಿ ಹೋಗಿರಲಿಲ್ಲ. ಆ ಬಹುಕಾಲದ ಮಹತ್ವಾಕಾಂಕ್ಷೆಯು ಈಗ ಅಂತಿಮ ರೂಪ ಪಡೆಯುತ್ತಿದೆ. ನಟಿ ಐಶ್ವರ್ಯಾ ರಾಜೇಶ್ ಪ್ರಧಾನ ಪಾತ್ರದಲ್ಲಿ ನಟಿಸುತ್ತಿರುವ ಚಿತ್ರವನ್ನು ಅಮೋಘ್ ವಿಜಯ್ ಅವರು ನಿರ್ದೇಶಿಸಲು ಸಜ್ಜಾಗಿದ್ದಾರೆ.



BHARATHA SARATHI
KANNADA DAILY NEWS PAPER
CALL 9740160669
# ಭಾರತ ಸಾರಥಿ
prabhavaa.com
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ




ಚಿನ್ನಯ್ಯ ಹೇಳಿಕೆಯಲ್ಲಿ, ಒಂದು ದಿನ ರಾತ್ರಿ ಸುಮಾರು 8 ಗಂಟೆಗೆ ಬುರುಡೆ ಗ್ಯಾಂಗ್ ಸದಸ್ಯ ಗಿರೀಶ್ ಮಟ್ಟಣ್ಣವರ್ ನಟ ಪ್ರಕಾಶ್ ರಾಜ್‌ಗೆ ದೂರವಾಣಿ ಕರೆ ಮಾಡಿ ನನಗೆ ಫೋನ್ ನೀಡಿದರು. ಪ್ರಕಾಶ್ ರಾಜ್ ತಮಿಳಿನಲ್ಲಿ ಮಾತನಾಡಿ, ಗಿರೀಶ್ ಮಟ್ಟಣ್ಣವರ್ ಅವರು ಏನು ಹೇಳಬೇಕೆಂದು ಸೂಚಿಸಿದ್ದಾರೋ ಅದನ್ನು ಅಧಿಕಾರಿಗಳ ಮುಂದೆ ಹೇಳಬೇಕು. ಅವರು ಹೇಳಿದಂತೆ ಕೇಳಿದರೆ ಜೂನ್ 29ರಂದು ಬಂದು ಅಪ್ಪಿಕೊಳ್ಳುತ್ತೇನೆ ಎಂದು ಹೇಳಿದ್ದರು. ಹೀಗೆಂದು ಹೇಳಿದ್ದಾಗಿ ನಟ ಪ್ರಕಾಶ್ ರಾಜ್ ಹೆಸರು ಉಲ್ಲೇಖಿಸಿ ಚಿನ್ನಯ್ಯ ರಿಟ್ ಅರ್ಜಿಯಲ್ಲಿ ತಿಳಿಸಿದ್ದಾನೆ ಎನ್ನಲಾಗಿದೆ.

# ಧರ್ಮಸ್ಥಳ ಪ್ರಕರಣದಲ್ಲಿ ನಟ ಪ್ರಕಾಶ್‌ರಾಜ್..!

ಬೆಂಗಳೂರು: ಧರ್ಮಸ್ಥಳಕ್ಕೆ ಕಳಂಕ ತರುವ ಪ್ರಕರಣದಲ್ಲಿ ಮತ್ತೊಂದು ಸ್ಫೋಟಕ ಸಂಗತಿ ಹೊರಬಿದ್ದಿದೆ. ಚಿನ್ನಯ್ಯನನ್ನು ಬಳಸಿಕೊಂಡು ಬುರುಡೆ ಗ್ಯಾಂಗ್ ಹೇಗೆಲ್ಲಾ ಸಂಚು ರೂಪಿಸಿತ್ತು ಎಂಬ ವಿಚಾರ ಬಯಲಾಗಿದೆ. ಮೊದಲು ಬುರುಡೆ ಗ್ಯಾಂಗ್ ಜೊತೆಗಿದ್ದ ಚಿನ್ನಯ್ಯ ಇದೀಗ ಹೈಕೋರ್ಟ್‌ಗೆ ರಿಟ್ ಅರ್ಜಿ ಸಲ್ಲಿಸಿದ್ದು, ಈ ಅರ್ಜಿಯಲ್ಲಿ ಹಲವು ಸ್ಫೋಟಕ ಸಂಗತಿ ಹೊರಬಿದ್ದಿದೆ. ಪ್ರಕರಣದಲ್ಲಿ ನಟ ಪ್ರಕಾಶ್ ರಾಜ್ ಹೆಸರು ಕೇಳಿಬಂದಿದೆ. ಅಲ್ಲದೆ ಧರ್ಮಸ್ಥಳ ವಿರುದ್ಧ ಷಡ್ಯಂತ್ರ ಮಾಡಲು 200 ಕೋಟಿ ಬಜೆಟ್ ಮತ್ತು ಕೇರಳದ ಹಣದ ಲಿಂಕ್ ಪತ್ತೆಯಾಗಿದೆ.

ಚಿನ್ನಯ್ಯ ಹೇಳಿಕೆಯಲ್ಲಿ, ಒಂದು ದಿನ ರಾತ್ರಿ ಸುಮಾರು 8 ಗಂಟೆಗೆ ಬುರುಡೆ ಗ್ಯಾಂಗ್ ಸದಸ್ಯ ಗಿರೀಶ್ ಮಟ್ಟಣ್ಣವರ್ ನಟ ಪ್ರಕಾಶ್ ರಾಜ್‌ಗೆ ದೂರವಾಣಿ ಕರೆ ಮಾಡಿ ನನಗೆ ಫೋನ್ ನೀಡಿದರು. ಪ್ರಕಾಶ್ ರಾಜ್ ತಮಿಳಿನಲ್ಲಿ ಮಾತನಾಡಿ, ಗಿರೀಶ್ ಮಟ್ಟಣ್ಣವರ್ ಅವರು ಏನು ಹೇಳಬೇಕೆಂದು ಸೂಚಿಸಿದ್ದಾರೋ ಅದನ್ನು ಅಧಿಕಾರಿಗಳ ಮುಂದೆ ಹೇಳಬೇಕು.

ಅವರು ಹೇಳಿದಂತೆ ಕೇಳಿದರೆ ಜೂನ್ 29ರಂದು



ಬಂದು ಅಪ್ಪಿಕೊಳ್ಳುತ್ತೇನೆ ಎಂದು ಹೇಳಿದ್ದರು. ಹೀಗೆಂದು ಹೇಳಿದ್ದಾಗಿ ನಟ ಪ್ರಕಾಶ್ ರಾಜ್ ಹೆಸರು ಉಲ್ಲೇಖಿಸಿ ಚಿನ್ನಯ್ಯ ರಿಟ್ ಅರ್ಜಿಯಲ್ಲಿ ತಿಳಿಸಿದ್ದಾನೆ ಎನ್ನಲಾಗಿದೆ.

ಧರ್ಮಸ್ಥಳದ ವಿರುದ್ಧ ಪಿತೂರಿ ಮಾಡಲು ಒಟ್ಟು 200 ಕೋಟಿ ರೂಪಾಯಿಗಳ ಬಜೆಟ್ ಸಿದ್ಧವಾಗಿತ್ತು. ಈ ಸಂಚಿನ ಭಾಗವಾಗಿ ನನಗೆ 50 ಲಕ್ಷ ರೂಪಾಯಿ ಕೊಡುವ ಆಮಿಷವನ್ನು ಮಹೇಶ್ ಶೆಟ್ಟಿ ತಿಮರೋಡಿ ಒಡ್ಡಿದ್ದರು. ಈ ಷಡ್ಯಂತ್ರಕ್ಕಾಗಿ ಕೇರಳದಿಂದ ಹಣ ಬಂದಿತ್ತು. ಇನ್ನು ಚಿತ್ರದುರ್ಗದ ರಮಾ ನಾಗರಾಜ್ ಎಂಬುವವರೂ ಕೂಡ ಇದಕ್ಕೆ ಹಣ ನೀಡಿದ್ದಾರೆ.

ತಮ್ಮ ಪತ್ನಿಯ ಬ್ಯಾಂಕ್ ಖಾತೆಗೆ ಹಣ ವರ್ಗಾವಣೆಯಾಗಿರುವ ಹಾಗೂ ನಗದು ಹಣದ ವಹಿವಾಟಿನ ಸಂಪೂರ್ಣ ವಿವರಗಳನ್ನು ಚಿನ್ನಯ್ಯ ನ್ಯಾಯಾಲಯಕ್ಕೆ ಸಲ್ಲಿಸಿದ್ದಾನೆ. ಮಹೇಶ್ ತಿಮರೋಡಿ, ಗಿರೀಶ್ ಮಟ್ಟಣ್ಣವರ್, ವಿಠಲಗೌಡ, ಜಯಂತ್ ಷಡ್ಯಂತ್ರದ ರೂವಾರಿಗಳಾಗಿದ್ದಾರೆ. ಆರೋಪಿಗಳ ಹೆಸರು ಹೇಳಿದರೂ ಎಸ್‌ಐಟಿ ಕ್ರಮ ಕೈಗೊಂಡಿಲ್ಲ ಎಂದು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾನೆ. ಹೈಕೋರ್ಟ್ ವಿಚಾರಣೆಯನ್ನು ಜೂನ್ 29ಕ್ಕೆ ಮುಂದೂಡಿದೆ.

# ಹೆಚ್ಚಿನ ಅನುದಾನಕ್ಕೆ ಮೋದಿಗೆ ಸಿಎಂ ಡಿಕೆಶಿ ಮನವಿ

ನವದೆಹಲಿ: ರಾಜ್ಯದ ನಗರ ಮತ್ತು ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ, ರಸ್ತೆ ಜಾಲ ವಿಸ್ತರಣೆ ಹಾಗೂ ಪ್ರಮುಖ ನೀರಾವರಿ ಯೋಜನೆಗಳ ಅನುಷ್ಠಾನಕ್ಕೆ ಕೇಂದ್ರ ಸರ್ಕಾರದಿಂದ ಹೆಚ್ಚಿನ ಆರ್ಥಿಕ ನೆರವು ಮತ್ತು ಆಡಳಿತಾತ್ಮಕ ಸಹಕಾರ ನೀಡುವಂತೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರಿಗೆ ಮನವಿ ಸಲ್ಲಿಸಿದರು.

ರಾಜ್ಯದಲ್ಲಿ ನಗರ ಮೂಲಸೌಕರ್ಯ, ನೀರಾವರಿ ಹಾಗೂ ರಸ್ತೆ ಜಾಲ ಅಭಿವೃದ್ಧಿಯನ್ನು ವೇಗಗೊಳಿಸಲು 'ರಾಜ್ಯಗಳಿಗೆ ಬಂಡವಾಳ ಹೂಡಿಕೆಗಾಗಿ ವಿಶೇಷ ಅನುದಾನ' (ಎಸ್‌ಎಎಸ್‌ಸಿಐ) ಯೋಜನೆಯಡಿ ಹೆಚ್ಚುವರಿ ರೂ.5,000 ಕೋಟಿ ನೆರವು ನೀಡುವಂತೆ ಸಿಎಂ ಮನವಿ ಮಾಡಿದ್ದಾರೆ.

ಬೆಂಗಳೂರು ನಗರದ ಮೂಲಸೌಕರ್ಯ ಕೊರತೆಗಳನ್ನು ನಿವಾರಿಸುವ ಉದ್ದೇಶದಿಂದ ರಾಜ್ಯ ಸರ್ಕಾರ 'ಬ್ರ್ಯಾಂಡ್ ಬೆಂಗಳೂರು' ಮಹಾಯೋಜನೆಯನ್ನು ಜಾರಿಗೊಳಿಸುತ್ತಿದ್ದು,



ಇದರ ಯಶಸ್ವಿ ಅನುಷ್ಠಾನಕ್ಕಾಗಿ ನಗರ ಮೂಲಸೌಕರ್ಯ ಅಭಿವೃದ್ಧಿ ನಿಧಿ (ಯುಐಡಿಎಫ್) ಯೋಜನೆಯಡಿ ಕರ್ನಾಟಕಕ್ಕೆ ಹೆಚ್ಚುವರಿ ರೂ.5,000 ಕೋಟಿ ಅನುದಾನ ನೀಡುವಂತೆ ಕೋರಿದ್ದಾರೆ.

ಗ್ರಾಮೀಣ ಪ್ರದೇಶಗಳಲ್ಲಿ ರಸ್ತೆ, ಸೇತುವೆ ಹಾಗೂ ನೀರಾವರಿ ಕಾಮಗಾರಿಗಳ ಬೇಡಿಕೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಧಿ (ಆರ್‌ಐಡಿಎಫ್) ಯೋಜನೆಯಡಿ 2026–27ನೇ ಸಾಲಿಗೆ ರೂ.3,500 ಕೋಟಿ ಹಂಚಿಕೆ ಮಾಡುವಂತೆ ಮನವಿ ಸಲ್ಲಿಸಲಾಗಿದೆ.

ಕಳೆದ ಹಣಕಾಸು ವರ್ಷದಲ್ಲಿ ರಾಜ್ಯಕ್ಕೆ ದೊರೆತಿದ್ದ ರೂ.2,000 ಕೋಟಿ ಅನುದಾನವನ್ನು ಸಂಪೂರ್ಣವಾಗಿ ಬಳಸಲಾಗಿದೆ ಎಂದು ಸಿಎಂ ವಿವರಿಸಿದರು.

# ಭಾರತದ ಹಡಗುಗಳ ಮೇಲೆ ದಾಳಿಗೆ ತೀವ್ರ ಖಂಡನೆ

ವಾಷಿಂಗ್ಟನ್/ಟೆಹ್ರಾನ್: ಮಧ್ಯಪ್ರಾಚ್ಯದಲ್ಲಿ ಮತ್ತೆ ಸಂಘರ್ಷದಲ್ಲಿ ನಿರತವಾಗಿರುವ ಅಮೆರಿಕ ಮತ್ತು ಇರಾನ್, ಹಾರ್ಮುಜ್ ಜಲಸಂಧಿಯ ಮೇಲೆ ನಿಯಂತ್ರಣ ಸಾಧಿಸಲು ಕಂಡು ಕೇಳರಿಯದ ಯುದ್ಧ ತಂತ್ರದ ಮೊರೆ ಹೋಗುತ್ತಿವೆ. ಒಮನ್ ಕರಾವಳಿ ಬಳಿ ಕ್ಷಿಪಣಿ ದಾಳಿ ನಡೆಸುತ್ತಿರುವ ಎರಡೂ ದೇಶಗಳು, ನಾವಿಕರ ಜೀವದೊಂದಿಗೆ ಚೆಲ್ಲಾಟವಾಡುತ್ತಿವೆ. ಭಾರತೀಯ ನಾವಿಕರಿದ್ದ ಹಡಗಿನ ಮೇಲೆ ಅಮೆರಿಕ ದಾಳಿ ನಡೆಸಿರುವುದೇ ಇದಕ್ಕೆ ಸಾಕ್ಷಿಯಾಗಿದೆ.

**ಒಮನ್ ಕರಾವಳಿಯಲ್ಲಿ ಭಾರತೀಯರಿದ್ದ 3ನೇ ಹಡಗಿನ ಮೇಲೆ ದಾಳಿ ನಡೆಸಿರುವುದಾಗಿ ಖುದ್ದು ಅಮೆರಿಕ ಸೆಂಟ್ರಲ್ ಕಮಾಂಡ್ ಒಪ್ಪಿಕೊಂಡಿದೆ. ಹಡಗು ಎಂಜಿನ್ ರೂಮ್‌ಗೆ 2 ಹೆಲ್‌ಫೈರ್ ಕ್ಷಿಪಣಿಗಳನ್ನ ಹಾರಿಸುವ ಮೂಲಕ ದಾಳಿ ನಡೆಸಿರುವುದಾಗಿ ತಿಳಿಸಿದೆ. ಈ ವಾರ ಒಮನ್ ಬಳಿ ದಾಳಿಗೊಳಗಾದ ಭಾರತೀಯ ಸಿಬ್ಬಂದಿ ಹೊಂದಿದ್ದ 3ನೇ ಹಡಗು ಇದಾಗಿದೆ.**

ಈ ಕುರಿತು ಎಕ್ಸ್ ಖಾತೆಯಲ್ಲಿ ಪೋಸ್ಟ್ ಹಂಚಿಕೊಂಡಿರುವ ಅಮೆರಿಕ ಸೆಂಟ್ರಲ್ ಕಮಾಂಡ್, ಭಾರತೀಯರಿದ್ದ ಹಡಗಿನ ಮೇಲೆ ದಾಳಿ ನಡೆಸಿದ ವಿಡಿಯೋವನ್ನ ಹಂಚಿಕೊಂಡಿದೆ.

ಅಮೆರಿಕ ಸೇನೆಯ ಸೂಚನೆಗಳನ್ನು ಪಾಲಿಸದೇ ಒಮನ್ ಕೊಲ್ಲಿಯ ಮೂಲಕ ಇರಾನಿಯನ್ ತೈಲ ಸಾಗಾಟ ಮಾಡಲು ಪ್ರಯತ್ನಿಸಲಾಗುತ್ತಿತ್ತು. ಹೀಗಾಗಿ ಗಿನಿಯಾ–ಬಿಸ್ಸೌ ಎಂ/ಟಿ ಜಲವೀರ್ ವಿರುದ್ಧ ಯುಎಸ್ ಸೆಂಟ್ರಲ್ ಕಮಾಂಡ್ ಕ್ರಮ ಕೈಗೊಂಡಿದೆ. ಹಡಗಿನಲ್ಲಿದ್ದ ಸಿಬ್ಬಂದಿ ಪದೇ ಪದೇ ಅಮೆರಿಕ ಸೇನೆಯ ನಿರ್ದೇಶನಗಳನ್ನ ಕಡೆಗಣಿಸಿದ್ದರಿಂದ ದಾಳಿ ನಡೆಸಲಾಗಿದೆ. ಹಡಗಿನ ಎಂಜಿನ್ ಕೋಣೆಯನ್ನು ಗುರಿಯಾಗಿಸಿ 2 ಹೆಲ್‌ಫೈಯ ಕ್ಷಿಪಣಿಗಳನ್ನು ಹಾರಿಸುವ ಮೂಲಕ ದಾಳಿ ನಡೆಸಲಾಗಿದೆ ಎಂದು ಹೇಳಿಕೊಂಡಿದೆ.

ಹಡಗಿನಲ್ಲಿದ್ದ 24 ಭಾರತೀಯ ಸಿಬ್ಬಂದಿಗಳಲ್ಲಿ 21 ಜನರನ್ನು ಸುರಕ್ಷಿತವಾಗಿ ರಕ್ಷಿಸಲಾಗಿದೆ. ಉಳಿದ ಮೂವರು ನಾವಿಕರು ಮೃತಪಟ್ಟಿರುವುದನ್ನ ಭಾರತದ ವಿದೇಶಾಂಗ ಸಚಿವಾಲಯ ಸ್ಪಷ್ಟಪಡಿಸಿದೆ. ಮಧ್ಯಪ್ರಾಚ್ಯದಲ್ಲಿ ಅಮೆರಿಕ ಮತ್ತು ಇರಾನ್ ನಡುವೆ ಯುದ್ಧ ಆರಂಭವಾದಾಗಿನಿಂದ, ಹಾರ್ಮುಜ್ ಜಲಸಂಧಿ ಬಳಿ ವಾಣಿಜ್ಯ ಹಡಗಿನಲ್ಲಿರುವ ಭಾರತೀಯ ಸಿಬ್ಬಂದಿಗಳು ಮೃತಪಟ್ಟಿರುವುದು ಇದೇ ಮೊದಲು.

# ಕಾಂಗ್ರೆಸ್ ಎಡವಟ್ಟು ಬಿಜೆಪಿ ಲಾಭ

ಭೋಪಾಲ್: ಮಧ್ಯಪ್ರದೇಶದ ರಾಜಕೀಯ ವಲಯದಲ್ಲಿ ಅತ್ಯಂತ ಪ್ರಮುಖ ಬೆಳವಣಿಗೆಯೊಂದರಲ್ಲಿ, ಕಾಂಗ್ರೆಸ್ ಅಭ್ಯರ್ಥಿ ಮೀನಾಕ್ಷಿ ನಟರಾಜನ್ ಅವರ ನಾಮಪತ್ರ ತಿರಸ್ಕಾರಗೊಂಡ ಬೆನ್ನಲ್ಲೇ ಆಡಳಿತಾರೂಢ ಬಿಜೆಪಿಯು ರಾಜ್ಯದ ಮೂರೂ ರಾಜ್ಯಸಭಾ ಸ್ಥಾನಗಳನ್ನು ಅವಿರೋಧವಾಗಿ ಗೆದ್ದುಕೊಂಡಿದೆ. ಮಧ್ಯಪ್ರದೇಶದಲ್ಲಿ ತೆರವಾಗಿದ್ದ 3 ರಾಜ್ಯಸಭಾ ಸ್ಥಾನಗಳಿಗೆ ನಡೆದ ಚುನಾವಣಾ ಪ್ರಕ್ರಿಯೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಭಾರಿ ಹಿನ್ನಡೆಯಾಗಿದೆ.

ಪ್ರಮುಖ ಕಾಂಗ್ರೆಸ್ ನಾಯಕಿ ಮೀನಾಕ್ಷಿ ನಟರಾಜನ್ ಅವರ ನಾಮಪತ್ರದಲ್ಲಿ ತಾಂತ್ರಿಕ ದೋಷಗಳು ಕಂಡುಬಂದ ಹಿನ್ನೆಲೆಯಲ್ಲಿ ಚುನಾವಣಾಧಿಕಾರಿಗಳು ಅವರ ನಾಮಪತ್ರವನ್ನು ರದ್ದುಗೊಳಿಸಿದರು. ಇದರೊಂದಿಗೆ ಚುನಾವಣಾ ಕಣದಲ್ಲಿ ಕೇವಲ ಮೂವರು ಬಿಜೆಪಿ ಅಭ್ಯರ್ಥಿಗಳು ಮಾತ್ರ ಉಳಿದುಕೊಂಡಿದ್ದರಿಂದ, ಮೂವರೂ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಘೋಷಿಸಲಾಯಿತು.

ರಾಜ್ಯಸಭಾ ಚುನಾವಣೆಯಲ್ಲಿ ಭಾರತೀಯ ಜನತಾ ಪಕ್ಷದ ಅಭ್ಯರ್ಥಿಗಳಾದ ರಜನೀಶ್ ಅಗರ್ವಾಲ್, ತರುಣ್ ಚುಗ್ ಮತ್ತು ಮಹೇಶ್ ಕೇವತ್ ಅವಿರೋಧವಾಗಿ ಆಯ್ಕೆಯಾಗುವ ಮೂಲಕ ಮಧ್ಯಪ್ರದೇಶದ ಮೂರೂ ರಾಜ್ಯಸಭಾ ಸ್ಥಾನಗಳನ್ನು ಬಿಜೆಪಿ ತನ್ನದಾಗಿಸಿಕೊಂಡಿದೆ.

ಕಾಂಗ್ರೆಸ್ ಪಕ್ಷದ ಪರವಾಗಿ ಹಿರಿಯ ನಾಯಕಿ ಮತ್ತು ಮಾಜಿ ಸಂಸದರಾದ ಮೀನಾಕ್ಷಿ ನಟರಾಜನ್ ನಾಮಪತ್ರ ಸಲ್ಲಿಸಿದ್ದರು. ನಾಮಪತ್ರಗಳ ಪರಿಶೀಲನೆಯ ಸಮಯದಲ್ಲಿ ಮೀನಾಕ್ಷಿ ನಟರಾಜನ್ ನಾಮಪತ್ರದಲ್ಲಿ ಕೆಲವು ಪ್ರಮುಖ ತಾಂತ್ರಿಕ ತಪ್ಪುಗಳು ಮತ್ತು ನಿಯಮಾವಳಿಗಳ ಉಲ್ಲಂಘನೆ ಇರುವುದು ಬೆಳಕಿಗೆ ಬಂದಿದೆ. ಬಿಜೆಪಿ ನಾಯಕರು ಈ ತಪ್ಪುಗಳ ವಿರುದ್ಧ ಆಕ್ಷೇಪ ಎತ್ತಿದ ನಂತರ, ಚುನಾವಣಾ ನಿಯಮಗಳ ಪ್ರಕಾರ ಆಕ್ಷೇಪಣೆಯನ್ನು ಮಾನ್ಯ ಮಾಡಿದ ಚುನಾವಣಾಧಿಕಾರಿಗಳು ಕಾಂಗ್ರೆಸ್ ಅಭ್ಯರ್ಥಿಯ ನಾಮಪತ್ರವನ್ನು ಅಸಿಂಧುಗೊಳಿಸಿ, ರದ್ದುಪಡಿಸಿದರು.




# ಮತ್ತೆ ಪಿಒಕೆಯಲ್ಲಿ ಪಾಕ್ ಸೇನೆ ದಾಳಿ: 16 ಬಲಿ

ಪಿಒಕೆಯಲ್ಲಿನ ಸ್ಥಳೀಯ ಜನರು ಪಾಕಿಸ್ತಾನ ಸರ್ಕಾರದ ವಿರುದ್ಧ ಕೆಲವು ಪ್ರಮುಖ ಕಾರಣಗಳಿಗಾಗಿ ರಸ್ತೆಗಿಳಿದು ಹೋರಾಟ ಮಾಡುತ್ತಿದ್ದರು. ತಮಗೆ ಸಿಗಬೇಕಾದ ನೈಸರ್ಗಿಕ ಸಂಪನ್ಮೂಲಗಳನ್ನು ಪಾಕಿಸ್ತಾನ ಬಳಸಿಕೊಳ್ಳುತ್ತಿದ್ದರೂ, ಸ್ಥಳೀಯರಿಗೆ ಅತಿಯಾದ ವಿದ್ಯುತ್ ಬಿಲ್ ಮತ್ತು ಗೋಧಿ ಹಿಟ್ಟಿನ ಬೆಲೆಯನ್ನು ವಿಪರೀತವಾಗಿ ಹೆಚ್ಚಿಸಲಾಗಿದೆ ಂದು ಜನ ಆಕ್ರೋಶ ವ್ಯಕ್ತಪಡಿಸಿದ್ದರು.

ಮುಜಾಫರಾಬಾದ್: ಪಾಕ್ ಆಕ್ರಮಿತ ಕಾಶ್ಮೀರದಲ್ಲಿ ಉಂಟಾಗಿರುವ ಆರ್ಥಿಕ ಬಿಕ್ಕಟ್ಟು, ಅತಿಯಾದ ಹಣದುಬ್ಬರ, ಹಿಂಸಾತ್ಮಕ ದಬ್ಬಾಳಿಕೆ ಮತ್ತು ಮೂಲಭೂತ ಹಕ್ಕುಗಳ ನಿರಾಕರಣೆಯನ್ನು ವಿರೋಧಿಸಿ ಸ್ಥಳೀಯ ನಾಗರಿಕರು ದೀರ್ಘಕಾಲದಿಂದ ಬೃಹತ್ ಪ್ರತಿಭಟನೆಗಳನ್ನು ನಡೆಸುತ್ತಿದ್ದರು. ಈ ಶಾಂತಿಯುತ ಪ್ರತಿಭಟನೆಯನ್ನು ಹತ್ತಿಕ್ಕಲು ಪಾಕಿಸ್ತಾನಿ ಸೇನೆಯು ಮನಬಂದಂತೆ ಗುಂಡಿನ ದಾಳಿ ನಡೆಸಿದೆ. ಇದರಿಂದ ಇಡೀ ಪ್ರದೇಶ ರಣರಂಗವಾಗಿ ಮಾರ್ಪಟ್ಟಿದೆ. ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿ ಪ್ರತಿಭಟನಾಕಾರರ ಮೇಲೆ ಪಾಕಿಸ್ತಾನಿ ಸೇನೆ ನಡೆಸಿದ ಮನಬಂದಂತೆ ಗುಂಡಿನ ದಾಳಿ ನಡೆಸಿದೆ. ಈ ದಾಳಿಯಿಂದ 16 ಜನರು ಸಾವನ್ನಪ್ಪಿದ್ದಾರೆ ಮತ್ತು 37ಕ್ಕೂ ಹೆಚ್ಚು ಜನರು ತೀವ್ರವಾಗಿ



ಗಾಯಗೊಂಡಿದ್ದಾರೆ.

ಪಿಒಕೆಯಲ್ಲಿನ ಸ್ಥಳೀಯ ಜನರು ಪಾಕಿಸ್ತಾನ ಸರ್ಕಾರದ ವಿರುದ್ಧ ಕೆಲವು ಪ್ರಮುಖ ಕಾರಣಗಳಿಗಾಗಿ ರಸ್ತೆಗಿಳಿದು ಹೋರಾಟ ಮಾಡುತ್ತಿದ್ದರು. ತಮಗೆ ಸಿಗಬೇಕಾದ ನೈಸರ್ಗಿಕ ಸಂಪನ್ಮೂಲಗಳನ್ನು ಪಾಕಿಸ್ತಾನ ಬಳಸಿಕೊಳ್ಳುತ್ತಿದ್ದರೂ, ಸ್ಥಳೀಯರಿಗೆ ಅತಿಯಾದ ವಿದ್ಯುತ್ ಬಿಲ್ ಮತ್ತು ಗೋಧಿ ಹಿಟ್ಟಿನ ಬೆಲೆಯನ್ನು ವಿಪರೀತವಾಗಿ ಹೆಚ್ಚಿಸಲಾಗಿದೆ ಂದು ಜನ ಆಕ್ರೋಶ ವ್ಯಕ್ತಪಡಿಸಿದ್ದರು.

ಇಡೀ ಪ್ರದೇಶವನ್ನು ಪಾಕಿಸ್ತಾನಿ ಮಿಲಿಟರಿ ತನ್ನ ಸಂಪೂರ್ಣ ನಿಯಂತ್ರಣದಲ್ಲಿಟ್ಟುಕೊಂಡು ಸ್ಥಳೀಯರ ಧ್ವನಿಯನ್ನು ಹತ್ತಿಕ್ಕುತ್ತಿರುವುದಕ್ಕೆ ತೀವ್ರ ವಿರೋಧ ವ್ಯಕ್ತವಾಗಿತ್ತು.

ಸ್ಥಳೀಯ ಹಕ್ಕುಗಳ ಒಕ್ಕೂಟದ ನೇರ ನಾಯಕತ್ವದಲ್ಲಿ ಸಾವಿರಾರು ನಿರಸ್ತ್ರ ನಾಗರಿಕರು, ಮಹಿಳೆಯರು ಮತ್ತು ಯುವಕರು ಮುಜಾಫರಾಬಾದ್ ಕಡೆಗೆ ಬೃಹತ್ ಮೆರವಣಿಗೆ ನಡೆಸುತ್ತಿದ್ದರು. ಪ್ರತಿಭಟನಾಕಾರರನ್ನು ಚದುರಿಸಲು ಮೊದಲು ಅಶ್ರುವಾಯು ಮತ್ತು ಲಾಠಿ ಚಾರ್ಜ್ ಮಾಡಿದ ಪಾಕಿಸ್ತಾನಿ ಅರೆಸೇನಾ ಪಡೆ ಮತ್ತು ಸೇನೆಯು, ನಂತರ ನೇರವಾಗಿ ಪ್ರತಿಭಟನಾಕಾರರ ಮೇಲೆ ಗುಂಡಿನ ಮಳೆಗರೆದಿದೆ.

ಭಾರತ ಸಾರಥಿ
12/06/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಇದೇ 28ರಂದು ರಾಷ್ಟ್ರೀಯ ಪಲ್ಸ್ ಪೋಲಿಯೋ ಅಭಿಯಾನ

ಬೆಂಗಳೂರು

ರಾಜ್ಯದಲ್ಲಿ 0 ಇಂದ 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಕಡ್ಡಾಯವಾಗಿ ಪೋಲಿಯೋ ಲಸಿಕೆ ನೀಡುವ ಉದ್ದೇಶದಿಂದ 2026 ರ ಜೂನ್ 28 ರ ಭಾನುವಾರದಂದು 'ರಾಷ್ಟ್ರೀಯ ಲಸಿಕಾ ದಿನ (ಪಲ್ಸ್ ಪೋಲಿಯೋ)' ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಾದ ರಿತ್ವಿಕ್ ಪಾಂಡೆ ಅವರು ತಿಳಿಸಿದ್ದಾರೆ.

ಭಾರತವು ಕಳೆದ 14 ವರ್ಷಗಳಿಗೂ ಮೇಲ್ಪಟ್ಟು ಪೋಲಿಯೊ ಮುಕ್ತ ರಾಷ್ಟ್ರವಾಗಿದ್ದರೂ, ಜಗತ್ತಿನ ಕೆಲವು ಭಾಗಗಳಲ್ಲಿ ಹಾಗೂ ಭಾರತದ ನೆರೆ ರಾಷ್ಟ್ರಗಳಲ್ಲಿ ವೈಲ್ಡ್ ಪೋಲಿಯೋ ವೈರಸ್ (ಘುಟಜ ಕಠಟುಠ ಗುಡಿಣ) ಹರಡುವಿಕೆ ಇನ್ನೂ ಇರುವುದರಿಂದ ಈ ಮುನ್ನೆಚ್ಚರಿಕೆ ಕ್ರಮ ಅತ್ಯಗತ್ಯವಾಗಿದೆ. ಭಾರತ ತಜ್ಞ ಸಲಹಾ ಗುಂಪಿನ ಶಿಫಾರಸ್ಸಿನ ಅನ್ವಯ ಈ ಅಭಿಯಾನವನ್ನು ನಡೆಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

ಮೊದಲನೇ ದಿನ ಜೂನ್ 28 ರಂದು ಪೋಲಿಯೋ ಬೂತ್‌ಗಳಲ್ಲಿ ಲಸಿಕೆ ನೀಡಲಾಗುವುದು. ನಂತರದ 2 ರಿಂದ 3 ದಿನಗಳಲ್ಲಿ ಆರೋಗ್ಯ ಕಾರ್ಯಕರ್ತರು ಮನೆ ಮನೆಗೆ ಭೇಟಿ ನೀಡಿ ಲಸಿಕೆ ವಂಚಿತ ಮಕ್ಕಳಿಗೆ ಲಸಿಕೆ ಹಾಕಲಿದ್ದಾರೆ. ವಲಸಿಗ ಸಮುದಾಯದ ಮಕ್ಕಳು, ಹೆಚ್ಚು ಅಪಾಯದಂಚಿನಲ್ಲಿರುವ ಪ್ರದೇಶಗಳು ಹಾಗೂ ನಗರ ಪ್ರದೇಶದ ಕೊಳಗೇರಿ ಪ್ರದೇಶಗಳಲ್ಲಿ ವಾಸಿಸುವ ಮಕ್ಕಳಿಗೆ ವಿಶೇಷ ಆದ್ಯತೆ ನೀಡಲಾಗುತ್ತದೆ.

ಎಲ್ಲಾ ಇಲಾಖೆಗಳ ಸಹಕಾರಕ್ಕೆ ಮನವಿ:

ಈ ಬೃಹತ್ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಎಲ್ಲಾ ಇಲಾಖೆಗಳ ಸಹಕಾರವನ್ನು ಬಯಸಿರುವ ಆರೋಗ್ಯ ಇಲಾಖೆಯು, ಹೆಚ್ಚಿನ ಪ್ರಚಾರ ನೀಡಲು ಮಾಹಿತಿ, ಶಿಕ್ಷಣ ಮತ್ತು ಸಂವಹನ ಚಟುವಟಿಕೆಗಳ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು, ಎಲ್ಲಾ ಮಾಧ್ಯಮಗಳು, ಆಕಾಶವಾಣಿ ಹಾಗೂ ಎಫ್.ಎಮ್ ವಾಹಿನಿಗಳಲ್ಲಿ ಜಿಂಗಲ್ಸ್ ಮೂಲಕ ಈ ಅಭಿಯಾನದ ಬಗ್ಗೆ ವ್ಯಾಪಕ ಪ್ರಚಾರ ಕೈಗೊಳ್ಳುವಂತೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಗೆ ನಿರ್ದೇಶನ ನೀಡಲಾಗಿದೆ.

## ಜಮೀರ್ ವಿರುದ್ಧ ಮಾನಹಾನಿಕರ ಸುದ್ದಿಗೆ ತಡೆ

ಬೆಂಗಳೂರು

ದಾವಣಗೆರೆ ಉಪ ಚುನಾವಣೆ ವಿಚಾರದಲ್ಲಿ ಮಾಜಿ ಸಚಿವ ಜಮೀರ್ ಅಹಮದ್ ಖಾನ್ ಅವರ ಗೌರವಕ್ಕೆ ಧಕ್ಕೆ ತರುವಂತಹ ಯಾವುದೇ ಮಾನ ಹಾನಿಕರ ಸುದ್ದಿ, ಲೇಖನ, ಆಡಿಯೋ ವಿಡಿಯೋ, ಚಿತ್ರ ಗಳನ್ನು ಮುದ್ರಣ, ವಿದ್ಯುನ್ಮಾನ, ಸಾಮಾಜಿಕ ಜಾಲ ತಾಣ, ಡಿಜಿಟಲ್, ಆನ್ ಲೈನ್, ವೆಬ್ ಪೋರ್ಟಲ್, ವಾಟ್ಸ್ ಆಪ್ ಸೇರಿದಂತೆ ಯಾವುದೇ ಸಾಮಾಜಿಕ ಮಾಧ್ಯಮಗಳಲ್ಲಿ ಪ್ರಸಾರ, ಅಪ್ ಲೋಡ್, ಪೋಸ್ಟ್, ಮರು ಪೋಸ್ಟ್ ಮಾಡದಂತೆ 57ನೇ ಹೆಚ್ಚುವರಿ ಸಿಟಿ ಸಿವಿಲ್ ಹಾಗೂ ಸೆಷನ್ಸ್ ನ್ಯಾಯಾಧೀಶರ ನ್ಯಾಯಾಲಯ (ಸಿಸಿಎಚ್–58) ಮೇಯೋ ಹಾಲ್) ಮಧ್ಯಂತರ ನಿರ್ಬಂಧಕಾದೇಶ (ತಡೆಯಾಜ್ಞೆ) ನೀಡಿದೆ.

## ಎಐ ತಂತ್ರಜ್ಞಾನದ ಮೂಲಕ ಕ್ರಿಕೆಟ್ ತರಬೇತಿಗೆ ಹೊಸ ದಿಕ್ಕು: 'ಕಬೂನಿ' ಜಾಗತಿಕ ವೇದಿಕೆ ಅನಾವರಣ



ಮುಂಬೈ

ಕೃತಕ ಬುದ್ಧಿಮತ್ತೆ (ಎಐ) ಆಧಾರಿತ ಜಾಗತಿಕ ಕ್ರೀಡಾ ವೇದಿಕೆಯಾದ ಕಬೂನಿ ತನ್ನ ಮೊದಲ 'ಪ್ಲೇಟೈಮ್ 2026' ಕಾರ್ಯಕ್ರಮದಲ್ಲಿ ಎಲೈಟ್ ಮಟ್ಟದ ಕ್ರಿಕೆಟ್ ತರಬೇತಿಯನ್ನು ಎಲ್ಲರಿಗೂ ಸುಲಭವಾಗಿ ತಲುಪಿಸುವ ಮಹತ್ವಾಕಾಂಕ್ಷಿ ಯೋಜನೆಯನ್ನು ಅನಾವರಣಗೊಳಿಸಿದೆ.

ಕ್ರೀಡೆ ಮತ್ತು ತಂತ್ರಜ್ಞಾನದ ಸಂಗಮವಾಗಿ ರೂಪುಗೊಂಡಿರುವ ಕಬೂನಿ, ಸುಧಾರಿತ ಎಐ ತಂತ್ರಜ್ಞಾನದ ನೆರವಿನಿಂದ ಆಟಗಾರರಿಗೆ ನೈಜ ಸಮಯದಲ್ಲಿ ವೈಯಕ್ತಿಕಗೊಳಿಸಿದ ತರಬೇತಿ ಮತ್ತು ಮಾರ್ಗದರ್ಶನ ನೀಡುವ ವಿಶಿಷ್ಟ ವೇದಿಕೆಯಾಗಿದೆ. ಇದರ ಮೂಲಕ ಆರಂಭಿಕ ಹಂತದ ಆಟಗಾರರಿಂದ ಹಿಡಿದು ವೃತ್ತಿಪರ ಕ್ರಿಕೆಟಿಗರವರೆಗೆ ಎಲ್ಲರೂ ತಮ್ಮ ಕೌಶಲ್ಯಗಳನ್ನು ಯಾವುದೇ ಸಮಯದಲ್ಲಿ, ಯಾವುದೇ ಸ್ಥಳದಲ್ಲಿ ಅಭಿವೃದ್ಧಿಪಡಿಸಿಕೊಳ್ಳಲು ಸಾಧ್ಯವಾಗಲಿದೆ.

ಜಾಗತಿಕ ಅನಾವರಣದ ಸಂದರ್ಭದಲ್ಲಿ ಕಬೂನಿ ತನ್ನ 'ಸೂಪರ್ ಕೋಚ್' ತಂಡವನ್ನೂ ಪರಿಚಯಿಸಿತು. ಭಾರತದ ಮಾಜಿ ನಾಯಕ ಸೌರವ್ ಗಂಗೂಲಿ, ಆಸ್ಟ್ರೇಲಿಯಾದ ಮಾಜಿ ಆಲ್‌ರೌಂಡರ್ ಶೇನ್ ವ್ಯಾಟ್ಸನ್, ದಕ್ಷಿಣ ಆಫ್ರಿಕಾದ ದಿಗ್ಗಜ ಬ್ಯಾಟರ್ ಎಬಿ ಡಿ ವಿಲಿಯರ್ಸ್ ಹಾಗೂ ಭಾರತದ ತಾರಾ ಆಟಗಾರ ಶ್ರೇಯಸ್ ಅಯ್ಯರ್ ಈ ತಂಡದ ಭಾಗವಾಗಿದ್ದಾರೆ. ಯುವ ಪ್ರತಿಭೆಗಳನ್ನು ಪ್ರೇರೇಪಿಸುವುದು, ಕೌಶಲ್ಯಾಭಿವೃದ್ಧಿಗೆ ನೆರವಾಗುವುದು ಹಾಗೂ ವಿಶೇಷ ತರಬೇತಿ ಸವಾಲುಗಳನ್ನು ರೂಪಿಸುವ ಜವಾಬ್ದಾರಿಯನ್ನು ಅವರು ನಿರ್ವಹಿಸಲಿದ್ದಾರೆ.

ಕಬೂನಿಯ ಪ್ರಮುಖ ಉದ್ದೇಶವೆಂದರೆ ಪ್ರತಿಯೊಬ್ಬ ಆಟಗಾರನ ಕೈಯಲ್ಲಿ ವಿಶ್ವಮಟ್ಟದ ಕ್ರಿಕೆಟ್ ತರಬೇತುದಾರನನ್ನು ಒದಗಿಸುವುದು. ಇದುವರೆಗೆ ಕೆಲವೇ ಅಕಾಡೆಮಿಗಳಿಗೆ ಸೀಮಿತವಾಗಿದ್ದ ಉನ್ನತ ಮಟ್ಟದ ತರಬೇತಿ ಮತ್ತು ತಾಂತ್ರಿಕ ವಿಶ್ಲೇಷಣೆಯನ್ನು ಸಾಮಾನ್ಯ ಆಟಗಾರರಿಗೂ ಲಭ್ಯವಾಗುವಂತೆ ಮಾಡುವುದು ಇದರ ಗುರಿಯಾಗಿದೆ.

ಸಂಸ್ಥಾಪಕ ನಿಮೇಶ್ ಪಟೇಲ್ ಮಾತನಾಡಿ, "ಇಂದಿನ ಯುವಕರು ಹೆಚ್ಚಾಗಿ ಮೊಬೈಲ್ ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ಸಮಯ ಕಳೆಯುತ್ತಿದ್ದಾರೆ. ಅವರನ್ನು ಮತ್ತೆ ಕ್ರೀಡೆಯತ್ತ ಸೆಳೆಯುವ ಹಾಗೂ ಅವರ ಸಾಮರ್ಥ್ಯವನ್ನು ಹೊರತರುವ ಉದ್ದೇಶದಿಂದ ಕಬೂನಿಯನ್ನು ರೂಪಿಸಲಾಗಿದೆ. ಕ್ರೀಡೆ ಕೇವಲ ಆಟವಲ್ಲ, ಅದು ವ್ಯಕ್ತಿತ್ವ ನಿರ್ಮಾಣದ ಶಕ್ತಿಯಾಗಿದೆ" ಎಂದು ಹೇಳಿದರು.

## ಶಿಕ್ಷಣದ ಭವಿಷ್ಯಕ್ಕಾಗಿ ಕುಲಪತಿಗಳ ದುಂಡು ಮೇಜಿನ ಸಭೆ ಆಯೋಜನೆ

ಬೆಂಗಳೂರು



ವಿಕಸಿತ ಭಾರತದ ಧ್ಯೇಯೋದ್ದೇಶಕ್ಕೆ ವಿಶ್ವವಿದ್ಯಾಲಯಗಳನ್ನು ಮರು ರೂಪಿಸುವ ದೃಷ್ಟಿಯಿಂದ ಕೆ.ಸಿ.ಗ್ಲೋಬ್‌ಎಡ್ ಬೆಂಗಳೂರಿನ ಕುಲಪತಿಗಳ ದುಂಡು ಮೇಜಿನ ಸಭೆಯಲ್ಲಿ ಮುಂಚೂಣಿಯ ಶಿಕ್ಷಣ ತಜ್ಞರು ಮತ್ತು ಉದ್ಯಮದ ಪರಿಣಿತರನ್ನು ಒಗ್ಗೂಡಿಸಿದ್ದು ಹೇಗೆ ಭಾರತೀಯ ವಿಶ್ವವಿದ್ಯಾಲಯಗಳು ಜಾಗತಿಕವಾಗಿ ಪ್ರಸ್ತುತ ಪಠ್ಯಕ್ರಮ, ಉದ್ಯಮ–ಸಂಯೋಜನೆಯ ಕಲಿಕೆ ಮತ್ತು ಭವಿಷ್ಯ ಸನ್ನದ್ಧ ಅರ್ಹತೆಗಳ ಮೂಲಕ ವಿದ್ಯಾರ್ಥಿಗಳನ್ನು ಹೆಚ್ಚಾಗಿ ಸ್ಪರ್ಧಾತ್ಮಕವಾಗುತ್ತಿರುವ ಅಂತಾರಾಷ್ಟ್ರೀಯ ಕಾರ್ಯಪಡೆಗೆ ಸಜ್ಜುಗೊಳಿಸಲು ವಾಣಿಜ್ಯ ಶಿಕ್ಷಣವನ್ನು ಪರಿವರ್ತಿಸಬಹುದು ಎಂದು ಆವಿಷ್ಕರಿಸಲು ಒಗ್ಗೂಡಿಸಿತು.

ಬೆಂಗಳೂರಿನ ಸ್ಟರ್ಲಿಂಗ್ಸ್ ಮ್ಯಾಕ್ ಹೋಟೆಲ್ ನಲ್ಲಿ ಆಯೋಜಿಸಲಾದ ಈ ರೌಂಡ್ ಟೇಬಲ್ ಕಾರ್ಯಕ್ರಮವು "ವಿಕಸಿತ ಭಾರತಕ್ಕೆ ವಿಶ್ವವಿದ್ಯಾಲಯಗಳ ಮರು ರೂಪಿಸುವಿಕೆ: ಎಐ ಸನ್ನದ್ಧ ಪ್ರತಿಭೆ, ಉದ್ಯೋಗಾರ್ಹತೆ ಮತ್ತು ಜಾಗತಿಕ ಸ್ಪರ್ಧಾತ್ಮಕತೆ" ಎಂಬ ವಿಷಯದ ಸುತ್ತಲೂ ಕೇಂದ್ರೀಕೃತವಾಗಿತ್ತು.

ಈ ಸಭೆಯು ವಿಶ್ವವಿದ್ಯಾಲಯಗಳು ವಾಣಿಜ್ಯ ಮತ್ತು ಹಣಕಾಸು ಶಿಕ್ಷಣವನ್ನು ಉದಯೋನ್ಮುಖ ತಂತ್ರಜ್ಞಾನಗಳಿಗೆ ಒಗ್ಗೂಡಿಸುವ ಮೂಲಕ, ಜಾಗತಿಕವಾಗಿ ಮಾನ್ಯತೆ ಪಡೆದ ವೃತ್ತಿಪರ ಅರ್ಹತೆಗಳನ್ನು ಶೈಕ್ಷಣಿಕ ಮಾರ್ಗಗಳ ಒಳಗೆ ತರುವ ಮತ್ತು ಎಐ–ಪ್ರೇರಿತ ಜಾಗತಿಕ ಅರ್ಥವ್ಯವಸ್ಥೆಯಲ್ಲಿ ಪದವೀಧರರ ಉದ್ಯೋಗಾರ್ಹತೆ ಹೆಚ್ಚಿಸಲು ಉದ್ಯಮ ಹಾಗೂ ಶೈಕ್ಷಣಿಕ ವಲಯಗಳ ನಡುವಿನ ಪಾಲುದಾರಿಕೆಯನ್ನು ಹೇಗೆ ಬಲಪಡಿಸಬಹುದು ಎಂಬುದನ್ನು ಆವಿಷ್ಕರಿಸಲು ಒಂದು ಜಂಟಿ ವೇದಿಕೆಯಾಗಿ ಕಾರ್ಯನಿರ್ವಹಿಸಿತು.

ಈ ಸಭೆಯಲ್ಲಿ ಕುಲಪತಿಗಳು ಮತ್ತು ಬೆಂಗಳೂರು ಹಾಗೂ ನೆರೆಹೊರೆಯ ಪ್ರದೇಶಗಳನ್ನು ಪ್ರತಿನಿಧಿಸುವ ಹಿರಿಯ ಶೈಕ್ಷಣಿಕ ನಾಯಕರು ಭಾಗವಹಿಸಿದ್ದರು.

ಅವರಲ್ಲಿ ಎಐಸಿಟಿಇ, ಐಐಎಸ್ಸಿ ಬೆಂಗಳೂರು, ದಯಾನಂದ್ ಸಾಗರ್ ಯೂನಿವರ್ಸಿಟಿ, ಎಂ.ಎಸ್. ರಾಮಯ್ಯ ಯೂನಿವರ್ಸಿಟಿ, ಜೈನ್ ಯೂನಿವರ್ಸಿಟಿ, ಸೇಂಟ್ ಜೋಸೆಫ್ಸ್ ಯೂನಿವರ್ಸಿಟಿ, ಆರ್.ವಿ. ಯೂನಿವರ್ಸಿಟಿ, ನೃಪತುಂಗ ಯೂನಿವರ್ಸಿಟಿ, ಬೆಂಗಳೂರು ಯೂನಿವರ್ಸಿಟಿ, ಕುವೆಂಪು ಯೂನಿವರ್ಸಿಟಿ, ಐ.ಎಸ್.ಬಿ.ಆರ್. ಬಿಸಿನೆಸ್ ಸ್ಕೂಲ್, ಅಮಿಟಿ ಯೂನಿವರ್ಸಿಟಿ, ದಿ ಆಕ್ಸ್ ಫರ್ಡ್ ಕಾಲೇಜ್ ಆಫ್ ಎಂಜಿನಿಯರಿಂಗ್, ಇನ್ಸ್ಟಿಟ್ಯೂಟ್ ಆಫ್ ಸೈನ್ಸ್ ಮತ್ತಿತರವು ಒಳಗೊಂಡಿದ್ದವು.

### ದಲಿತರ ಕಡೆಗಣಿಸಿದರೆ ರಕ್ತಕ್ರಾಂತಿ ಸರ್ಕಾರಕ್ಕೆ ದಲಿತ ಸಂಘಟನೆಗಳು ಎಚ್ಚರಿಕೆ

## ಪ್ರತಿಭಟನೆಯಲ್ಲಿ ಸಾವಿರಾರು ಜನರು ಭಾಗಿ

ಬೆಂಗಳೂರು



ದಲಿತ ಸಮುದಾಯದ ರಾಜಕೀಯ ನಾಯಕರನ್ನು ಕಡೆಗಣನೆ ಮಾಡುತ್ತಿರುವುದನ್ನು ಖಂಡಿಸಿ ರಾಜ್ಯ ದಲಿತ ಸಂಘಟನೆಗಳ ಒಕ್ಕೂಟ ನೇತೃತ್ವದಲ್ಲಿ ಸಾವಿರಾರು ಜನರು, ಗುರುವಾರ ಸ್ವಾತಂತ್ರ್ಯ ಉದ್ಯಾನದಲ್ಲಿ ಪ್ರತಿಭಟಿಸಿ ಕಾಂಗ್ರೆಸ್ ಸರ್ಕಾರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದರು. ಶೋಷಿತರ ಸ್ವಾಭಿಮಾನದ ಹೋರಾಟ ಎಂಬ ಹೆಸರಿನಲ್ಲಿ ನಡೆದ ರಾಜ್ಯಮಟ್ಟದ ಪ್ರತಿಭಟನೆಗೆ ಮೈಸೂರು, ಮಂಡ್ಯ ಮತ್ತು ಚಾಮರಾಜನಗರ ಸೇರಿ ರಾಜ್ಯದ ವಿವಿಧ ಭಾಗಗಳಿಂದ ಆಗಮಿಸಿ ಶಾಸಕ ಎಚ್.ಸಿ.ಮಹದೇವಪ್ಪ ಅವರ ಭಾವಚಿತ್ರ ಪ್ರದರ್ಶಿಸಿ, ನಮ್ಮ ನಾಯಕನಿಗೆ ಸಿಎಂ ಹುದ್ದೆ ನೀಡುವಂತೆ ಒತ್ತಾಯಿಸಿದರು.

ಸಂವಿಧಾನ, ಪ್ರಜಾಪ್ರಭುತ್ವದ ಮೌಲ್ಯಗಳು ಹಾಗೂ ಸಮಾಜದ ಏಳಿಗೆಗಾಗಿ ಶ್ರಮಿಸಿದ ಹಿರಿಯ ದಲಿತ ನಾಯಕರ ಕೊರತೆ ಇಂದು ರಾಜ್ಯ ರಾಜಕಾರಣದಲ್ಲಿ ಎದ್ದು ಕಾಣುತ್ತಿದೆ. ದಶಕಗಳಿಂದ ಕಾಂಗ್ರೆಸ್ಗೆ ಮತ ಹಾಕುತ್ತಾ ಬಂದಿರುವ ದಲಿತ ಸಮುದಾಯಕ್ಕೆ ವಂಚನೆ ಮಾಡಲಾಗುತ್ತಿದೆ. ಉನ್ನತ ಹುದ್ದೆಗಳ ಆಮಿಷ ಒಡ್ಡಿ ಪ್ರಭಾವಿ ದಲಿತ ನಾಯಕರನ್ನು ರಾಜಕೀಯವಾಗಿ ಮುಗಿಸುವ ಹುನ್ನಾರ ನಡೆಯುತ್ತಿದೆ ಎಂದು ಪ್ರತಿಭಟನಾಕಾರರು ಸಿಟ್ಟು ವ್ಯಕ್ತಪಡಿಸಿದರು.

ದಲಿತ ಸಂಘಗಳ ಒಕ್ಕೂಟದ ಅಧ್ಯಕ್ಷ ಎಚ್.ಸಿ.ಸಿದ್ದಲಿಂಗಯ್ಯ ಮಾತನಾಡಿ, ರಾಜ್ಯ ರಾಜಕಾರಣದಲ್ಲಿ ದಲಿತ ಸಮುದಾಯದ ಪ್ರಭಾವಿ ಮತ್ತು ಹಿರಿಯ ನಾಯಕರನ್ನು ಮೂಲೆಗುಂಪು ಮಾಡುವ ಮೂಲಕ ದಲಿತ ನಾಯಕತ್ವವನ್ನೇ ನಾಶ ಮಾಡಲು ಕೆಲವರು ಸಂಚು ರೂಪಿಸಿದ್ದಾರೆ.

ಶತಮಾನಗಳಿಂದಲೂ ತಳ ಸಮುದಾಯಗಳ ಪರವಾಗಿ ಧ್ವನಿ ಎತ್ತುತ್ತಾ ಬಂದಿರುವ ನಾಯಕರ ರೆಕ್ಕೆ, ಪುಕ್ಕ ಕತ್ತರಿಸುವ ಕೆಲಸ ನಡೆಯುತ್ತಿದೆ. ದಲಿತರ ರಾಜಕೀಯ ಪ್ರಾತಿನಿಧ್ಯವನ್ನು ಹತ್ತಿಕ್ಕುವ ಪ್ರಯತ್ನವಾಗಿದೆ. ಪ್ರಜಾಪ್ರಭುತ್ವದ ಆಶಯಗಳ ಅನ್ವಯ ಡಿಕೆಶಿ ಸರ್ಕಾರದಲ್ಲಿ ನಮ್ಮ ಸಮುದಾಯದ ನಾಯಕರಿಗೆ ಸೂಕ್ತ ಸ್ಥಾನ ಮಾನ ಸಿಗಬೇಕು ಎಂದು ಹೇಳಿದರು.

## ಬಜಾಜ್ ಆಟೋ ಫೌಂಡೇಶನ್‌ನಿಂದ ವಿದ್ಯಾರ್ಥಿವೇತನ

ಬೆಂಗಳೂರು



ಇಂಜಿನಿಯರಿಂಗ್ ಕ್ಷೇತ್ರದಲ್ಲಿ ಮಹಿಳೆಯರ ಭಾಗವಹಿಸುವಿಕೆಯನ್ನು ಹೆಚ್ಚಿಸುವ ಉದ್ದೇಶದಿಂದ ಬಜಾಜ್ ಆಟೋ ಫೌಂಡೇಶನ್ ಮುಂದಿನ ಹತ್ತು ವರ್ಷಗಳಲ್ಲಿ ರೂ.400 ಕೋಟಿ ವೆಚ್ಚದ ಮಹತ್ವಾಕಾಂಕ್ಷಿ ವಿದ್ಯಾರ್ಥಿವೇತನ ಯೋಜನೆಯನ್ನು ಘೋಷಿಸಿದೆ.

'ರೂಪಾ ರಾಹುಲ್ ಬಜಾಜ್ ಸ್ಕಾಲರ್‌ಶಿಪ್ ಫಾರ್ ವುಮೆನ್ ಇನ್ ಇಂಜಿನಿಯರಿಂಗ್' (ಆರ್‌ಆರ್‌ಬಿಎಸ್‌ಡಬ್ಲ್ಯುಇ) ಯೋಜನೆಯಡಿ ದೇಶದ ಪ್ರತಿಭಾವಂತ ಯುವ ಇಂಜಿನಿಯರಿಂಗ್ ವಿದ್ಯಾರ್ಥಿನಿಯರಿಗೆ ಆರ್ಥಿಕ ನೆರವು ಹಾಗೂ ವೃತ್ತಿ ಮಾರ್ಗದರ್ಶನ ಒದಗಿಸಲಾಗುತ್ತದೆ.

ಕೋರ್ ಇಂಜಿನಿಯರಿಂಗ್ ವಿಭಾಗಗಳಲ್ಲಿ ಮಹಿಳೆಯರಿಗಾಗಿ ದೇಶದಲ್ಲೇ ಅತಿ ದೊಡ್ಡ ವಿದ್ಯಾರ್ಥಿವೇತನ ಕಾರ್ಯಕ್ರಮವೆಂದು ಪರಿಗಣಿಸಲ್ಪಟ್ಟಿರುವ ಈ ಯೋಜನೆಯು ಮೆಕ್ಯಾನಿಕಲ್, ಎಲೆಕ್ಟ್ರಾನಿಕ್ಸ್, ಇಂಡಸ್ಟ್ರಿಯಲ್ ಇನ್‌ಸ್ಟ್ರುಮೆಂಟೇಶನ್, ಮೆಕಾಟ್ರಾನಿಕ್ಸ್, ರೊಬೊಟಿಕ್ಸ್ ಸೇರಿದಂತೆ ವಿವಿಧ ಕೋರ್ ಎಂಜಿನಿಯರಿಂಗ್ ವಿಭಾಗಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರಿಗೆ ನೆರವಾಗಲಿದೆ. ಈ ಯೋಜನೆಯಡಿ ಐಐಟಿ, ಎನ್‌ಐಟಿ, ಐಐಐಟಿ ಸೇರಿದಂತೆ ದೇಶದ 40 ಪ್ರಮುಖ ಇಂಜಿನಿಯರಿಂಗ್ ಶಿಕ್ಷಣ ಸಂಸ್ಥೆಗಳಲ್ಲಿ ಓದುತ್ತಿರುವ ವಿದ್ಯಾರ್ಥಿನಿಯರಿಗೆ ಅವರ ಪೂರ್ಣ ಇಂಜಿನಿಯರಿಂಗ್ ಶಿಕ್ಷಣ ಅವಧಿಯಲ್ಲಿ ತಲಾ 8 ಲಕ್ಷದವರೆಗೆ ಆರ್ಥಿಕ ಸಹಾಯ ದೊರೆಯಲಿದೆ.

ವಿದ್ಯಾರ್ಥಿವೇತನವು ಕೇವಲ ಹಣಕಾಸು ನೆರವಿಗೆ ಸೀಮಿತವಾಗದೆ, ಮಾರ್ಗದರ್ಶನ, ನಾಯಕತ್ವ ಅಭಿವೃದ್ಧಿ, ಉದ್ಯಮ ಕ್ಷೇತ್ರದ ಅನುಭವ ಹಾಗೂ ವೃತ್ತಿಪರ ನೆಟ್‌ವರ್ಕ್‌ಗಳಿಗೆ ಪ್ರವೇಶದಂತಹ ಸೌಲಭ್ಯಗಳನ್ನು ಸಹ ಒದಗಿಸಲಿದೆ. ಇದರ ಮೂಲಕ ಇಂಜಿನಿಯರಿಂಗ್ ಕ್ಷೇತ್ರದಲ್ಲಿ ಮಹಿಳಾ ನಾಯಕತ್ವವನ್ನು ಬೆಳೆಸುವ ಗುರಿಯನ್ನು ಫೌಂಡೇಶನ್ ಹೊಂದಿದೆ.

ಪುಣೆಯಲ್ಲಿರುವ ಬಜಾಜ್ ಆಟೋ ಲಿಮಿಟೆಡ್‌ನ ಪ್ರಧಾನ ಕಚೇರಿಯಲ್ಲಿ ನಡೆದ ವಿಶೇಷ ಕಾರ್ಯಕ್ರಮದಲ್ಲಿ ವಿದ್ಯಾರ್ಥಿವೇತನ ಯೋಜನೆಯ ಅಧಿಕೃತ ಗುರುತನ್ನು ಅನಾವರಣಗೊಳಿಸಲಾಯಿತು. ಇದೇ ಸಂದರ್ಭದಲ್ಲಿ ದೇಶದ ವಿವಿಧ ಪ್ರತಿಷ್ಠಿತ ಸಂಸ್ಥೆಗಳಿಂದ ಆಯ್ಕೆಯಾಗಿದ್ದ 506 ಪ್ರತಿಭಾವಂತ ವಿದ್ಯಾರ್ಥಿನಿಯರ ಮೊದಲ ಬ್ಯಾಚ್‌ಗೆ ಸನ್ಮಾನಿಸಲಾಯಿತು.

## ಆಧ್ಯಾತ್ಮಿಕ ಯಾತ್ರೆಗಳ ಕ್ಯಾಲೆಂಡರ್ ಬಿಡುಗಡೆ ಮಾಡಿದ ಎಸ್‌ಒಟಿಸಿ ಟ್ರಾವೆಲ್

ಮುಂಬೈ

SOTC For Holidays.

ಭಾರತದಲ್ಲಿ ಆಧ್ಯಾತ್ಮಿಕ ಪ್ರವಾಸೋದ್ಯಮಕ್ಕೆ ಹೊಸ ಚೈತನ್ಯ ದೊರೆಯುತ್ತಿದ್ದು, ಸಾಂಪ್ರದಾಯಿಕ ತೀರ್ಥಯಾತ್ರೆಗಳನ್ನು ಮೀರಿ ಭಕ್ತಿ, ಸಂಸ್ಕೃತಿ, ಪರಂಪರೆ ಹಾಗೂ ಜೀವನಾನುಭವಗಳ ಸಂಯೋಜನೆಯತ್ತ ಪ್ರವಾಸಿಗರು ಹೆಚ್ಚು ಆಕರ್ಷಿತರಾಗುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಎಸ್‌ಒಟಿಸಿ ಟ್ರಾವೆಲ್ ಸಂಸ್ಥೆ ಭಾರತ ಹಾಗೂ ನೆರೆಯ ರಾಷ್ಟ್ರಗಳ ಪ್ರಮುಖ ಆಧ್ಯಾತ್ಮಿಕ ತಾಣಗಳನ್ನು ಒಳಗೊಂಡ ವರ್ಷಪೂರ್ತಿ ಯಾತ್ರಾ ಕ್ಯಾಲೆಂಡರ್‌ನ್ನು ಪರಿಚಯಿಸಿದೆ.

ಇತ್ತೀಚಿನ ದಿನಗಳಲ್ಲಿ ಭಕ್ತರು ಕೇವಲ ದೇವರ ದರ್ಶನಕ್ಕೆ ಮಾತ್ರ ಸೀಮಿತವಾಗದೆ, ಸ್ಥಳೀಯ ಸಂಸ್ಕೃತಿ, ಧಾರ್ಮಿಕ ಹಬ್ಬಗಳು, ಐತಿಹಾಸಿಕ ಪರಂಪರೆ ಹಾಗೂ ಸಮುದಾಯಗಳೊಂದಿಗೆ ನಿಕಟ ಸಂಪರ್ಕ ಸಾಧಿಸುವ ಉದ್ದೇಶದಿಂದ ಆಧ್ಯಾತ್ಮಿಕ ಪ್ರವಾಸಗಳನ್ನು ಆಯ್ಕೆ ಮಾಡುತ್ತಿದ್ದಾರೆ.

ಈ ಬೆಳವಣಿಗೆಯನ್ನು ಗಮನದಲ್ಲಿಟ್ಟುಕೊಂಡು ಎಸ್‌ಒಟಿಸಿ ಟ್ರಾವೆಲ್ ತಿಂಗಳವಾರು ಯಾತ್ರಾ ಯೋಜನೆಯನ್ನು ರೂಪಿಸಿದ್ದು, ಪ್ರಮುಖ ಧಾರ್ಮಿಕ ಹಬ್ಬಗಳು, ಯಾತ್ರಾ ಋತುಗಳು ಹಾಗೂ ಅನುಕೂಲಕರ ಪ್ರವಾಸ ಸಮಯಗಳಿಗೆ ಅನುಗುಣವಾಗಿ ಪ್ರಯಾಣಿಕರಿಗೆ ಮಾರ್ಗದರ್ಶನ ನೀಡುತ್ತಿದೆ.

ಜೂನ್ ತಿಂಗಳಲ್ಲಿ ಚಾರ್ ಧಾಮ ಯಾತ್ರೆ, ಅಮರನಾಥ ಯಾತ್ರೆ, ಕೈಲಾಸ ಮಾನಸಸರೋವರ, ಮುಕ್ತಿನಾಥ, ಜಗನ್ನಾಥ ದೇವಾಲಯ ಮತ್ತು ವೈಷ್ಣೋ ದೇವಿ ಯಾತ್ರೆಗಳಿಗೆ ಆದ್ಯತೆ ನೀಡಲಾಗಿದೆ. ಜುಲೈನಲ್ಲಿ ಪುರಿ ರಥಯಾತ್ರೆ, ಗುರು ಪೂರ್ಣಿಮೆ ಆಚರಣೆಗಳೊಂದಿಗೆ ಒಡಿಶಾ ಹಾಗೂ ವಾರಾಣಸಿ ಪ್ರವಾಸಗಳನ್ನು ಶಿಫಾರಸು ಮಾಡಲಾಗಿದೆ.

### ಡಿಜಿಟಲ್–ಫಸ್ಟ್ ಭಾರತದತ್ತ ಆಟೋಡೆಸ್ಕ್ ಮಹತ್ವದ ಹೆಜ್ಜೆ:

## ಸ್ವಯಂ–ಸೇವಾ ಸ್ಟೋರ್ ನವೀಕರಣ

ನವದೆಹಲಿ

ಡಿಜಿಟಲ್–ಫಸ್ಟ್ ಭಾರತದ ಬೆಳವಣಿಗೆಯ ಮೇಲಿನ ತನ್ನ ಬದ್ಧತೆಯನ್ನು ಮತ್ತಷ್ಟು ಬಲಪಡಿಸಿರುವ ಆಟೋಡೆಸ್ಕ್, ದೇಶದಲ್ಲಿ ತನ್ನ ಡಿಜಿಟಲ್ ಸ್ಟೋರ್ ಅನ್ನು ಸಂಪೂರ್ಣ ಸ್ವಯಂ–ಸೇವಾ ಖರೀದಿ ವೇದಿಕೆಯಾಗಿ ನವೀಕರಿಸಿರುವುದಾಗಿ ಘೋಷಿಸಿದೆ. ಈ ಮೂಲಕ ದೇಶದಾದ್ಯಂತದ ಸ್ಟಾರ್ಟ್‌ಅಪ್‌ಗಳು, ಉದ್ಯಮಿಗಳು, ಫ್ರೀಲಾನ್ಸರ್‌ಗಳು ಹಾಗೂ ಸಣ್ಣ ಮತ್ತು ಮಧ್ಯಮ ಉದ್ಯಮಗಳಿಗೆ ವೃತ್ತಿಪರ ವಿನ್ಯಾಸ ಮತ್ತು ನಿರ್ಮಾಣ ತಂತ್ರಜ್ಞಾನವನ್ನು ಸುಲಭವಾಗಿ ತಲುಪಿಸುವ ಗುರಿಯನ್ನು ಕಂಪನಿ ಹೊಂದಿದೆ.



ಕಂಪನಿಯ ಪ್ರಕಾರ, ಆಟೋಡೆಸ್ಕ್‌ಗೆ ಸೇರುತ್ತಿರುವ ಹೊಸ ಗ್ರಾಹಕರಲ್ಲಿ ಅರ್ಧಕ್ಕಿಂತ ಹೆಚ್ಚು ಮಂದಿ ಸ್ಟಾರ್ಟ್‌ಅಪ್‌ಗಳು, ಫ್ರೀಲಾನ್ಸರ್‌ಗಳು ಹಾಗೂ ಸಣ್ಣ ಮತ್ತು ಮಧ್ಯಮ ಉದ್ಯಮಗಳೇ ಆಗಿದ್ದಾರೆ. ಈ ಹಿನ್ನೆಲೆಯಲ್ಲಿ ಗ್ರಾಹಕರು ಉತ್ಪನ್ನಗಳನ್ನು ಹುಡುಕುವುದು, ಮೌಲ್ಯಮಾಪನ ಮಾಡುವುದು, ಖರೀದಿಸುವುದು ಹಾಗೂ ನಿರ್ವಹಿಸುವ ಪ್ರಕ್ರಿಯೆಯನ್ನು ಇನ್ನಷ್ಟು ಸರಳಗೊಳಿಸಲು ಡಿಜಿಟಲ್ ಸ್ಟೋರ್ ಅನ್ನು ನವೀಕರಿಸಲಾಗಿದೆ.

ಇಂಟರ್ನೆಟ್ ಅಂಡ್ ಮೊಬೈಲ್ ಅಸೋಸಿಯೇಷನ್ ಆಫ್ ಇಂಡಿಯಾ ವರದಿ ಪ್ರಕಾರ, ಭಾರತದಲ್ಲಿ ಪ್ರಸ್ತುತ 958 ಮಿಲಿಯನ್ ಸಕ್ರಿಯ ಇಂಟರ್ನೆಟ್ ಬಳಕೆದಾರರಿದ್ದು, ದೇಶವು ವಿಶ್ವದ ಅತಿದೊಡ್ಡ ಹಾಗೂ ವೇಗವಾಗಿ ಬೆಳೆಯುತ್ತಿರುವ ಡಿಜಿಟಲ್ ಆರ್ಥಿಕತೆಗಳಲ್ಲಿ ಒಂದಾಗಿದೆ. ಡಿಜಿಟಲ್ ಬಳಕೆದಾರರ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ವೃತ್ತಿಪರ ತಂತ್ರಜ್ಞಾನ ಖರೀದಿ ವಿಧಾನಗಳಲ್ಲಿಯೂ ಮಹತ್ವದ ಬದಲಾವಣೆ ಕಂಡುಬಂದಿದೆ. ಈ ಬದಲಾವಣೆಗೆ ಅನುಗುಣವಾಗಿ ಆಟೋಡೆಸ್ಕ್ ತನ್ನ ನವೀಕೃತ ಸ್ಟೋರ್ ಮೂಲಕ ವೃತ್ತಿಪರ ಮಟ್ಟದ ವಿನ್ಯಾಸ ಮತ್ತು ನಿರ್ಮಾಣ ತಂತ್ರಜ್ಞಾನವನ್ನು ಸುಲಭವಾಗಿ ಲಭ್ಯವಾಗುವಂತೆ ಮಾಡಿದ್ದು, ಹೊಸ ಖರೀದಿ ಹಾಗೂ ಬಳಕೆ ಆಯ್ಕೆಗಳನ್ನು ಪರಿಚಯಿಸಿದೆ. ಇದರಿಂದ ಮೊದಲ ಬಾರಿಗೆ ತಂತ್ರಜ್ಞಾನ ಬಳಸುವ ಉದ್ಯಮಿಗಳು, ಉದಯೋನ್ಮುಖ ಸಂಸ್ಥೆಗಳು ಹಾಗೂ ಸೃಜನಶೀಲ ವೃತ್ತಿಪರರು ತಮ್ಮ ಆಲೋಚನೆಗಳನ್ನು ವಿನ್ಯಾಸಗೊಳಿಸಿ, ಅಭಿವೃದ್ಧಿಪಡಿಸಿ ಮತ್ತು ನಿರ್ಮಿಸಲು ಅಗತ್ಯವಾದ ಸಾಧನಗಳನ್ನು ಸುಲಭವಾಗಿ ಪಡೆಯಬಹುದಾಗಿದೆ.

ಕಂಪನಿಯ ಈ ಉಪಕ್ರಮವು ಭಾರತದಲ್ಲಿ ಡಿಜಿಟಲ್ ನಾವೀನ್ಯತೆ, ಉದ್ಯಮಶೀಲತೆ ಹಾಗೂ ತಂತ್ರಜ್ಞಾನ ಆಧಾರಿತ ಬೆಳವಣಿಗೆಯನ್ನು ಉತ್ತೇಜಿಸುವುದರ ಜೊತೆಗೆ, 'ವಿಕಸಿತ ಭಾರತ' ನಿರ್ಮಾಣದ ರಾಷ್ಟ್ರೀಯ ಗುರಿಗೆ ಸಹಕಾರಿಯಾಗಲಿದೆ ಎಂದು ಆಟೋಡೆಸ್ಕ್ ತಿಳಿಸಿದೆ.

## ಮೋದಿ ಜೊತೆ ಸಂಬಂಧ ಮುಂದುವರಿಯುತ್ತದೆ: ಹೆಚ್‌ಡಿಡಿ

ಪುಟ ಸಂಖ್ಯೆ 1ರಿಂದ

ಪಕ್ಷಕ್ಕಾಗಿ ಶಕ್ತಿ ಮೀರಿ ಕೆಲಸ ಮಾಡುತ್ತೇನೆ. ಸ್ಥಾನ ಇಲ್ಲ ಅಂತ ನಾನು ಕೂತುಕೊಳ್ಳಲ್ಲ. ಪಕ್ಷದ ಬೆಳವಣಿಗೆಗೆ ಎಷ್ಟು ಶಕ್ತಿ ಇದೆಯೋ ಮಾಡುತ್ತೇನೆ. ಪಾರ್ಲಿಮೆಂಟ್‌ಗೂ ವೀಲ್ ಚೇರ್‌ನಲ್ಲಿ ಹೋಗುತ್ತಿದ್ದೆ.

ರಾಜ್ಯ, ದೇಶದ ವಿಚಾರ ಬಂದಾಗ ನಿರ್ಭಯವಾಗಿ ಮಾತಾಡಿದ್ದೇನೆ. ಎನ್‌ಡಿಎಯಲ್ಲಿ ಇದ್ದೇವೆ, ಆದರೂ ಪಕ್ಷ ಸಂಘಟನೆ ಆಗಬೇಕು.

ಜಿಬಿಎ, ಸ್ಥಳೀಯ ಸಂಸ್ಥೆಗಳ ಚುನಾವಣೆ ಸಂಬಂಧ ಕಚೇರಿಗೆ ಬರುತ್ತೇನೆ. ಶೃಂಗೇರಿ ಶಾರದಾಂಬೆ ಜ್ಞಾನಪಕ ಶಕ್ತಿ ಕೊಟ್ಟಿದ್ದಾಳೆ. ಎಲ್ಲಿ ನಮ್ಮ ಪ್ರವೇಶ ಅಗತ್ಯ ಇದೆಯೋ ಅಲ್ಲಿ ಇರುತ್ತೇನೆ. ರಾಜ್ಯದ, ದೇಶದ ಒಳ್ಳೆಯದಕ್ಕೆ ಶಕ್ತಿ ಮೀರಿ ಕೆಲಸ ಮಾಡುತ್ತೇನೆ ಎಂದು ತಿಳಿಸಿದರು.

## ಈಜಿಪುರ ಫ್ಲೈಓವರ್ ಕಾಮಗಾರಿ ವೇಗಕ್ಕೆ ಆಯುಕ್ತರ ಕಸರತ್ತು

ಬೆಂಗಳೂರು



ಈಜಿಪುರ ಫ್ಲೈಓವರ್ ಕಾಮಗಾರಿಯಿಂದ ಉಂಟಾಗಿರುವ ವಾಹನ ದಟ್ಟಣೆ ಹಾಗೂ ಸಾರ್ವಜನಿಕರ ಸಂಚಾರ ಸಮಸ್ಯೆ ನಿವಾರಣೆಗೆ ಬೆಂಗಳೂರು ದಕ್ಷಿಣ ನಗರ ಪಾಲಿಕೆ ಆಯುಕ್ತ ಕೆ.ಎನ್. ರಮೇಶ್ ಸ್ಥಳ ಪರಿಶೀಲನೆ ನಡೆಸಿ ಅಧಿಕಾರಿಗಳಿಗೆ ಮಹತ್ವದ ಸೂಚನೆಗಳನ್ನು ನೀಡಿದರು.

ಕೇಂದ್ರೀಯ ಸದನ ಹಾಗೂ ಸೆಂಟ್ ಜಾನ್ಸ್ ಹಾಸ್ಟೆಲ್ ಬಳಿ ನಡೆಯುತ್ತಿರುವ ಫ್ಲೈಓವರ್ ಕಾಮಗಾರಿಯ ಪ್ರಗತಿಯನ್ನು ವೀಕ್ಷಿಸಿದ ಆಯುಕ್ತರು, ಪರ್ಯಾಯ ಸಂಚಾರ ವ್ಯವಸ್ಥೆ ಬಲಪಡಿಸಲು ಸರ್ವಿಸ್ ರಸ್ತೆ ನಿರ್ಮಾಣ ತುರ್ತಾಗಿ ಕೈಗೆತ್ತಿಕೊಳ್ಳಬೇಕು ಎಂದು ಸೂಚಿಸಿದರು.

ಮಡಿವಾಳ–ಈಜಿಪುರ ಮಾರ್ಗದಲ್ಲಿ ಸರ್ವಿಸ್ ರಸ್ತೆ ಅಭಿವೃದ್ಧಿ

ಮಡಿವಾಳ ಮುಖ್ಯರಸ್ತೆ ಹಾಗೂ ಈಜಿಪುರ–ಮಡಿವಾಳ ರಸ್ತೆಯಲ್ಲಿ ಸಂಚಾರ ದಟ್ಟಣೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ಸರ್ವಿಸ್ ರಸ್ತೆ ಅಭಿವೃದ್ಧಿಪಡಿಸಿ ವಾಹನ ಸಂಚಾರ ಸುಗಮಗೊಳಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಯಿತು.

ಸೆಂಟ್ ಜಾನ್ಸ್ ಆಸ್ಪತ್ರೆ ಬಳಿ ಭೂಸ್ವಾಧೀನ ಅಗತ್ಯ

ಕೇಂದ್ರೀಯ ಸದನ ಜಂಕ್ಷನ್ ಬಳಿ ಸರ್ವಿಸ್ ರಸ್ತೆ ವಿಸ್ತರಣೆಗೆ ಸೆಂಟ್ ಜಾನ್ಸ್ ಸಂಸ್ಥೆಯ ಸುಮಾರು 590 ಚದರ ಮೀಟರ್ ಜಾಗ ಅಗತ್ಯವಿದೆ ಎಂದು ಅಧಿಕಾರಿಗಳು ತಿಳಿಸಿದರು. ಈ ಹಿನ್ನೆಲೆಯಲ್ಲಿ ಕಾಮಗಾರಿಗೆ ಅಗತ್ಯ ಭೂಮಿಯನ್ನು ಬಿಟ್ಟುಕೊಡುವಂತೆ ಸೆಂಟ್ ಜಾನ್ಸ್ ಆಸ್ಪತ್ರೆಗೆ ಮನವಿ ಪತ್ರ ರವಾನಿಸಲು ಆಯುಕ್ತರು ಸೂಚಿಸಿದರು.

ಇದಲ್ಲದೆ, ಸೇಂಟ್ ಜಾನ್ ಸಿಗ್ನಲ್ ಬಳಿ ಫ್ಲೈಓವರ್ ಪಿಲ್ಲರ್ ನಿರ್ಮಾಣ ಹಾಗೂ ಸರ್ಜಾಪುರ ಭಾಗದಿಂದ ಬರುವ ವಾಹನಗಳಿಗಾಗಿ ಹೆಚ್ಚುವರಿ ಅಪ್‌ಯಾರ್ಂಪ್ ನಿರ್ಮಾಣಕ್ಕೂ ಭೂಮಿ ಅಗತ್ಯವಿರುವುದಾಗಿ ತಿಳಿಸಲಾಯಿತು.

ಪರ್ಯಾಯ ರಸ್ತೆಗಳಿಗೆ ತ್ವರಿತ ಕ್ರಿಯಾ ಯೋಜನೆ

ಫ್ಲೈಓವರ್ ಕಾಮಗಾರಿ ಅವಧಿಯಲ್ಲಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ಪರ್ಯಾಯ ರಸ್ತೆ ಹಾಗೂ ಸರ್ವಿಸ್ ರಸ್ತೆ ನಿರ್ಮಾಣಕ್ಕೆ ತಕ್ಷಣ ಕ್ರಿಯಾ ಯೋಜನೆ ರೂಪಿಸಿ ಕಾಮಗಾರಿ ಆರಂಭಿಸುವಂತೆ ಅಭಿಯಂತರರಿಗೆ ಆಯುಕ್ತರು ಸೂಚನೆ ನೀಡಿದರು.

ಸೆಂಟ್ ಜಾನ್ಸ್ ಆಡಳಿತದಿಂದ ಸಹಕಾರ ಭರವಸೆ

ಕಾಮಗಾರಿಯಿಂದ ಸಾರ್ವಜನಿಕರಿಗೆ ಆಗುವ ಅನುಕೂಲಗಳ ಕುರಿತು ಸೆಂಟ್ ಜಾನ್ಸ್ ಆಸ್ಪತ್ರೆ ಆಡಳಿತ ಮಂಡಳಿಯೊಂದಿಗೆ ಆಯುಕ್ತರು ಚರ್ಚೆ ನಡೆಸಿದರು. ಈ ವೇಳೆ ಆಸ್ಪತ್ರೆ ಆಡಳಿತ ಕಾಮಗಾರಿಗೆ ಅಗತ್ಯ ಸಹಕಾರ ನೀಡುವುದಾಗಿ ಭರವಸೆ ನೀಡಿರುವುದು ಉತ್ತಮ ಬೆಳವಣಿಗೆ ಎಂದು ಆಯುಕ್ತರು ಹೇಳಿದರು.

ಸ್ಥಳ ಪರಿಶೀಲನೆ ವೇಳೆ ಯೋಜನೆಯ ಮುಖ್ಯ ಅಭಿಯಂತರ ರಾಘವೇಂದ್ರ ಪ್ರಸಾದ್, ಅಪರ ಮುಖ್ಯ ನಗರ ಯೋಜಕರಾದ ಬಿ.ಎನ್. ಗಿರೀಶ್ ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

ಭಾರತ ಸಾರಥಿ
BHARATHA SARATHI KANNADA DAILY NEWS PAPER
12/06/2026
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಪ್ರತಿಭಾ ಪುರಸ್ಕಾರ ಕಾರ್ಯಕ್ರಮ



ಕೋಲಾರ

ತಾಲೂಕಿನ ಮದನಳ್ಳಿ ಕ್ರಾಸ್‌ನಲ್ಲಿರುವ ಸರಕಾರಿ ಪದವಿಪೂರ್ವ ಕಾಲೇಜಿನಲ್ಲಿ 2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

2002–03ನೇ ಸಾಲಿನ ಹಳೆಯ ವಿದ್ಯಾರ್ಥಿಗಳಾದ ತೆರ್ನಹಳ್ಳಿ ಟಿ.ಎನ್ ಸೋಮಶೇಖರ್, ವೆಲಗಲಬುರ್ರೆ ವಿ.ಎಮ್ ಸಂತೋಷ್ ಕುಮಾರ್, ಮದನಹಳ್ಳಿ ಸಿ.ವಿ ಮಂಜುನಾಥ್, ಮುಳ್ಳಹಳ್ಳಿ ಎಂ.ಆರ್ ನಾಗೇಂದ್ರ ಕುಮಾರ್, ಎಂ.ವಿ ಅರುಣ್ ಕುಮಾರ್ ಇವರ ಸಮ್ಮುಖದಲ್ಲಿ ಪ್ರಥಮ ಸ್ಥಾನ, ದ್ವಿತೀಯ ದ್ವಿತೀಯ ಸ್ಥಾನ ಮತ್ತು ತೃತೀಯ ಸ್ಥಾನ ಪಡೆದ ಮಕ್ಕಳಿಗೆ ಮೊದಲನೇ ಬಹುಮಾನ 10,000, ದ್ವಿತೀಯ ಬಹುಮಾನ 5,000, ತೃತೀಯ ಬಹುಮಾನ 3000 ನೀಡಿ ಆತ್ಮೀಯವಾಗಿ ಸನ್ಮಾನಿಸಲಾಯಿತು.

ಬಿ.ಟಿ ನಂಜುಂಡಗೌಡ ಅಧ್ಯಕ್ಷತೆ ವಹಿಸಿದ್ದು, ಬಿಜಿ ವಿಜಯಾನಂದ ವೇದಿಕೆಯಲ್ಲಿದ್ದರು. ಎಸ್. ಸುರೇಶ್ ಕುಮಾರ್ ಸ್ವಾಗತಿಸಿ, ಗೋವಿಂದರಾಜು ನಿರೂಪಿಸಿ, ವಿಎಂ ರಾಜಣ್ಣ ವಂದಿಸಿದರು. ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನೆರವೇರಿತು. ಪುರಸ್ಕೃತ ವಿದ್ಯಾರ್ಥಿಗಳು ತಮ್ಮ ಅನಿಸಿಕೆಗಳು ವ್ಯಕ್ತಪಡಿಸಿದರು. ಎಲ್ಲಾ ಮಕ್ಕಳಿಗೂ ಸಂವಿಧಾನ ಪೀಠಿಕೆ ವಿತರಿಸಿ, ಸಿಹಿ ವಿತರಿಸಲಾಯಿತು.

# ಟಾಸ್ಕ್ ಫೋರ್ಸ್ ಸಮಿತಿ ಬೂಟಾಟಿಕೆ ಅಲ್ಲ, ಜನಸೇವೆಗಾಗಿ: ಕೊತ್ತೂರು ಖಡಕ್ ಸೂಚನೆ

ಕೋಲಾರ

ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಸಾರ್ವಜನಿಕರಿಗೆ ಯಾವುದೇ ರೀತಿಯ ಕುಡಿಯುವ ನೀರಿನ ತೊಂದರೆ ಉಂಟಾಗದಂತೆ ನಿಗಾ ವಹಿಸಬೇಕು. ಹಾಗೇಯೇ ಜಾನುವಾರುಗಳ ಕುಡಿಯುವ ನೀರು ಮತ್ತು ಮೇವಿನ ಸಮಸ್ಯೆಗೆ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಶಾಸಕ ಕೊತ್ತೂರು ಜಿ. ಮಂಜುನಾಥ್ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು.

ನಗರದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ಟಾಸ್ಕ್ ಫೋರ್ಸ್ (ಕಾರ್ಯಪಡೆ) ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಟಾಸ್ಕ್ ಫೋರ್ಸ್ ಕಮಿಟಿ ಎಂದರೆ ಆಟಾಟಿಕೆ ಅಥವಾ ಬೂಟಾಟಿಕೆಯಲ್ಲ. ಜನರಿಗೆ ಕುಡಿಯುವ ನೀರು ಸೇರಿದಂತೆ ಮೂಲಭೂತ ಸಮಸ್ಯೆಗಳನ್ನು ಬಗೆಹರಿಸುವುದೇ ಈ ಸಮಿತಿಯ ಮುಖ್ಯ ಉದ್ದೇಶ. ಕರ್ತವ್ಯದಲ್ಲಿ ನಿರ್ಲಕ್ಷ್ಯ ತೋರುವ ಅಧಿಕಾರಿಗಳ ಮೇಲೆ ಏಕೆ ಶಿಸ್ತು ಕ್ರಮ ಜರುಗಿಸಬಾರದು ಎಂದು ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಧಿಕಾರಿ ವಿರುದ್ಧ ರೆಸಲ್ಯೂಷನ್ (ಠರಾವು) ಪಾಸ್ ಮಾಡುವಂತೆ ತಹಶಿಲ್ದಾರ್ ಅವರಿಗೆ ನಿರ್ದೇಶನ ನೀಡಿದರು.

ಜಾನುವಾರುಗಳಿಗೆ ಉಂಟಾಗುತ್ತಿರುವ ಸಮಸ್ಯೆಗಳಿಗೆ ಕೈಗೊಂಡಿರುವ ಕ್ರಮಗಳ ಬಗ್ಗೆ ಮಾತ್ರ ಉತ್ತರಿಸುವಂತೆ ಪಶುಸಂಗೋಪನಾ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದ ಅವರು, ಗ್ರಾಮೀಣ ಭಾಗದಲ್ಲಿ ಎಲ್ಲೂ ಮೇವಿನ ಕೊರತೆ ಉಂಟಾಗಬಾರದು. ಒಂದು ವೇಳೆ ಸಮಸ್ಯೆ ಕಂಡುಬಂದಲ್ಲಿ ಸಂಬಂಧಪಟ್ಟ ರಾಜಸ್ವ ನಿರೀಕ್ಷಕರನ್ನೇ (ಆರ್.ಐ) ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಎಚ್ಚರಿಸಿದರು.



ನಮ್ಮ ಜಿಲ್ಲೆಯ ರೈತರು ಕೊಂಡೊಯ್ಯುವ ಗೊಬ್ಬರವನ್ನು ಆಂಧ್ರಪ್ರದೇಶದ ಗಡಿಭಾಗದಲ್ಲಿ ಅಲ್ಲಿನ ಅಧಿಕಾರಿಗಳು ವಶಪಡಿಸಿಕೊಳ್ಳುತ್ತಿರುವ ಬಗ್ಗೆ ದೂರುಗಳು ಕೇಳಿಬರುತ್ತಿವೆ. ಈ ಸಮಸ್ಯೆಗೆ ಬ್ರೇಕ್ ಹಾಕಲು ಈ ಬಾರಿ ಹೋಬಳಿ ಮಟ್ಟದಲ್ಲೇ ಗೊಬ್ಬರವನ್ನು ವಿತರಿಸಲು ಅಗತ್ಯ ಕ್ರಮ ವಹಿಸಲಾಗುವುದು ಎಂದು ಶಾಸಕರು ಭರವಸೆ ನೀಡಿದರು.

ನೀರಿನ ವಿಚಾರವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ನೀರಿನ ಸಮಸ್ಯೆ ಎದುರಾದಾಗ ಕೋಲಾರ ಜಿಲ್ಲೆಗೆ ಮಾತ್ರ ಪ್ರತ್ಯೇಕ ಆದೇಶವಿದ್ದು, ಅನುದಾನದ ಕೊರತೆ ಇಲ್ಲ. ಅಧಿಕಾರಿಗಳು ಜವಾಬ್ದಾರಿಯಿಂದ ಕೆಲಸ ಮಾಡಬೇಕು, ಹಣವನ್ನು ಸರ್ಕಾರದಿಂದ ಬಿಡುಗಡೆ ಮಾಡಿಸಲಾಗುವುದು. ಗ್ರಾಮೀಣ ಭಾಗದಲ್ಲಿ ಬೋರ್‌ವೆಲ್ ಕೆಟ್ಟು ನಿಂತರೆ ಅಥವಾ ಟ್ರಾನ್ಸ್‌ಫಾರ್ಮರ್ (ಟಿಸಿ) ಸಮಸ್ಯೆ ಎದುರಾದಾಗ ಪಿಡಿಓಗಳು ಕೂಡಲೇ ಕೆಇಬಿ ಅಧಿಕಾರಿಗಳ ಗಮನಕ್ಕೆ ತರಬೇಕು. ಜೊತೆಗೆ ಇಓ, ತಹಶೀಲ್ದಾರ್ ಅಥವಾ ನನ್ನ ಗಮನಕ್ಕೆ ತರಬೇಕು ಎಂದು ತಿಳಿಸಿದರು.

ಇದೇ ವೇಳೆ ಸಣ್ಣ ನೀರಾವರಿ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಹರಿಕೃಷ್ಣ ಅವರಿಗೆ ಸಭೆಯಿಂದಲೇ ದೂರವಾಣಿ ಕರೆ ಮಾಡಿದ ಶಾಸಕರು, ನರಸಾಪುರ ಗ್ರಾಮದ ಸರ್ಕಾರಿ ಆಸ್ಪತ್ರೆ ಹಾಗೂ ನಾಡಕಚೇರಿಗೆ ಕೂಡಲೇ ನೀರಿನ ವ್ಯವಸ್ಥೆ ಕಲ್ಪಿಸುವಂತೆ ಸೂಚಿಸಿದರು.

ತಾಲ್ಲೂಕಿನ ದೊಡ್ಡ ದೊಡ್ಡ ಗ್ರಾಮಗಳಲ್ಲಿ ಈಗಾಗಲೇ ಎರಡರಂತೆ ಶುದ್ಧ ನೀರಿನ ಘಟಕಗಳಿದ್ದು ಸದ್ಯಕ್ಕೆ ಎಲ್ಲೂ ಕುಡಿಯುವ ನೀರಿನ ಘಟಕಗಳ ಸಮಸ್ಯೆ ಇಲ್ಲ. . ಘಟಕಗಳು ಕೆಟ್ಟುಹೋದಾಗ ಸಕಾಲಕ್ಕೆ ಸರ್ವೀಸಿಂಗ್ ಮಾಡಿಸಬೇಕು ಎಂದು ಪಿಡಿಓಗಳಿಗೆ ಸೂಚಿಸಿದರು.

ಸೂಲೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕಸ ವಿಲೇವಾರಿಗೆ ಜಾಗದ ಸಮಸ್ಯೆ ಇರುವ ಕುರಿತು ಪಿಡಿಓ ಸಭ ಗಮನಕ್ಕೆ ತಂದರು. ಇನ್ನು ಯರಗೋಳ್ ಯೋಜನೆಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿದ್ದ ತಡೆಯಾಜ್ಞೆ ತೆರವುಗೊಂಡಿದ್ದು (ಡಿಸ್ಮಿಸ್ ಆಗಿದ್ದು), ಕೂಡಲೇ ವಾಟರ್ ಬೋರ್ಡ್ ಅಧಿಕಾರಿಗಳು ಕಾಮಗಾರಿ ಆರಂಭಿಸಿ ಎಲ್ಲಾ ಕಡೆ ನೀರು ಒದಗಿಸಬೇಕು ಎಂದರು.

ಸಭೆಯಲ್ಲಿ ಮಾತನಾಡಿದ ತಹಶೀಲ್ದಾರ್ ಹೆಚ್. ಶ್ರೀನಿವಾಸ್, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಪಿಡಿಓಗಳೇ ಸುಪ್ರೀಂ ಇದ್ದಂತೆ. ಸಾರ್ವಜನಿಕರ ಸಮಸ್ಯೆಗಳನ್ನು ಬಗೆಹರಿಸಲು ಕೋಲಾರ ತಾಲ್ಲೂಕು ಕಛೇರಿಯಲ್ಲಿ ದೂರುಗಳ ಸ್ವೀಕಾರಕ್ಕೆ 24*7 ಕಾರ್ಯನಿರ್ವಹಿಸುವ 08152222007 ಮತ್ತು 08152222056 ಹೆಲ್ಪ್‌ಲೈನ್ ವ್ಯವಸ್ಥೆ ಮಾಡಲಾಗಿದೆ. ದಾರಿ ಹಾಗೂ ಸ್ಮಶಾನದ ಜಾಗ ಮತ್ತು ಸರ್ಕಾರಿ ಜಮೀನು ಸಂಬಂಧಿಸಿದ ಸಮಸ್ಯೆಗಳಿದ್ದರೆ ನೇರವಾಗಿ ನನ್ನ ಬಳಿ ಬನ್ನಿ, ಬಗೆಹರಿಸೋಣ. ಸರ್ಕಾರಿ ಜಮೀನನ್ನು ಸಂರಕ್ಷಿಸುವುದು ನಮ್ಮ ಮೊದಲ ಆದ್ಯತೆಯಾಗಿದೆ. ಕರ್ತವ್ಯದಲ್ಲಿ ಲೋಪವೆಸಗಿದರೆ ಅಧಿಕಾರಿಗಳೇ ಹೊಣೆಗಾರರಾಗುತ್ತಾರೆ ಎಂದು ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದರು.

ಟಾಸ್ಕ್ ಫೋರ್ಸ್ ಸಭೆಯಲ್ಲಿ ತಾಲ್ಲೂಕು ಪಂಚಾಯಿತಿ ಇಓ ಮಂಜುನಾಥ್, ನಗರಸಭೆ ಪೌರಾಯುಕ್ತ ವೆಂಕಟೇಶ್ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಪಂಚಾಯತ್ ರಾಜ್ ಇಲಾಖೆಯ ಜಬೀವುಲ್ಲಾ, ವೇಮಗಲ್ ಕುರಗಲ್ ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿ ವೆಂಕಟೇಶ್ ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು

> ಕೀಲುಕೋಟೆ ಅಂಜನೇಯ ಸ್ವಾಮಿ ದೇವಾಲಯ ಜೀರ್ಣೋದ್ದಾರವನ್ನು ನಾನೇ ಖುದ್ದಾಗಿ ನೋಡಿಕೊಳ್ಳುತ್ತೇನೆ, ನೂರಾರು ಸಮಸ್ಯೆಗಳು ಇವೆ ಕೆಲವರು ಅಂಗಡಿ ನಿರ್ಮಾಣ ಮಾಡಬೇಕು ಎನ್ನುತ್ತಾರೆ ದೇವಸ್ಥಾನದ ಅರ್ಚಕರಿಗೆ ಮನೆ ನಿರ್ಮಾಣ ಮಾಡಬೇಕು ವೈಜ್ಞಾನಿವಾಗಿ ಯಾವುದೇ ಸಮಸ್ಯೆ ಉಂಟಾಗದಂತೆ ದೇವಸ್ಥಾನ ಜೀರ್ಣೋದ್ದಾರಕ್ಕೆ ಕ್ರಮ ವಹಿಸಲಾಗುವುದು ಜೂನ್ 24 ರಂದು ಗುದ್ದಲಿಪೂಜೆ ನಡೆಸಲಾಗುವುದು ಮೊದಲು ಬೋರ್ ವೆಲ್ ಕೊರೆಸಿ ಅಲ್ಲೆ ಎಲ್ಲಾ ಅಧಿಕಾರಿಗಳು ಸೇರಿ ಜೀರ್ಣೋದ್ದಾರದ ರೂಪು ರೇಷೆಗಳ ಕುರಿತು ಚರ್ಚಿಸೋಣ.
>
> -ಕೊತ್ತೂರು ಜಿ ಮಂಜುನಾಥ್, ಶಾಸಕರು

# ಆಕ್ಷೇಪಣೆ ಸಲ್ಲಿಸಲು 15 ದಿನಗಳ ಗಡುವು–ಜಿಲ್ಲಾಧಿಕಾರಿ

ತುಮಕೂರು

ತುಮಕೂರು ಜಿಲ್ಲೆ ಕಂದಾಯ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗ್ರಾಮ ಆಡಳಿತ ಅಧಿಕಾರಿಗಳು/ ದ್ವಿತೀಯ ದರ್ಜೆ ಸಹಾಯಕರ ವೃಂದದ ನೌಕರರಿಗೆ ಪ್ರಥಮ ದರ್ಜೆ ಸಹಾಯಕರು/ಪ್ರಥಮ ದರ್ಜೆ ರಾಜಸ್ವ ನಿರೀಕ್ಷಕರ ವೃಂದದ ಹುದ್ದೆಗೆ ಮುಂಬಡ್ತಿ/ಪದೋನ್ನತಿ ನೀಡಲು ದಿನಾಂಕ:01/01/2026 ರಲ್ಲಿದಂತೆ ಗ್ರಾಮ ಆಡಳಿತ ಅಧಿಕಾರಿಗಳು ಮತ್ತು ದ್ವಿತಿಯ ದರ್ಜೆ ಸಹಾಯಕರ ವೃಂದದ ನೌಕರರ ಕರಡು ಸಂಯುಕ್ತ ಜೇಷ್ಠತಾ ಪಟ್ಟಿಯನ್ನು ಮೇ 9ರಂದು ಹೊರಡಿಸಲಾಗಿದ್ದು, ಸದರಿ ಜೇಷ್ಠತಾ ಪಟ್ಟಿಗೆ ಆಕ್ಷೇಪಣೆ ಇದ್ದಲ್ಲಿ ಕರಡು ಜೇಷ್ಠತಾ ಪಟ್ಟಿ ಪ್ರಕಟವಾದ ದಿನಾಂಕದಿಂದ 15 ದಿನಗಳೊಳಗಾಗಿ ಕರ್ತವ್ಯ ನಿರ್ವಹಿಸುತ್ತಿರುವ ಕಚೇರಿ ಮುಖ್ಯಸ್ಥರ ಮುಖಾಂತರ ಜಿಲ್ಲಾಧಿಕಾರಿ ಕಚೇರಿಗೆ ಸಲ್ಲಿಸುವಂತೆ ಕ್ರಮವಹಿಸಲು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಸೂಚಿಸಿದರು.

ಸರ್ಕಾರದ ಅಧಿಸೂಚನೆಯನ್ವಯ ಕರ್ನಾಟಕ ರಾಜ್ಯ ಕಂದಾಯ ಸೇವೆಗಳು(ವೃಂದ ಮತ್ತು ನೇಮಕಾತಿ) ನಿಯಮಗಳು 2026ನ್ನು ರಚಿಸಿ ರಾಜ್ಯ ಪತ್ರದಲ್ಲಿ ಪ್ರಕಟವಾಗಿರುತ್ತದೆ. ಕಂದಾಯ ಇಲಾಖೆಯ ಗ್ರಾಮ ಆಡಳಿತ ಅಧಿಕಾರಿಗಳು, ದ್ವಿತಿಯ ದರ್ಜೆ ಸಹಾಯಕರು, ಪ್ರ.ದ.ಸ / ರಾಜಸ್ವ ನಿರೀಕ್ಷಕರು ಸೇರಿದಂತೆ ವಿವಿಧ ವೃಂದದ ಅರ್ಹ ನೌಕರರಿಗೆ ಮುಂಬಡ್ತಿ ನೀಡುವ ಕುರಿತು ಕೂಡಲೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸರ್ಕಾರದಿಂದ ನಿರ್ದೇಶಿಸಿರುವ ಹಿನ್ನೆಲೆಯಲ್ಲಿ ಮಂಗಳವಾರ ಸಭೆ ನಡೆಸಿ ಈ ಮೇಲಿನಂತೆ ಅವರು ಸೂಚನೆ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ ಮತ್ತು ಕಚೇರಿಯ ಸಿಬ್ಬಂದಿಗಳು ಹಾಜರಿದ್ದರು.

# ದೇಸಿ ಕ್ರೀಡೆಗಳತ್ತ ಯುವಕರನ್ನು ಸೆಳೆಯಲು ತರಬೇತಿ ಕೇಂದ್ರ ಸ್ಥಾಪನೆ

ಕನಕಪುರ

ಭಾರತೀಯ ಕಲೆ, ಕ್ರೀಡೆ ಹಾಗೂ ಸಂಪ್ರದಾಯ ಗಳನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಪ್ರತಿಯೊಬ್ಬ ಶಿಕ್ಷಕ ಹಾಗೂ ಪೋಷಕರ ಮೇಲಿದೆ ಎಂದು ಪದ್ಮಶ್ರೀ ಪುರಸ್ಕೃತರಾದ ಸಾಹಸ ಕಲಾವಿದ ಹಾಸನ್ ರಘು ತಿಳಿಸಿದರು.

ನಗರದ ರೂರಲ್ ಕಾಲೇಜಿನ ಎಸ್.ಕರಿಯಪ್ಪ ಸಭಾಂಗಣದಲ್ಲಿ ತಾಲ್ಲೂಕು ದೈಹಿಕ ಶಿಕ್ಷಕರ ಸಂಘ, ಜಿಲ್ಲಾ ಭಾರತೀಯ ಶೈಲಿ ಕುಸ್ತಿ ಸಂಘ, ಜಿಲ್ಲಾ ಅಮೇಚೂರ್ ಕುಸ್ತಿ ಸಂಘದ ವತಿಯಿಂದ ಆಯೋಜಿಸಿದ್ದ ತಾಲ್ಲೂಕಿನ ರಾಷ್ಟ್ರ ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಿ ಸಾಧನೆ ಮಾಡಿದ ಮಕ್ಕಳ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಭಾಗಿಯಾಗಿ ಮಾತನಾಡಿದ ಅವರು, ಇಂದು ಸಮಾಜದಲ್ಲಿ ಭಾರತೀಯ ಕ್ರೀಡೆ, ಕಲೆ, ಸಂಸ್ಕೃತಿ ಕಣ್ಮರೆಯಾಗುತ್ತಿದ್ದು ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರದ ಗಮನಕ್ಕೆ ತಂದು ಕನಕಪುರ ನಗರದಲ್ಲಿ ದೇಶಿ ಕ್ರೀಡೆಗಳಾದ ಮಲ್ಲಕಂಬ, ಕತ್ತಿ ವರಸೆ ಸೇರಿದಂತೆ ದೇಸಿ ಕಲೆಗಳ ತರಬೇತಿ ಶಾಲೆಯನ್ನು ಆರಂಭಿಸಲಾಗುತ್ತಿದ್ದು ವಿದ್ಯಾರ್ಥಿಗಳು ಪೋಷಕರು ಹಾಗೂ ಶಿಕ್ಷಕರು ಇದರ ಕಡೆ ಗಮನ ಹರಿಸಿ ತರಬೇತಿ ಪಡೆದು ರಾಷ್ಟ್ರ ಮಟ್ಟದಲ್ಲಿ ಹೆಸರು, ಕೀರ್ತಿ ಗೊಳಿಸುವುದರ ಮೂಲಕ ದೇಸಿ ಕ್ರೀಡೆಗಳನ್ನು ಬೆಳಸಿ, ಪೋಷಿಸುವಂತೆ ತಿಳಿಸಿದರು.



ಹರಿಯಾಣದಲ್ಲಿ ನಡೆದ ಕುಸ್ತಿ ಪಂದ್ಯಾವಳಿಯಲ್ಲಿ ರಾಜ್ಯ ದಿಂದ ಭಾಗವಹಿಸಿ ಹಿಂದ್ ಕೇಸರಿ ಪ್ರಶಸ್ತಿಯನ್ನು ಪಡೆದ ತಾಲ್ಲೂಕಿನ ವಿದ್ಯಾರ್ಥಿ ಅಭಿಷೇಕ್ ಆರ್ ನ್ನು ನಗರದ ಅಯ್ಯಪ್ಪ ಸ್ವಾಮಿ ದೇವಾಲಯದಿಂದ ನಗರದಲ್ಲಿ

ಇಂದಿನ ಆದುನಿಕ ಜಗತ್ತಿನಲ್ಲಿ ನಮ್ಮ ಕಲೆ, ಸಂಸ್ಕೃತಿ ನಶಿಸುತ್ತಿದೆ, ಅದರಲ್ಲಿ ಕುಸ್ತಿ ಕಲೆ ಒಂದು ಇಂದು ಗರಡಿ ಮನೆಗಳು ಮುಚ್ಚಿವೆ ಇರುವ ಗರಡಿಮನೆಗಳಲ್ಲಿ ಕಲೆ ಕಲಿಯುವವರು ಕಡಿಮೆಯಾಗಿದೆ. ನಾಲ್ಕು ಗೋಡೆಗಳ ನಡುವೆ ಬೆಡ್‌ಗಳನ್ನು ಹಾಕಿ ಕುಸ್ತಿ ಕಲಿಸಲು ಮುಂದಾಗಿರುವ ವಿಜಯಕುಮಾರ್ ಸಾಧನೆ ಬಗ್ಗೆ ಮೆಚ್ಚಿಗೆ ವ್ಯಕ್ತ ಪಡಿಸಿದರು.

ಹಿಂದೂ ಸಂಘಟನೆ ಮುಖಂಡ ಪೈ.ನಾಗರಾಜ್, ಸಮಾಜಸೇವಕರಾದತಾಮಸಂದ್ರಪ್ರಕಾಶ್,ಮಲ್ಲಿಕಾರ್ಜುನ್, ರೈತ ಮುಖಂಡರಾದ ಚೀಲೂರು ಮುನಿರಾಜು, ಶಿವಸ್ವಾಮಿ, ಪೈ. ವಿಜಯಕುಮಾರ್, ಸತೀಶ್, ಕೃಷ್ಣಪ್ಪ, ಚಂದ್ರಶೇಖರ್,ಪೈ.ಮುತ್ತುರಾಜ್,ಶಿವರಾಜ್,ಅಜಯ್ ಹಿರಿಯ, ಕಿರಿಯ ಪೈಲ್ವಾನ್‌ಗಳು, ವಿದ್ಯಾರ್ಥಿಗಳು ಮತ್ತು ಪೋಷಕರು ಹಾಗೂ ದೈಹಿಕ ಶಿಕ್ಷಕರು ಈ ವೇಳೆ

# ಅರ್ಜಿ ಸಲ್ಲಿಸಲು ಜೂ. 30ರವರೆಗೆ ಅವಕಾಶ

ತುಮಕೂರು

2025–26ನೇ ಸಾಲಿನ ಶಾಲಾ ಮಾನ್ಯತೆ ನವೀಕರಣ ಮತ್ತು 2026–27ನೇ ಸಾಲಿನ ಶಾಲಾ ನೋಂದಣಿ ಮತ್ತು ಉನ್ನತೀಕರಣಕ್ಕೆ ಪ್ರಮಾಣ ಪತ್ರ ಪಡೆಯುವ ಸಲುವಾಗಿ ಕೆಲವು ನಿಯಮಗಳಿಗೆ ತಿದ್ದುಪಡಿ/ಬದಲಾವಣೆ ತಂದಿರುವುದರಿಂದ ಎಲ್ಲಾ ಖಾಸಗಿ ಶಾಲೆಗಳ ಮಾನ್ಯತೆ ನವೀಕರಣ ಪಡೆಯಲು ಶಾಲಾ ಆಡಳಿತ ಮಂಡಳಿ ಆನ್‌ಲೈನ್ ತಂತ್ರಾಂಶದ ಮೂಲಕ ಜೂನ್ 30ರವರೆಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

# ಜಿಲ್ಲಾ ಮಟ್ಟದ ವಿಶೇಷ ಸಾಂಸ್ಕೃತಿಕ ಮತ್ತು ಸಾಹಿತ್ಯ ಸ್ಪರ್ಧೆ

ಬೆಂಗಳೂರು

ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರವು ಪದವಿ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳಿಗಾಗಿ ಜಿಲ್ಲಾ ಮಟ್ಟದಲ್ಲಿ ವಿಶೇಷ ಸಾಂಸ್ಕೃತಿಕ ಮತ್ತು ಸಾಹಿತ್ಯಿಕ ಸ್ಪರ್ಧೆಗಳನ್ನು ಆಯೋಜಿಸಿದೆ.

ಶರಣ ಸಾಹಿತ್ಯ, ತತ್ವಪದ ಸಾಹಿತ್ಯ, ಕೀರ್ತನ ಸಾಹಿತ್ಯ ಹಾಗೂ ಅನುಭಾವ ಸಾಹಿತ್ಯದ ಕುರಿತು ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ "ಅಂತರ ಕಾಲೇಜು ಸಂಸ್ಕೃತಿ ಪುನಶ್ಚೇತನ ಶಿಬಿರ–ಸ್ಪರ್ಧೆ"ಯನ್ನು ಹಮ್ಮಿಕೊಳ್ಳಲಾಗಿದೆ.

ಪ್ರತಿ ವಿಭಾಗದಲ್ಲೂ ಗರಿಷ್ಠ 15 ಅರ್ಹ ವಿದ್ಯಾರ್ಥಿಗಳನ್ನು ಬಹುಮಾನಕ್ಕೆ ಆಯ್ಕೆ ಮಾಡಲಾಗುತ್ತದೆ. ಪ್ರಬಂಧ ರಚನೆ ವಿಜೇತರಿಗೆ ತಲಾ ರೂ.2,000/– ನಗದು ಬಹುಮಾನ, ಓದು–ವ್ಯಾಖ್ಯಾನ ವಿಜೇತರಿಗೆ ತಲಾ ರೂ.1,000/– ನಗದು ಬಹುಮಾನ ಹಾಗೂ ವೈಚಾರಿಕ ಭಾಷಣ ವಿಜೇತರಿಗೆ ತಲಾ ರೂ.1,000/– ನಗದು ಬಹುಮಾನ ನೀಡಲಾಗುವುದು.ಬೆಂಗಳೂರು ನಗರ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಕಾಲೇಜು ವಿದ್ಯಾರ್ಥಿಗಳಿಗೆ ಅರ್ಜಿ ಸಲ್ಲಿಸಲು 2026 ರ ಜೂನ್ 30 ಕೊನೆಯ ದಿನವಾಗಿದೆ. ಪ್ರಬಂಧ ಕಳುಹಿಸಲು 2026 ರ ಜುಲೈ 20 ಕೊನೆಯ ದಿನಾಂಕವಾಗಿದೆ. ಸ್ಪರ್ಧೆಯ ನಿಯಮಗಳು ಮತ್ತು ಅರ್ಜಿ ನಮೂನೆಯನ್ನು ಅಧಿಕೃತ ವೆಬ್‌ಸೈಟ್ kanakadasaresearchcenter.karnataka.gov.in ನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು. ಭರ್ತಿ ಮಾಡಿದ ಅರ್ಜಿಯನ್ನು ಅಧ್ಯಯನ ಕೇಂದ್ರಕ್ಕೆ ಇ–ಮೇಲ್, ಮುದ್ದಾಂ (ಖುದ್ದಾಗಿ) ಅಥವಾ ಕೊರಿಯರ್ ಮೂಲಕ ಕಳುಹಿಸಬಹುದಾಗಿದೆ.

ಅರ್ಜಿ ಕಳುಹಿಸಬೇಕಾದ ಇ–ಮೇಲ್: kanakaresearchcentre@gmail.com ಹಾಗೂ ಪ್ರಬಂಧಗಳನ್ನು ಈ ಇ–ಮೇಲ್: umamakamshankar@gmail.comಗೆ ಕಳುಹಿಸಬೇಕು.

ಹೆಚ್ಚಿನ ವಿವರಗಳಿಗಾಗಿ ಬೆಂಗಳೂರು ಜಿಲ್ಲಾ ಸಂಚಾಲಕರಾದ ಸುಮಾ ಸತೀಶ್ ಮೊಬೈಲ್: 94814 80220 ಅಥವಾ ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರದ ಕಚೇರಿ ದೂರವಾಣಿ ಸಂಖ್ಯೆ: 080– 22113147 ಅನ್ನು ಸಂಪರ್ಕಿಸಬಹುದಾಗಿದೆ ಎಂದು ತಿಳಿಸಿದೆ.


# ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕಾಗಿ ಆನ್‌ಲೈನ್ ಆಹ್ವಾನ

ತುಮಕೂರು

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿರುವ ಮೆಟ್ರಿಕ್ ನಂತರ(ಪಿ.ಯು.ಸಿ., ಸಮಾನಾಂತರ ಡಿಪ್ಲೋಮಾ, ಐ.ಟಿ.ಐ ಕೋರ್ಸ್ ವಿದ್ಯಾರ್ಥಿಗಳಿಗೆ ಮಾತ್ರ) ಬಾಲಕ/ಬಾಲಕಿಯರ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವ ಪ್ರವರ್ಗ–1, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ವಿದ್ಯಾರ್ಥಿಯ ಕುಟುಂಬದ ವಾರ್ಷಿಕ ವರಮಾನ 2.50ಲಕ್ಷ ಹಾಗೂ ಪ್ರವರ್ಗ–2ಎ, 2ಬಿ, 3ಎ, 3ಬಿ ವಿದ್ಯಾರ್ಥಿಯ ಕುಟುಂಬದ ವಾರ್ಷಿಕ ವರಮಾನ 1 ಲಕ್ಷ ರೂ. ಮಿತಿಯೊಳಗಿರಬೇಕು. ಅರ್ಹ ವಿದ್ಯಾರ್ಥಿಗಳು ಜೂನ್ 15ರೊಳಗಾಗಿ ತಮ್ಮ ಅರ್ಜಿಯನ್ನು ಜಾಲತಾಣ: https://shp.karnataka.gov.in/bcwd ಮೂಲಕ ಸಲ್ಲಿಸಬಹುದಾಗಿದೆ. ತಾಲ್ಲೂಕುವಾರು ವಿದ್ಯಾರ್ಥಿ ನಿಲಯಗಳ ವಿವರ, ವಿದ್ಯಾರ್ಥಿ ನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ, ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಜಾಲತಾಣ: https://bcwd.karnataka.gov.in/ ಅನ್ನು ಸಂಪರ್ಕಿಸಬಹುದಾಗಿದೆ. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ ವಿ–ಅಂಚೆ: bcwdhelpline@gmail.com ಮೂಲಕ ಅಥವಾ ಜಿಲ್ಲಾ/ ತಾಲ್ಲೂಕು ಮಟ್ಟದ ಇಲಾಖಾಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂ.ವಾ.ಸಂ.0816–2251736 ಅಥವಾ ಸಹಾಯವಾಣಿ ಸಂಖ್ಯೆ: 8050770004ನ್ನು ಸಂಪರ್ಕಿಸಬಹುದಾಗಿದೆ ಎಂದು ತುಮಕೂರು ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

# ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ಪರಿಶೀಲನೆಗೆ ವಾರದ ಸಭೆ: ಡಿಸಿ



ತುಮಕೂರು

ಜಿಲ್ಲೆಯ ವಿವಿಧ ಅಭಿವೃದ್ಧಿ ಕಾಮಗಾರಿಗಳ ಪ್ರಗತಿಯನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡುವ ಉದ್ದೇಶದಿಂದ ಜಿಲ್ಲಾ ಮಿಷನ್ ಟಾಸ್ಕ್ ಫೋರ್ಸ್ ಸಮಿತಿಯನ್ನು ರಚಿಸಲಾಗಿದ್ದು, ಸಮಿತಿಯ ಸದಸ್ಯರೊಂದಿಗೆ ಪ್ರತಿವಾರ ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆ ನಡೆಸಲಾಗುವುದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಸಚಿವರ ಅಧ್ಯಕ್ಷತೆಯಲ್ಲಿ ಪ್ರತಿ ತಿಂಗಳು ಒಮ್ಮೆ ಸಮಿತಿ ಸಭೆ ನಡೆಸಲಾಗುವುದು. ನಾಳೆಯಿಂದ ಸಮಿತಿ ಸದಸ್ಯರು ತಮಗೆ ಹಂಚಿಕೆ ಮಾಡಲಾದ ವಿಧಾನಸಭಾ ಕ್ಷೇತ್ರವಾರು ಸಭೆಗಳನ್ನು ನಡೆಸಿ, ಪೂರ್ಣಗೊಂಡಿರುವ ಕಾಮಗಾರಿಗಳ ವಿವರವಾದ ಪಟ್ಟಿಯನ್ನು ಸಿದ್ಧಪಡಿಸಬೇಕು ಎಂದು ಸೂಚಿಸಿದರು.

ಇಲಾಖಾವಾರು ಕಾಮಗಾರಿಗಳ ಪಟ್ಟಿಯನ್ನು ಪರಿಶೀಲಿಸಿ ಅಗತ್ಯ ಮಾಹಿತಿಯನ್ನು ಸಂಗ್ರಹಿಸಿ ವರದಿಯನ್ನು ಜಿಲ್ಲಾಧಿಕಾರಿಗಳಿಗೆ ಸಲ್ಲಿಸಬೇಕು. ಅಲ್ಲದೆ, ಒಂದು ತಿಂಗಳು, ಮೂರು ತಿಂಗಳು, ಆರು ತಿಂಗಳು ಹಾಗೂ ವರ್ಷಾಂತ್ಯದೊಳಗೆ ಪೂರ್ಣಗೊಳ್ಳಬಹುದಾದ ಕಾಮಗಾರಿಗಳ ಪ್ರತ್ಯೇಕ ಪಟ್ಟಿಯನ್ನು ಸಿದ್ಧಪಡಿಸುವಂತೆ ಸೂಚಿಸಿದರು. ಸಿಎಂಐಡಿಪಿ ಯೋಜನೆಯಡಿ ಮಂಜೂರಾಗಿರುವ ಆದರೆ ಇನ್ನೂ ಆರಂಭವಾಗದ ಕಾಮಗಾರಿಗಳನ್ನು ತುರ್ತಾಗಿ ಪ್ರಾರಂಭಿಸಲು ಸೂಚನೆ ನೀಡಿದ ಜಿಲ್ಲಾಧಿಕಾರಿಗಳು, ತಿಪಟೂರು ಉಪ ವಿಭಾಗದಲ್ಲಿ ಹೆಚ್ಚಿನ ಸಂಖ್ಯೆಯ ಕಾಮಗಾರಿಗಳು ಬಾಕಿ ಇರುವುದರಿಂದ ಅವುಗಳನ್ನು ಆದ್ಯತೆಯ ಮೇರೆಗೆ ಆರಂಭಿಸಿ ಪ್ರಗತಿ ವರದಿಯನ್ನು ಸಲ್ಲಿಸುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಜಿಲ್ಲಾ ಮಿಷನ್ ಟಾಸ್ಕ್ ಫೋರ್ಸ್ ಸಮಿತಿಯ ಸದಸ್ಯರು ಉಪಸ್ಥಿತರಿದ್ದರು.

# ಭ್ರಷ್ಟಾಚಾರಕ್ಕೆ ಉನ್ನತ ಮಟ್ಟದ ಅಧಿಕಾರಿಗಳಿಂದ ತನಿಖೆಗೆ ಆಗ್ರಹ

ಕೋಲಾರ

ದಲಿತ ವಿರೋಧಿ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಶ್ರೀನಿವಾಸನ್ ಅವರ ನಿಯೋಜನೆಯನ್ನು ರದ್ದುಮಾಡಿದ್ದು ದಲಿತ ಸಂಘಟನೆಗಳ ಸಂಯುಕ್ತ ರಂಗದ ಹೋರಾಟಕ್ಕೆ ಸಂದ ಜಯವಾಗಿದೆ ಎಂದು ಮಂಗಳವಾರ ನಗರದ ನಚಿಕೇತನ ನಿಲಯದಲ್ಲಿ ಸಂಘಟನೆಯ ಮುಖಂಡರು ಹರ್ಷ ವ್ಯಕ್ತಪಡಿಸಿ ಶ್ರೀನಿವಾಸನ್ ವಿರುದ್ದದ ಇಲಾಖೆಯಲ್ಲಿನ ಭ್ರಷ್ಟಾಚಾರವನ್ನು ಕೂಡಲೇ ಉನ್ನತಮಟ್ಟದ ಅಧಿಕಾರಿಗಳಿಂದ ತನಿಖೆ ನಡೆಸುವಂತೆ ಒತ್ತಾಯಿಸಿದರು.

ದಮನಿತರ ಸೇವಾ ಸಮಿತಿಯ ರಾಜ್ಯ ಅಧ್ಯಕ್ಷ ಮೇಡಿಹಾಳ ಮುನಿಅಂಜಿನಪ್ಪ ಮಾತನಾಡಿ ಜಾಗೃತಿ ಸಮಿತಿಯ ನಿಯಮಗಳನ್ನು ಉಲ್ಲಂಘಿಸಿ ಕಾನೂನು ಬಾಹಿರವಾಗಿ ಆಯ್ಕೆ ಮಾಡಿದ ದಲಿತ ವಿರೋಧಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಶ್ರೀನಿವಾಸನ್ ಅವರ ನಿಯೋಜನೆ ರದ್ದು ಮಾಡಿದ್ದು ಜಿಲ್ಲೆಯ ದಲಿತ ಸಂಘಟನೆಗಳ ಶಕ್ತಿಗೆ ಸಂದ ಜಯವಾಗಿದೆ ಇಲಾಖೆಗೆ ಹೊಸದಾಗಿ ನೇಮಕವಾಗಿರುವ ನೂತನ ಅಧಿಕಾರಿ ಜವಾಬ್ದಾರಿ ತೆಗೆದುಕೊಳ್ಳಬಾರದು ಎಂದು ಕೆಲವರು ಬೆದರಿಕೆ, ಧಮ್ಕಿ ಹಾಕಿದ್ದು ಅಂತರವನ್ನು ಪತ್ತೆ ಹಚ್ಚಿ ಅವರ ವಿರುದ್ದ ಕಾನೂ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ದಲಿತರ ಬಗ್ಗೆ ಕಾಳಜಿ, ಗೌರವ ಇಲ್ಲದ ಶ್ರೀನಿವಾಸನ್ ನಿಯೋಜನೆ ರದ್ದು ಮಾಡಿದ ಅಧಿಕಾರಿಗಳಿಗೆ ಹಾಗೂ ಸರ್ಕಾರಕ್ಕೆ ಧನ್ಯವಾದಗಳು, ತೋಟಗಾರಿಕೆ ಇಲಾಖೆಯಿಂದ ಪ್ರಭಾರಿಯಾಗಿ ಸಮಾಜ ಕಲ್ಯಾಣ ಇಲಾಖೆಗೆ ನಿಯೋಜನೆಯಾಗಿ ಬಂದಾಗಿನಿಂದ ದಲಿತರ ಕುಂದುಕೊರತೆಗಳನ್ನು ನಿವಾರಿಸಲಿಲ್ಲ ರಾಜಕೀಯ ಪಕ್ಷಗಳ ಏಜೆಂಟ್ ರೀತಿಯಲ್ಲಿ ಕೆಲಸ ಮಾಡಿದ್ದಾರೆ ಅವರು ಯಾವತ್ತೂ ದಲಿತರ ಪರವಾಗಿ ಇರಲಿಲ್ಲ ಜಾಗೃತಿ ಸಮಿತಿ ಆಯ್ಕೆಯ ನಿಯಮಗಳನ್ನು ಉಲ್ಲಂಘನೆ ಮಾಡಿ ಆಯ್ಕೆ ಮಾಡಿದ ಅಧಿಕಾರಿಯಿಂದ ದಲಿತರ ಅಭಿವೃದ್ಧಿ ಸಾಧ್ಯವಿಲ್ಲ ಎಂದರು.

ದಲಿತ ಸಂಘಟನೆಗಳ ಸಂಯುಕ್ತ ರಂಗದ ಅಧ್ಯಕ್ಷ ಡಿಪಿಎಸ್ ಮುನಿರಾಜು ಮಾತನಾಡಿದರು.

ಈ ಸಂದರ್ಭದಲ್ಲಿ ದಲಿತ ಸಂಘಟನೆಗಳ ಮುಖಂಡರಾದ ದಲಿತ್ ನಾರಾಯಣಸ್ವಾಮಿ, ರಾಜಕುಮಾರ್, ಮಂಜುನಾಥ್, ಮತ್ತಿಕುಂಟೆ ಕೃಷ್ಣ, ಚೇತನ್ ಬಾಬು, ಹರಳಕುಂಟೆ ರಾಜು, ಗಿರಿಜಾ, ಗಂಗಮ್ಮನಪಾಳ್ಯ ಚಂದ್ರು, ಮುಂತಾದವರು ಇದ್ದರು.

# ಇ-ಚಲನ್ ಬೇಗ ಪಾವತಿಸಿ ರಿಯಾಯ್ತಿ ಪಡೆಯಲು ಅಧಿಕೃತ ಆದೇಶ

ಬೆಂಗಳೂರು

ರಾಜ್ಯದ ವಾಹನ ಸವಾರರಿಗೆ ರಾಜ್ಯ ಸರ್ಕಾರವು ಸಂಚಾರ ನಿಯಮ ಉಲ್ಲಂಘನೆಗೆ ಸಂಬಂಧಿಸಿದಂತೆ ಬಾಕಿ ಉಳಿಸಿಕೊಂಡಿರುವ ಇ–ಚಲನ್ ದಂಡದ ಮೊತ್ತ ಪಾವತಿಸಲು ಸರ್ಕಾರವು ಮತ್ತೊಮ್ಮೆ ಶೇಕಡಾ 50 ರಷ್ಟು ರಿಯಾಯಿತಿಯನ್ನು ಘೋಷಿಸಿದೆ. ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಟಿಡಿ 27 ಟಿಡಿಟಿ 2023 ರ ಅನ್ವಯ, ಮೇ 2026 ರ ಮೊದಲಿನ ಅವಧಿಯವರೆಗೆ ಪೊಲೀಸ್ ಇಲಾಖೆಯಲ್ಲಿ ದಾಖಲಾಗಿರುವ ಇ–ಚಲನ್ ಪ್ರಕರಣಗಳ ಬಾಕಿ ದಂಡದ ಮೊತ್ತಕ್ಕೆ ಈ ರಿಯಾಯಿತಿ ಅನ್ವಯವಾಗಲಿದೆ.

ಬಾಕಿ ಇರುವ ದಂಡದ ಮೊತ್ತವನ್ನು ಶೇ. 50 ರಷ್ಟು ರಿಯಾಯಿತಿಯೊಂದಿಗೆ ಪಾವತಿಸಲು ನಿಯಮಿತ ದಿನಾಂಕಗಳನ್ನು ನಿಗದಿಪಡಿಸಲಾಗಿದೆ. ಈ ಸೌಲಭ್ಯವು 2026ರ ಜೂನ್ 21 ರಿಂದ ಜುಲೈ 10 ರವರೆಗೆ ಜಾರಿಯಲ್ಲಿರುತ್ತದೆ.

ಸಾರ್ವಜನಿಕರು ಈ ನಿಗದಿತ ಅವಧಿಯೊಳಗೆ ಶೇ. 50 ರಷ್ಟು ದಂಡವನ್ನು ಮಾತ್ರ ಪಾವತಿಸುವ ಮೂಲಕ ತಮ್ಮ ವಾಹನಗಳ ಮೇಲಿರುವ ಸಂಚಾರ ನಿಯಮ ಉಲ್ಲಂಘನೆಯ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ.

ವಾಹನಗಳ ಮೇಲೆ ಬಾಕಿ ಇರುವ ದಂಡದ ವಿವರಗಳನ್ನು ಪರಿಶೀಲಿಸಲು ಮತ್ತು ಹಣ ಪಾವತಿ ಮಾಡಲು ಕರ್ನಾಟಕ ಸ್ಟೇಟ್ ಪೊಲೀಸ್ (ಕೆಎಸ್‌ಪಿ) ಪ್, ಬಿಟಿಪಿ–ಅಸ್ತ್ರಂ ಆ್ಯಪ್, ಹತ್ತಿರದ ಸಂಚಾರ ಪೊಲೀಸ್ ಠಾಣೆಗಳು, ಸಂಚಾರ ನಿರ್ವಹಣಾ ಕೇಂದ್ರ ಮತ್ತು ಕರ್ನಾಟಕ ಒನ್ / ಬೆಂಗಳೂರು ಒನ್ ವೆಬ್‌ಸೈಟ್‌ಗಳಲ್ಲಿ ಪರಿಶೀಲಿಸಿ, ಪಾವತಿಸಬಹುದಾಗಿದೆ.

ಸಾರ್ವಜನಿಕರು ಸರ್ಕಾರ ನೀಡಿರುವ ಈ ಸುವರ್ಣ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಎಂದು ಬೆಂಗಳೂರಿನ ಪೊಲೀಸ್ ಮಹಾನಿರ್ದೇಶಕರು ಮತ್ತು ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್ ಅವರು ತಿಳಿಸಿದ್ದಾರೆ.

# ಅವೈಜ್ಞಾನಿಕ ತಿರುವುಗಳಿಂದ ಹೆಚ್ಚುತ್ತಿರುವ ಅಪಘಾತಗಳು; ಉಗ್ರ ಹೋರಾಟದ ಎಚ್ಚರಿಕೆ

ಕುಣಿಗಲ್

ಕುಣಿಗಲ್–ತುಮಕೂರು ರಾಜ್ಯ ಹೆದ್ದಾರಿ 33 ರಸ್ತೆಯು ಅವೈಜ್ಞಾನಿಕವಾಗಿ ಕೂಡಿರುವುದರಿಂದ ಹೆಚ್ಚಿನ ಅಪಘಾತಗಳು ಸಂಭವಿಸುತ್ತಿರುವುದರಿಂದ ಕೂಡಲೇ ರಾಜ್ಯ ಹೆದ್ದಾರಿ ಹಾಗೂ ಲೋಕೋಪಯೋಗಿ ಇಲಾಖೆಯು ರಸ್ತೆ ಅಗಲೀಕರಣ ಕೈಗೊಳ್ಳುವ ಮೂಲಕ ಸುರಕ್ಷಿತ ಪ್ರಯಾಣಕ್ಕೆ ಅನುವು ಮಾಡಬೇಕು ಇಲ್ಲದಿದ್ದರೆ ಉಗ್ರ ಹೋರಾಟ ಮಾಡಲಾಗುವುದು ಎಂದು ಕರ್ನಾಟಕ ರಾಜ್ಯ ರೈತ ಸಂಘ ರೈತಪರ್ವ ರಾಜ್ಯಾಧ್ಯಕ್ಷ ಅರುಣ್ ಕುಮಾರ್ ಒತ್ತಾಯ ಪಡಿಸಿದರು.

ಪಟ್ಟಣದ ತುಮಕೂರು ರಸ್ತೆಯ ಅಯ್ಯಪ್ಪ ಸ್ವಾಮಿಯ ದೇವಸ್ಥಾನ ತಿರುವಿನಿಂದ ವಡ್ಡರ ಕುಪ್ಪೆ ಗ್ರಾಮದವರೆಗೆ ರಸ್ತೆಯು ಅವೈಜ್ಞಾನಿಕವಾದ ಹಲವು ತಿರುವುಗಳಿಂದ ಕೂಡಿದ್ದು ಈ ರಸ್ತೆಯಲ್ಲಿ ದಿನ ನಿತ್ಯ ಸಾವಿರಾರು ವಾಹನಗಳು ಸಂಚರಿಸುವ ಮೂಲಕ ಹೆಚ್ಚಿನ ಸಂಖ್ಯೆಯಲ್ಲಿ ಅಪಘಾತಗಳು ಸಂಭವಿಸಿ ಸಾವು ನೋವುಗಳು ಉಂಟಾಗುತ್ತಿವೆ ಕೂಡಲೇ ರಾಜ್ಯ ಹೆದ್ದಾರಿ ಹಾಗೂ ಲೋಕೋಪಯೋಗಿ ಇಲಾಖೆಗಳು ರಸ್ತೆ ಅಗಲೀಕರಣ ಕೈಗೊಳ್ಳುವ ಜೊತೆಗೆ ಅಪಘಾತ ವಲಯಗಳನ್ನು ಗುರುತಿಸಿ ವಾಹನಗಳ ವೇಗವನ್ನು ನಿಯಂತ್ರಿಸಲು ಹಂಪ್‌ಗಳನ್ನು ಅಳವಡಿಸಬೇಕು ಎಂದು ಅಧಿಕಾರಿಗಳಿಗೆ ಒತ್ತಾಯಿಸಿದರು ಕೂಡಲೇ ಕೆಲಸಗಳನ್ನು ಕೈಗೊಳ್ಳಬೇಕು ಇಲ್ಲದಿದ್ದರೆ ಉಗ್ರ ಹೋರಾಟವನ್ನು ಮಾಡುವ ಎಚ್ಚರಿಕೆ ನೀಡಿದರು.



ರಾಜ್ಯಾದ್ಯಂತ ಸರ್ವೆ ಇಲಾಖೆಯ ಗುತ್ತಿಗೆ ನೌಕರರು ಅನಿರ್ದಿಷ್ಟಾವಧಿ ಮುಷ್ಕರವನ್ನು ಕೈಗೊಂಡಿದ್ದಾರೆ ಆದ್ದರಿಂದ ರೈತರ ಜಮೀನುಗಳ ಸಾವಿರಾರು ಸರ್ವೆ ಮಾಡಲು ಸಲ್ಲಿಸಿದ್ದ ಅರ್ಜಿಗಳು ವಿಲೇವಾರಿಯಾಗದೆ ದಿನನಿತ್ಯ ನೂರಾರು ರೈತರು ಸರ್ವೆ ಇಲಾಖೆಗೆ ಅಲೆಯುತ್ತಿದ್ದಾರೆ ಮುಂಗಾರು ಮಳೆ ಶುರುವಾಗಿದ್ದು ರೈತರು ಒಕ್ಕಣೆ ಮಾಡುವುದನ್ನು ಬಿಟ್ಟು ಕಚೇರಿಗೆ ಅಲೆಯುವಂತಾಗಿದೆ ಇದರಿಂದ ರೈತರ ಸರ್ವೆ ಸಮಸ್ಯೆಗಳನ್ನು ಶೀಘ್ರವೇ ಬಗೆಹರಿಸಲು ಅಧಿಕಾರಿಗಳು ರಾಜ್ಯ ಸರ್ಕಾರ ತಿಳಿಸಿ ಪರ್ಯಾಯ ಸರ್ವೆ ನೌಕರರನ್ನು ನೇಮಕ ಮಾಡುವಂತೆ ಒತ್ತಾಯಪಡಿಸಿದರು.

ಜಿಲ್ಲಾ ರೈತ ಪರ್ವ ಸಂಘದ ಅಧ್ಯಕ್ಷ ಮುನಿಯಪ್ಪ ಮಾತನಾಡಿ ಈಗಾಗಲೇ ಲೋಕೋಪಯೋಗಿ ಇಲಾಖೆ ಹಾಗು ರಾಜ್ಯ ಹೆದ್ದಾರಿಯ ಅಧಿಕಾರಿಗಳಿಗೆ ಮನವಿ ಮಾಡಿದ್ದು ಈ ಪ್ರದೇಶವನ್ನ ಅಪಘಾತ ವಲಯವನ್ನಾಗಿ ಗುರುತಿಸಿ ಅಲ್ಲಿ ರಸ್ತೆ ಅಗಲೀಕರಣ ಕೈಗೊಳ್ಳದಿದ್ದರೆ ಕಚೇರಿಯ ಮುಂದೆ ಪ್ರತಿಭಟಿಸುವ ಬೆದರಿಕೆ ಹಾಕಿದರು.

ಪ್ರಧಾನ ಕಾರ್ಯದರ್ಶಿ ಸತೀಶ್ ಮಾತನಾಡಿ ವಡ್ಡರಕುಪ್ಪೆ, ಕುರುಡಿಹಳ್ಳಿ, ಗೇಟ್, ಕೊತ್ತಗೆರೆ ಸೇರಿದಂತೆ ಅಯ್ಯಪ್ಪ ದೇವಸ್ಥಾನ ಬಳಿ ಹಮ್ಸ್ ಗಳನ್ನು ನಿರ್ಮಿಸಿದರೆ ಅಪಘಾತವನ್ನು ತಪ್ಪಿಸಬಹುದಾಗಿದೆ ಶೀಘ್ರವೇ ಹಂಸ್ ಗಳನ್ನು ಅಳವಡಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಜೆ ಎಂ ಪುರುಷೋತ್ತಮ್, ಸುನಿಲ್, ರಘು, ಜಿ.ಕೆಎಸ್. ಮಂಜಣ್ಣ, ಕುಮಾರ್ ಭಾಗವಹಿಸಿದ್ದರು.

# ಗಂಗಮ್ಮ-ಸಲ್ಲಾಪುರಮ್ಮ ದೇವಿ ವಾರ್ಷಿಕೋತ್ಸವ



ಬೇತಮಂಗಲ

ಇಲ್ಲಿಗೆ ಸಮೀಪದ ಬೆಟ್ಕೂರು ಗ್ರಾಮದ ಗಂಗಮ್ಮ-ಸಲ್ಲಾಪುರಮ್ಮ ದೇವಿ ದೇವಸ್ಥಾನದ ವಾರ್ಷಿಕೋತ್ಸವದ ಅಂಗವಾಗಿ ಶಾಸಕಿ ರೂಪಕಲಾ ದೇವಸ್ಥಾನಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿ ದೇವರ ದರ್ಶನ ಪಡೆದರು.

ವಾರ್ಷಿಕೋತ್ಸವದ ಅಂಗವಾಗಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ವಿದ್ಯುತ್ ದೀಪಲಂಕಾರ ಅಳವಡಿಸಲಾಗಿತ್ತು ಹಾಗೂ ದೇವಸ್ಥಾನವನ್ನು ವಿವಿಧ ಬಗೆಯ ಹೂವುಗಳಿಂದ ಸಿಂಗರಿಸಲಾಗಿತ್ತು. ಗ್ರಾಮದಲ್ಲಿ ಹಬ್ಬದ ವಾತಾವರಣ ಕಂಗೊಳಿಸುತಿತ್ತು.

ಶಾಸಕಿ ರೂಪಕಲಾ ಮಾತನಾಡಿ ಗ್ರಾಮದಲ್ಲಿ ಒಗ್ಗಟ್ಟಿದ್ದರೆ ಮಾತ್ರ ಇಂತಹ ದೈವ ಕಾರ್ಯಗಳನ್ನು ವಿಜೃಂಭಣೆಯಿಂದ ಆಚರಿಸಲು ಸಾಧ್ಯವಾಗುತ್ತದೆ, ಗ್ರಾಮೀಣ ಭಾಗದ ಇಂತಹ ಸಾಂಪ್ರದಾಯಿಕ ಹಬ್ಬಗಳು ನಮ್ಮ ಸಂಸ್ಕೃತಿಯನ್ನು ಜೀವಂತವಾಗಿರಿಸುತ್ತವೆ. ಜನರಲ್ಲಿ ಒಗ್ಗಟ್ಟು ಮತ್ತು ಸೌಹಾರ್ದತೆಯನ್ನು ಮೂಡಿಸುತ್ತವೆ. ಶ್ರೀ ಗಂಗಮ್ಮ ಹಾಗೂ ಸಲ್ಲಾಪುರಮ್ಮ ದೇವಿಯು ಕ್ಷೇತ್ರದ ಎಲ್ಲಾ ಜನರಿಗೂ ಆಯುಷ್ಯ, ಆರೋಗ್ಯ ಮತ್ತು ನೆಮ್ಮದಿಯನ್ನು ಕರುಣಿಸಲಿ. ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ತಾಯಿ ಆಶೀರ್ವಾದ ನೀಡಲಿ ಎಂದು ಪ್ರಾರ್ಥಿಸಿದರು. ಗ್ರಾಮಸ್ಥರು ಮಾತನಾಡಿ, ಗ್ರಾಮದ ಅಭಿವೃದ್ಧಿಗೆ ಅಗತ್ಯವಿರುವ ಸಮುದಾಯದ ಭವನ ನಿರ್ಮಾಣದ ಬೇಡಿಕೆಯನ್ನು ಶಾಸಕಿಯವರ ಮುಂದಿಟ್ಟರು. ಗ್ರಾಮಸ್ಥರ ಮನವಿಗೆ ಸ್ಪಂದಿಸಿದ ಶಾಸಕಿ ರೂಪಕಲಾ, ಸಮುದಾಯ ಭವನ ನಿರ್ಮಾಣಕ್ಕೆ ಅಗತ್ಯ ಕ್ರಮ ಕೈಗೊಂಡು ಕಲ್ಪಿಸಿಕೊಡುವುದಾಗಿ ಭರವಸೆ ನೀಡಿದರು.

ಗಂಗಮ್ಮ ಹಾಗೂ ಸಲ್ಲಾಪುರಮ್ಮ ಊರ ಹಬ್ಬದ ಪ್ರಯುಕ್ತ ಶಾಸಕಿ ರೂಪಕಲಾರಿಂದ ರಸಮಂಜರಿ(ಆರ್ಕೆಷ್ಟ್ರಾ) ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಈ ಸಂದರ್ಭದಲ್ಲಿ ಮುಖಂಡರಾದ ಆಂಜಪ್ಪ, ಶ್ರೀನಿವಾಸ್ ಗೌಡ, ಆನಂದ ಗೌಡ, ಮುನೇಗೌಡ, ಗಂಗರಾಜು, ಗಂಗಿರೆಡ್ಡಿ, ಕಾರಿ ಪ್ರಸನ್ನ, ಸುರೇಂದ್ರ ಗೌಡ, ಪದ್ಮನಾಭರೆಡ್ಡಿ, ಸೇರಿದಂತೆ ಗ್ರಾಮಸ್ಥರು ಹಾಗೂ ಉಪಸ್ಥಿತರಿದ್ದರು.

# ಶ್ರೀ ಶಂಕರ ಸ್ತೋತ್ರ ಪಾಠಗಳ ಆರಂಭ

ಕೋಲಾರ

ನಗರದ ಕೋಲಾರ ಶೃಂಗೇರಿ ಶ್ರೀಶಂಕರ ಮಠದಲ್ಲಿ ಇದೇ ಗುರುವಾರ ಜೂ.11 ರ ಸಂಜೆ 6 ರಿಂದ 7 ಗಂಟೆವರೆಗೆ ಶಾಂಕರ ಸ್ತೋತ್ರಗಳ ಪಾಠ ಪುನರಾರಂಭವಾಗಲಿದೆ.

ಐದು ವರ್ಷ ಮೇಲ್ಪಟ್ಟ ಹದಿನೈದನೇ ವಯೋಮಾನದವರೆಗಿನ ಮಕ್ಕಳು ಭಾಗವಹಿಸಬಹುದು. ಲಿಂಗ, ಧರ್ಮ, ಜಾತಿ ವಯೋಮಾನಗಳ ಅಂತರವಿಲ್ಲದೆ ಎಲ್ಲರಿಗೂ ಶ್ರೀಶಾಂಕರ ಸ್ತೋತ್ರ ಮತ್ತು ಭಗವದ್ಗೀತೆ ಕಲಿಯುವ ಅವಕಾಶವಿದೆ.

ಮಕ್ಕಳಲ್ಲಿ ಸಂಸ್ಕಾರ-ಸಂಸ್ಕೃತಗಳ ಅರಿವು ಮೂಡಿಸಲು ಮತ್ತು ನಮ್ಮ ಭವ್ಯಪರಂಪರೆಯ ಪರಿಚಯ ಮಾಡಿಸಲು ಪೋಷಕರಿಗೆ ಈ ತರಗತಿಗಳು ಸದವಕಾಶವಾಗಿದೆ.

ನಗರದ ಸಾರ್ವಜನಿಕರು ಈ ತರಗತಿಗಳ ಸದುಪಯೋಗ ಪಡೆಯಲು ಶ್ರೀಶಂಕರ ಸೇವಾ ಟ್ರಸ್ಟ್ ಪರವಾಗಿ ಅಧ್ಯಕ್ಷ ಡಾ. ಎಂ ವಿ ಜಯರಾಂ ಮತ್ತು ಶ್ರೀಮಠದ ಧರ್ಮಾಧಿಕಾರಿ ಜೆ. ಎನ್. ರಾಮಕೃಷ್ಣ ಪತ್ರಿಕಾ ಪ್ರಕಟಣೆಯಲ್ಲಿ ಕೋರಿದ್ದಾರೆ. ಮಾಹಿತಿಗಾಗಿ ವ್ಯವಸ್ಥಾಪಕರನ್ನು 99452 96133 ಸಂಪರ್ಕಿಸಬಹುದು.

# 'ಕೃಷ್ಣಸಂಧಾನ' ಪೌರಾಣಿಕ ನಾಟಕ

ಕೋಲಾರ

ತಾಲ್ಲೂಕಿನ ಅರಾಭಿಕೊತ್ತನೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಚೆಲುವನಹಳ್ಳಿ ಗ್ರಾಮದಲ್ಲಿ ಜೂ.12 ರ ಶುಕ್ರವಾರ ರಾತ್ರಿ 8-30 ಗಂಟೆಗೆ ಶ್ರೀಕೃಷ್ಣ ಸಂಧಾನ ಎಂಬ ಕನ್ನಡ ಪೌರಾಣಿಕ ನಾಟಕ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ.

ನಾಟಕವನ್ನು ಡಿಐಜಿಪಿ ದೇವರಾಜ್ ಕೋಮುಲ್ ನಿರ್ದೇಶಕ ನಾಗರಾಜಪ್ಪ ಉದ್ಘಾಟಿಸಲಿದ್ದು, ದೊಡ್ಡಬೊಮ್ಮನಹಳ್ಳಿಯ ಶ್ರೀಬಾಲಾಜಿ ಎಲ್ಇಡಿ ಡ್ರಾಮಾ ಸೀನ್ಸ್‌ನ ರಂಗಸಜ್ಜಿಕೆಯಡಿ ಅನುಭವಿ ಕಲಾವಿದರಿಂದ ನಾಟಕ ಪ್ರದರ್ಶನಗೊಳ್ಳಲಿದೆ.

ನಾಟಕವನ್ನು ಸಂಗೀತ ನಿರ್ದೇಶಕ ಮಾಲೂರು ನಾಗರಾಜ್ ನಿರ್ದೇಶಿಸಿದ್ದು, ವಿವಿಧ ಪಾತ್ರಗಳಲ್ಲಿ ವಿಶ್ವನಾಥ್, ಎಂ.ವೆಂಕಟೇಶಪ್ಪ, ಪ್ರೌಢಶಾಲಾ ಮುಖ್ಯಶಿಕ್ಷಕ ರಮೇಶ್‌ಗೌಡ, ಜಿ.ವಿನಯ್, ಎನ್. ತಿಮ್ಮರಾಜು, ಎಂ.ನಾರಾಯಣಸ್ವಾಮಿ, ನಾರಾಯಣಸ್ವಾಮಿ, ಎನ್.ನಾಗರಾಜಪ್ಪ, ಅಪ್ಪೋಜಪ್ಪ, ಆಟೋ ಮಂಜುನಾಥ್, ಶಿಕ್ಷಕ ಕೃಷ್ಣಪ್ಪ, ಲೈಲಾಂಡ್ ಮಂಜುನಾಥ್, ಚೌಡಪ್ಪ, ಡಿ.ವೆಂಕಟೇಶಪ್ಪ, ಹರ್ಷವರ್ಧನ್, ಎನ್.ಸೋಮಶೇಖರ್, ಜಿ.ಗೋಪಾಲರೆಡ್ಡಿ ವಿವಿಧ ಪಾತ್ರಗಳಲ್ಲಿ ನಟಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಹಿರಿಯ ಕಲಾವಿದ ಮದ್ದೇರಿ ಮುನಿರೆಡ್ಡಿ, ಗ್ರಾ.ಪಂ ಮಾಜಿ ಸದಸ್ಯೆ ಪವಿತ್ರ, ಮಾಜಿ ಅಧ್ಯಕ್ಷ ಎಸ್.ರಾಜಣ್ಣ, ಮಾಜಿ ಸದಸ್ಯರಾದ ನಂಜುಂಡೇಗೌಡ ಗೋವಿಂದಗೌಡ, ಗೋಪಾಲಪ್ಪ, ತಿಮ್ಮೇಗೌಡ, ಬಿ.ಪಾಪೇಗೌಡ, ಕುಂಬಾರಹಳ್ಳಿ ಮುನಿಯಪ್ಪ, ಅಮರೇಶ್, ಮುನಿಶಾಮಪ್ಪ, ಕೃಷ್ಣಪ್ಪ, ಮುನಿರೆಡ್ಡಿ ಮತ್ತಿತರರು ಉಪಸ್ಥಿತರಿರುವರು.

# ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ

ರಾಮನಗರ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ (ರಿ), ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಶಾಲಾ ಶಿಕ್ಷಣ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಹಯೋಗದೊಂದಿಗೆ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ-2026 ಕಾರ್ಯಕ್ರಮವನ್ನು ಇದೇ ಜೂ. 12ರ ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ನಗರದ ಜಿಲ್ಲಾ ಕ್ರೀಡಾಂಗಣದಿಂದ ಜಿಲ್ಲಾ ಪಂಚಾಯತ್ ಭವನದ ವರೆಗೆ ಜಾಗೃತಿ ಜಾಥಾ ಮತ್ತು ಅರಿವು ಕಾರ್ಯಕ್ರಮ ಆಯೋಜಿಸಲಾಗಿದೆ. ನಂತರ ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾ ಪಂಚಾಯತ್ ಭವನದಲ್ಲಿ ವೇದಿಕೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ನ್ಯಾ. ಎಂ.ಎಚ್. ಅಣ್ಣಯ್ಯನವರ ಅವರು ಜಾಥಾ ಕಾರ್ಯಕ್ರಮವನ್ನು ಉದ್ಘಾಟಿಸುವರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್. ಶ್ರೀನಿವಾಸ್‌ಗೌಡ, ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ, ಬಿನೋಯ್, ತೇಜಸ್ವಿನಿ, ಕೆ. ಕೆಂಪಯ್ಯ, ಸ್ವಾಮಿ ಎಂ., ದಿನೇಶ್ ಜೆ.ಆರ್., ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರಾದ ನಾಗರತ್ನ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಜಿನಿ, ಕಾರ್ಮಿಕ ನಿರೀಕ್ಷರಾದ ಪ್ರದೀಪ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

# ಆಯುರ್ವೇದ-ಯೋಗದ ಬಗ್ಗೆ ಇಡೀ ಜಗತ್ತು ಶ್ಲಾಘಿಸುತ್ತಿದೆ: ಬಿಎಸ್‌ವೈ

ದೊಡ್ಡಬಳ್ಳಾಪುರ



ಭಾರತದ ಯೋಗ ಹಾಗು ಆಯುರ್ವೇದದ ವಿಷಯದ ಬಗ್ಗೆ ಇಡೀ ಜಗತ್ತು ಭಾರತದತ್ತ ತಿರುಗಿ ನೋಡುವಂತೆ ಮಾಡಿದೆ. ಜಗತ್ತಿನ ಹಲವು ದೇಶಗಳು ಇವನ್ನು ಸ್ವೀಕರಿಸಿವೆ. ಇದೇ ರೀತಿ ವಾಸ್ತು ಶಾಸ್ತ್ರವನ್ನು ಗಂಭೀರವಾಗಿ ಅಧ್ಯಯನ ಮಾಡಬೇಕಿದೆ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಹೇಳಿದರು.

ದೊಡ್ಡಬಳ್ಳಾಪುರ ತಾಲ್ಲೂಕಿನ ಕನ್ನಮಂಗಲ ಗೇಟ್ ನಲ್ಲಿ ಎಲ್. ಜಿ.ಮಹಲ್ ನಲ್ಲಿ ನಡೆದ ವಾಸ್ತುವಿನ ನಡಿಗೆ ಗ್ರಾಮದ ಕಡೆಗೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ಪ್ರಧಾನಿ ನರೇಂದ್ರ ಮೋದಿ ಅವರು ವಾಸ್ತುಶಾಸ್ತ್ರದ ಬಗ್ಗೆ ಮೆಚ್ಚುಗೆಯ ಮಾತನಾಡಿದ್ದಾರೆ. ಮನೆಯಲ್ಲಿ ಗಾಳಿ ಬೆಳಕು ಸೂರ್ಯನ ಕಿರಣ ಹೇಗೆ ಪ್ರವೇಶಿಸಬೇಕು ಇತ್ಯಾದಿ ಮಹತ್ವದ ವಿಚಾರಗಳನ್ನು ಈ ಹಿಂದೆಯೇ ನಮ್ಮ ಋಷಿಮುನಿಗಳು ಉಲ್ಲೇಖಿಸಿದ್ದಾರೆ. ಇದರ ಆಧಾರದ ಮೇಲೆಯೇ ವಾಸ್ತು ಶಾಸ್ತ್ರ ನಿಂತಿದೆ. ಯುವಪೀಳಿಗೆ ಆಧುನಿಕ ತಂತ್ರಜ್ಞಾನವನ್ನು ಸಂಪರ್ಕವಾಗಿ ಬಳಸಿಕೊಂಡು ಜತೆಗೆ ನಮ್ಮ ವಾಸ್ತುಶಾಸ್ತ್ರದ ಬಗ್ಗೆಯೂ ಅರಿವು, ಅನುಕೂಲವಾಗುವಂತೆ ಮಾಡಬೇಕು ಎಂದರು.

ಪೂತಮಾನಸ ಜ್ಯೋತಿಷ್ಯಶಾಸ್ತ್ರದ ವ್ಯವಸ್ಥಾಪಕ ಡಾ.ಕೆ.ಗಿರೀಶ್ ಮಾತನಾಡಿ, ಜ್ಯೋತಿಷ್ಯಶಾಸ್ತ್ರ ಎನ್ನುವುದು ತಾಯಿ ಇದ್ದಂತೆ, ವಾಸ್ತು ಅದರ ಮಗುವಿನಂತೆ. ತಾಯಿ ಹಾಗೂ ಮಗುವಿನ ಸಂಬಂಧಕ್ಕೆ ಎಷ್ಟು ಮಹತ್ವವಿದೆಯೋ ಅದೇ ರೀತಿ ಜ್ಯೋತಿಷ್ಯ ಹಾಗೂ ವಾಸ್ತುವಿನ ಸಂಬಂಧ ಮಹತ್ವದ್ದಾಗಿದೆ. ಮನೆಯ ವಾಸ್ತು ಸರಿಯಾಗಿದ್ದರೆ ಮನೆಗಳಲ್ಲಿ ಆರೋಗ್ಯ, ಯಶಸ್ಸು ನೆಮ್ಮದಿ ನೆಲೆಸಿರುತ್ತದೆ. ವಾಸ್ತುಶಾಸ್ತ್ರ ವೈಜ್ಞಾನಿಕ ತಳಹದಿ ಮೇಲೆ ನಿಂತಿದೆ. ಸೂಕ್ತವಾಗಿ ವಾಸ್ತುವನ್ನು ಅಳವಡಿಸಿ ಕೊಂಡರೆ ಎಲ್ಲರಿಗೂ ಯಶಸ್ಸು ಒಲಿಯುತ್ತದೆ ಎಂದರು.

ಈ ಕಾರ್ಯಕ್ರಮದಲ್ಲಿ ರಾಜ್ಯ ಜ್ಯೋತಿಷ್ಯರ ಹಾಗೂ ಜ್ಯೋತಿಷ್ಯ ಬೋಧನಾ ಸಂಸ್ಥೆಗಳ ಪ್ರಧಾನ ಕಾರ್ಯದರ್ಶಿ ಗಜೇಂದ್ರಬಾಬು, ಶಾಸಕ ಧೀರಜ್ ಮುನಿರಾಜು, ದೊಡ್ಡಬಳ್ಳಾಪುರ ಯೋಜನಾ ಪ್ರಾಧಿಕಾರ ಅಧ್ಯಕ್ಷ ಜಿ.ಚುಂಚೇಗೌಡ, ಮಾಜಿ ಶಾಸಕ ಆರ್.ಜಿ.ವೆಂಕಟಾಚಲಯ್ಯ, ಟಿ.ವೆಂಕಟರಮಣಯ್ಯ, ಬಿಜೆಪಿ ಮುಖಂಡ ಮರಿಸ್ವಾಮಿ, ಕೆಐಎಂಎಸ್ ಮಾಜಿ ಅಧ್ಯಕ್ಷ ಮುನೇಗೌಡ, ಜ್ಯೋತಿಷಿಗಳಾದ ದಿನೇಶ್ ಗುರೂಜಿ, ಡಾ.ಹರಿದಾಸ್, ಡಾ.ಅನಂತ ರಾಘವನ್, ಕುಮಾರ್ ವಶಿಷ್ಟ ಹಾಜರಿದ್ದರು.

# 'ಕನ್ನಡದ ಆಸ್ತಿ ಮಾಸ್ತಿ ಅವರ ಸಾಹಿತ್ಯ ಸೇವೆ ಇಂದಿಗೂ ಮಾದರಿ'

ಬಂಗಾರಪೇಟೆ



ಬಡತನವನ್ನು ಮೆಟ್ಟಿ ನಿಂತು ಕನ್ನಡ ಸಾಹಿತ್ಯಕ್ಕೆ ಅಪೂರ್ವ ಕೊಡುಗೆ ನೀಡಿದ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಮಾಸ್ತಿ ವೆಂಕಟೇಶ ಅಯ್ಯಂಗಾರ್ ಅವರ ಬದುಕು ಮತ್ತು ಸಾಹಿತ್ಯ ಸಾಧನೆ ಇಂದಿನ ಯುವಜನತೆಗೆ ಮಾದರಿಯಾಗಿದೆ ಎಂದು ಶಿಕ್ಷಕ ಕೆ.ಜಿ. ಮಂಜುನಾಥ್ ಹೇಳಿದರು.

ಅನಿಕೇತನಕನ್ನಡಬಳಗಹಾಗೂಮಾದಮಂಗಲಸರ್ಕಾರಿ ಪ್ರೌಢಶಾಲೆ ಇವರ ಸಂಯುಕ್ತ ಆಶ್ರಯದಲ್ಲಿ ಮಾಸ್ತಿ ವೆಂಕಟೇಶ ಅಯ್ಯಂಗಾರ್ ಅವರ ಜನ್ಮದಿನದ ಅಂಗವಾಗಿ ಸದರಿ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಸಂಸ್ಮರಣಾ ಕಾರ್ಯಕ್ರಮದಲ್ಲಿ ಅವರು ಉಪನ್ಯಾಸ ನೀಡಿದರು.

ಮಾಸ್ತಿ ಅವರು ಬಡತನದ ಹಿನ್ನೆಲೆಯಿಂದ ಬಂದವರಾಗಿದ್ದರೂ ತಮ್ಮ ಪ್ರತಿಭೆ ಮತ್ತು ಪರಿಶ್ರಮದ ಮೂಲಕ ಐಸಿಎಸ್ ಹಾಗೂ ಎಂ.ಎ. ಪರೀಕ್ಷೆಗಳಲ್ಲಿ ಪ್ರಥಮ ಸ್ಥಾನ ಪಡೆದು ಮೈಸೂರು ಸಂಸ್ಥಾನದ ಆಡಳಿತ ಸೇವೆಯಲ್ಲಿ ಉನ್ನತ ಹುದ್ದೆಗಳನ್ನು ಅಲಂಕರಿಸಿದರು. ಬಳಿಕ ಸ್ವಇಚ್ಛೆಯಿಂದ ಸರ್ಕಾರಿ ಸೇವೆಗೆ ರಾಜೀನಾಮೆ ನೀಡಿ ಕನ್ನಡ ಸಾಹಿತ್ಯ ಸೇವೆಗೆ ತಮ್ಮ ಜೀವನವನ್ನು ಸಮರ್ಪಿಸಿಕೊಂಡರು ಎಂದು ತಿಳಿಸಿದರು.

ಕಾರ್ಯಕ್ರಮವನ್ನು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಕ್ಷೇತ್ರ ಸಮನ್ವಯಾಧಿಕಾರಿ ಎಂ.ಎಸ್. ನಾರಾಯಣಸ್ವಾಮಿ ಗಿಡಕ್ಕೆ ನೀರೆರೆಯುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ಕನ್ನಡ ಭಾಷೆ ಮತ್ತು ಸಾಹಿತ್ಯದ ಬಗ್ಗೆ ಮಕ್ಕಳಲ್ಲಿ ಆಸಕ್ತಿ ಬೆಳೆಸುವಲ್ಲಿ ಅನಿಕೇತನ ಕನ್ನಡ ಬಳಗದ ಕಾರ್ಯ ಶ್ಲಾಘನೀಯವಾಗಿದೆ ಎಂದು ಹೇಳಿದರು. ಮನೆಯ ಭಾಷೆ ಯಾವುದೇ ಆಗಿರಲಿ, ಕನ್ನಡತನವನ್ನು ಬೆಳೆಸಿಕೊಳ್ಳುವುದು ಪ್ರತಿಯೊಬ್ಬರ ಕರ್ತವ್ಯ ಎಂದು ತಿಳಿಸಿದರು.

ಹಿರಿಯ ವಕೀಲ ಎಂ. ಜಯಪ್ರಕಾಶ್ ಮಾತನಾಡಿ, ಪಠ್ಯದ ಜೊತೆಗೆ ಪಠ್ಯೇತರ ಜ್ಞಾನವೂ ವಿದ್ಯಾರ್ಥಿಗಳ ಸರ್ವಾಂಗೀಣ ಬೆಳವಣಿಗೆಗೆ ಅಗತ್ಯವಾಗಿದ್ದು, ಗ್ರಂಥಾಲಯದ ಪುಸ್ತಕಗಳನ್ನು ಓದುವ ಅಭ್ಯಾಸವನ್ನು ಮಕ್ಕಳು ರೂಢಿಸಿಕೊಳ್ಳಬೇಕು ಎಂದರು.

ಮಾಜಿ ರೋಟರಿ ಕ್ಲಬ್ ಅಧ್ಯಕ್ಷ ಕೆ.ಸಿ. ಉಮೇಶ್ ಮಾತನಾಡಿ, ಸರ್ಕಾರಿ ಶಾಲೆಗಳಲ್ಲಿ ಉತ್ತಮ ಸೌಲಭ್ಯಗಳಿದ್ದು, ವಿದ್ಯಾರ್ಥಿಗಳು ಅವುಗಳನ್ನು ಸದುಪಯೋಗಪಡಿಸಿಕೊಂಡು ಉತ್ತಮ ಶಿಕ್ಷಣ ಪಡೆಯಬೇಕು ಎಂದು ಸಲಹೆ ನೀಡಿದರು.

ಶಿಕ್ಷಕಿ ಶಾರದಾಂಬ, ಬಳಗದ ಅಧ್ಯಕ್ಷ ರಾಮ್ ಪ್ರಸಾದ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯದರ್ಶಿ ಮೈ. ಸತೀಶ್ ಕುಮಾರ್ ಕಾರ್ಯಕ್ರಮ ನಿರೂಪಿಸಿದರು. ಈ ಸಂದರ್ಭದಲ್ಲಿ ವಿ.ಎಲ್. ಪ್ರಹ್ಲಾದ್ ರಾವ್ , ರು. ವಿಜಯ್ ಕುಮಾರ್, ಕೇಶವಮೂರ್ತಿ, ಮಹಾದೇವಿ ಪಾಟೀಲ್, ರಾಮಾಂಜನೇಯ, ವಿಜಯ್ ಸೋಮಶೇಖರ್, ಮಂಜುನಾಥ್, ಕುಮುದಿನಿ ಇತರರು ಇದ್ದರು.

# ಕೋಳಿ ಸಾಕಾಣಿಕೆ ಉಚಿತ ತರಬೇತಿಗೆ ಅರ್ಜಿ ಆಹ್ವಾನ

ರಾಮನಗರ

ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ 12 ದಿನಗಳ ಉಚಿತ ಕೋಳಿ ಸಾಕಾಣಿಕೆ ತರಬೇತಿಯನ್ನು 2026ರ ಜುಲೈ 06 ರಿಂದ ಆಯೋಜಿಸಲಾಗಿದ್ದು, ಬೆಂಗಳೂರು ಗ್ರಾಮಾಂತರ, ರಾಮನಗರ ಹಾಗೂ ತುಮಕೂರು ಜಿಲ್ಲಾ ವ್ಯಾಪ್ತಿಯ ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕ / ಯುವತಿಯರು ಅರ್ಜಿ ಸಲ್ಲಿಸಬಹುದಾಗಿದೆ.

ಆಸಕ್ತ 18 ರಿಂದ 50 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಗ್ರಾಮೀಣ ಪ್ರದೇಶದ ಬಿಪಿಎಲ್ ಕಾರ್ಡ್ ಹೊಂದಿರುವವರಿಗೆ ಆದ್ಯತೆ ನೀಡಲಾಗುವುದು.

ತರಬೇತಿಯು ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಅರ್ಜಿ ಸಲ್ಲಿಸಲು 30 ಜೂನ್ 2026 ಕೊನೆಯ ದಿನವಾಗಿದೆ.

ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗೆ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9241482541, 9481506564, 9740982585, 9113880324 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕ ರವಿಕುಮಾರ ಅವರು ತಿಳಿಸಿದ್ದಾರೆ.



ತಿಪಟೂರು ತಾಲೂಕಿನ ಕೆರಗೋಡಿ-ರಂಗಾಪುರ ಮಠದ ಆವರಣದಲ್ಲಿ ಪರಮಪೂಜ್ಯರು ಪೀಠಾಧ್ಯಕ್ಷರಾಗಿ ಐವತ್ತು ವರ್ಷ ತುಂಬಿದ ಸವಿನೆನಪಿಗಾಗಿ, ಮಹಾಮನೆ ನಿರ್ಮಾಣಕ್ಕೆ ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಶಂಕುಸ್ಥಾಪನೆ ನೆರವೇರಿಸಿದರು. ಮಠದ ಪೀಠಾಧ್ಯಕ್ಷರಾದ ಶ್ರೀ ಗುರು ಪರದೇಶಿಕೇಂದ್ರ ಸ್ವಾಮೀಜಿ, ಬಿಜೆಪಿ ಜಿಲ್ಲಾಧ್ಯಕ್ಷ ರವಿ (ಹೆಬ್ಬಾಕ), ಯುವ ಮೋರ್ಚಾ ಜಿಲ್ಲಾಧ್ಯಕ್ಷ ಶಶಿಕಿರಣ್, ಚೌಡೇಶ್ವರಿ ಬ್ಯಾಂಕಿನ ಎಸ್. ಸೋಮಶೇಖರ್ ಮತ್ತು ರಾಮಿ ಸೇರಿದಂತೆ ಮುಖಂಡರು, ಮಠದ ಸಿಬ್ಬಂದಿ ಮತ್ತು ಗ್ರಾಮಸ್ಥರು ಹಾಜರಿದ್ದರು.

# ಅರ್ಜಿ ಆಹ್ವಾನ

ರಾಮನಗರ

ಬಿಡದಿ ಪುರಸಭೆಯ 2026-27ನೇ ಸಾಲಿಗೆ ಪುರಸಭಾ ನಿಧಿ, ಎಸ್.ಎಫ್.ಸಿ. ಮುಕ್ತನಿಧಿಯಡಿ ಶೇ. 24.10, 7.25 & 5ರ ಕಲ್ಯಾಣ ಕಾರ್ಯಕ್ರಮದ ಅನುದಾನಗಳಿಗೆ ಸುತ್ತೋಲೆಯನುಸಾರ ಬೆಂಗಳೂರು ದಕ್ಷಿಣ ಜಿಲ್ಲೆಯ ಜಿಲ್ಲಾಧಿಕಾರಿಗಳ ಕ್ರಿಯಾ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ಪಡೆಯಲಾಗಿದ್ದು, ಈ ಕ್ರಿಯಾ ಯೋಜನೆಯಲ್ಲಿ ಅಳವಡಿಸಿಕೊಂಡಿರುವ ವ್ಯಕ್ತಿ ಸಂಬಂಧಿತ ಕಲ್ಯಾಣ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅದರಂತೆ ಶೇ.24.10ರ ಪರಿಶಿಷ್ಟ ಜಾತಿ & ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಕಾಯ್ದಿರಿಸಿರುವ ಅನುದಾನಕ್ಕೆ ಸಂಬಂಧಪಟ್ಟಂತೆ ವಿವಿಧ ಹಂತಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ, ವಸತಿ ಯೋಜನೆಯಡಿ ಮನೆ ನಿರ್ಮಿಸಿಕೊಳ್ಳಲು ಆಯ್ಕೆಯಾಗಿರುವ ಪರಿಶಿಷ್ಟ ಜಾತಿಯ ಫಲಾನುಭವಿಗಳಿಗೆ ಸಹಾಯ ಧನ ಮತ್ತು ವಿವಿಧ ಹಂತಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ, ಪರಿಶಿಷ್ಟ ಪಂಗಡದ 03 ರಿಂದ 18ವರ್ಷದೊಳಗಿನ ಮಕ್ಕಳಿಗೆ ಸರ್ಕಾರವು ಹೆಸರಿಸಿದ ಜೀವ ವಿಮೆ (ಒಂದು ಬಾರಿಗೆ ಬಾಂಡ್ ಖರೀದಿಸಿ ನೀಡುವುದು) ಶೇ.7.25ರ (ಇತರೆ ಬಡಜನರ ಕಲ್ಯಾಣ ಕಾರ್ಯಕ್ರಮ)ದಡಿ ಇತರೆ ಹಿಂದುಳಿದ ವರ್ಗಗಳ ವಿವಿಧ ಹಂತಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಮತ್ತು ಶೇ.5ರ (ವಿಕಲಚೇತನರ ಕಲ್ಯಾಣ ಕಾರ್ಯಕ್ರಮ)ದಡಿ ವಿಕಲಚೇತನ ಫಲಾನುಭವಿಗಳಿಗೆ ಸರ್ಕಾರವು ಹೆಸರಿಸಿದ ಜೀವ ವಿಮೆ (ಒಂದು ಬಾರಿಗೆ ಬಾಂಡ್ ಖರೀದಿಸಿ ನೀಡುವುದು), ಈ ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವ ಫಲಾನುಭವಿಗಳು ಪುರಸಭಾ ಕಚೇರಿಯಲ್ಲಿ ನಿಗಧಿತ ಅರ್ಜಿಯನ್ನು ಪಡೆದು ಭರ್ತಿ ಮಾಡಿದ ಅರ್ಜಿಯೊಂದಿಗೆ ಪ್ರಸಕ್ತ ಸಾಲಿನ ಅವಶ್ಯಕ ದಾಖಲಾತಿಗಳನ್ನು ದೃಢೀಕರಿಸಿ ಜೂ. 30ರ ಸಂಜೆ 5 ಗಂಟೆಯೊಳಗೆ ದ್ವಿಪ್ರತಿಯಲ್ಲಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗೆ ಪುರಸಭೆಯ ಅಧಿಕೃತ ವೆಬ್‌ಸೈಟ್ www.bidaditown.mrc.co.in ಅಥವಾ ಪುರಸಭೆಯ ಕಲ್ಯಾಣ ಶಾಖೆಯನ್ನು ಸಂಪರ್ಕಿಸುವಂತೆ ಬಿಡದಿ ಪುರಸಭೆಯ ಮುಖ್ಯಾಧಿಕಾರಿಗಳು ತಿಳಿಸಿದ್ದಾರೆ.

# ಕೆ.ಆರ್. ಮಾರುಕಟ್ಟೆಯಲ್ಲಿ ಫೈರ್ ಆಡಿಟ್‌ಗೆ ಸೂಚನೆ: ಮಹೇಶ್ವರ್ ರಾವ್

ಬೆಂಗಳೂರು



ಕೆ.ಆರ್. ಮಾರುಕಟ್ಟೆಯಲ್ಲಿ ಅಗ್ನಿ ಅವಘಡಗಳು ಸಂಭವಿಸುವುದನ್ನು ತಡೆಯುವ ಸಲುವಾಗಿ ಫೈರ್ ಆಡಿಟ್ ನಡೆಸಲು ಮುಖ್ಯ ಆಯುಕ್ತರಾದ ಮಹೇಶ್ವರ್ ರಾವ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬೆಂಗಳೂರು ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯ ಕೆ.ಆರ್. ಮಾರುಕಟ್ಟೆಗೆ ಇಂದು ಅಧಿಕಾರಿಗಳೊಂದಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ವೇಳೆ ಮಾತನಾಡಿದ ಅವರು, ಮಾರುಕಟ್ಟೆಯಲ್ಲಿ ಅಗ್ನಿಯಿಂದ ಉಂಟಾಗಬಹುದಾದ ಅಪಾಯಗಳು, ಅಗ್ನಿಶಾಮಕ ವ್ಯವಸ್ಥೆ ಹಾಗೂ ತುರ್ತು ಪರಿಸ್ಥಿತಿಯಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಕೂಡಲೇ ಫೈರ್ ಆಡಿಟ್ ನಡೆಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಅಗ್ನಿ ಅವಘಡ ಸಂಭವಿಸಿದ ಸಂದರ್ಭದಲ್ಲಿ ಸುರಕ್ಷಿತವಾಗಿ ಹೊರಬರಲು ತುರ್ತು ನಿರ್ಗಮನ ವ್ಯವಸ್ಥೆಗಳು ಸಮರ್ಪಕವಾಗಿರಬೇಕು. ಜೊತೆಗೆ ಅಗ್ನಿಯನ್ನು ತ್ವರಿತವಾಗಿ ನಿಯಂತ್ರಿಸುವ ಉದ್ದೇಶದಿಂದ ಅಗ್ನಿಶಾಮಕ ಪೈಪ್‌ಗಳನ್ನು (ಈಡಿಜ ಇಥಣುಟಿರಿಣಿಟುಜಿಡಿ ಕುರಿಜ) ಅಳವಡಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಕೆ.ಆರ್. ಮಾರುಕಟ್ಟೆ ಕಟ್ಟಡದಲ್ಲಿರುವ ಮಳಿಗೆಗಳ ಮುಂಭಾಗದಲ್ಲಿ ಮಾಡಿರುವ ಒತ್ತುವರಿಗಳನ್ನು ಗುರುತಿಸಿ, ಸಂಬಂಧಪಟ್ಟವರಿಗೆ ದುಪ್ಪಟ್ಟು ದಂಡ ವಿಧಿಸಿ ತೆರವುಗೊಳಿಸುವ ಕಾರ್ಯ ಕೈಗೊಳ್ಳಬೇಕು. ನಾಗರಿಕರಿಗೆ ಯಾವುದೇ ರೀತಿಯ ಅಡಚಣೆ ಉಂಟಾಗದಂತೆ ನೋಡಿಕೊಳ್ಳಬೇಕು. ಜೊತೆಗೆ ಮಾರುಕಟ್ಟೆ ಮುಂಭಾಗದಲ್ಲಿರುವ ಮಾರಾಟಗಾರರು ಅವರಿಗೆ ಮೀಸಲಾದ ಸ್ಥಳಗಳಲ್ಲಿಯೇ ವ್ಯಾಪಾರ ನಡೆಸುವಂತೆ ಕ್ರಮವಹಿಸಬೇಕು. ಈ ಸಂಬಂಧ ಸ್ಥಳಗಳನ್ನು ಗುರುತಿಸಿ, ನಿಗದಿತ ಜಾಗದಲ್ಲಿಯೇ ವ್ಯಾಪಾರ ಮಾಡುವಂತೆ ನೋಡಿಕೊಳ್ಳಬೇಕೆಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಕೆ.ಆರ್. ಮಾರುಕಟ್ಟೆಯ ಆವರಣದಲ್ಲಿರುವ ಸಾರ್ವಜನಿಕ ಶೌಚಾಲಯ ಶಿಥಿಲಾವಸ್ಥೆಯಲ್ಲಿರುವುದನ್ನು ಗಮನಿಸಿ, ನೆಲ ಹಾಗೂ ಮೊದಲನೇ ಮಹಡಿಯಲ್ಲಿರುವ ಶೌಚಾಲಯಗಳನ್ನು ಸಮರ್ಪಕವಾಗಿ ನಿರ್ವಹಣೆ ಮಾಡಿ ಸಾರ್ವಜನಿಕ ಬಳಕೆಗೆ ಅನುಕೂಲವಾಗುವಂತೆ ನೋಡಿಕೊಳ್ಳಬೇಕು. ಅನಂತರ ಅವರಣದಲ್ಲಿರುವ ಶಿಥಿಲಾವಸ್ಥೆಯ ಶೌಚಾಲಯವನ್ನು ತೆರವುಗೊಳಿಸಿ ತ್ಯಾಜ್ಯ ವಿಲೇವಾರಿ ಕಾರ್ಯಕ್ಕೆ ಆ ಜಾಗವನ್ನು ಬಳಸಿಕೊಳ್ಳುವಂತೆ ಸೂಚಿಸಿದರು.

ಕೆ.ಆರ್. ಮಾರುಕಟ್ಟೆ ಸದಾ ಸ್ವಚ್ಛವಾಗಿರುವಂತೆ ನೋಡಿಕೊಳ್ಳಬೇಕು. ಈ ನಿಟ್ಟಿನಲ್ಲಿ ಪೌರಕಾರ್ಮಿಕರು ಹಾಗೂ ಇತರೆ ಸಿಬ್ಬಂದಿಯ ಸಹಾಯದಿಂದ ನೀರಿನ ಮೂಲಕ ಸಂಪೂರ್ಣ ಮಾರುಕಟ್ಟೆಯನ್ನು ಸ್ವಚ್ಛಗೊಳಿಸಬೇಕು. ಬಳಿಕ ನಿರಂತರ ಸ್ವಚ್ಛತೆ ಕಾಪಾಡುವಂತೆ ನಿರ್ವಹಣೆ ಕೈಗೊಳ್ಳಬೇಕೆಂದು ಸೂಚಿಸಿದರು.

ಕೆ.ಆರ್. ಮಾರುಕಟ್ಟೆಯ ಮೇಲ್ಭಾಗದಲ್ಲಿ ಅಳವಡಿಸಿರುವ ಗಾಜುಗಳಿಗೆ ಲೀಕೇಜ್-ಪ್ರೂಫ್ ಪೇಂಟಿಂಗ್ ಮಾಡುವ ಮೂಲಕ ಮಳೆನೀರು ಸೋರದಂತೆ ಕ್ರಮವಹಿಸಬೇಕು. ಸಜ್ಜೆಗಳಿಂದ ನೀರು ಒಳಬಾರದಂತೆ ದುರಸ್ಥಿಗೊಳಿಸಿ, ಅಗತ್ಯ ಕ್ರಮ ಕೈಗೊಳ್ಳಬೇಕು. ಅಲ್ಲದೆ, ಲೀಕೇಜ್ ಪ್ರೂಫ್ ಪೇಂಟಿಂಗ್ ಮಾಡಿ ನೀರು ಸೋರಿಕೆಯಾಗದಂತೆ ನೋಡಿಕೊಳ್ಳುವಂತೆ ಸೂಚಿಸಿದರು.

ಕೆ.ಆರ್. ಮಾರುಕಟ್ಟೆ ಕಟ್ಟಡದ ಮೂರನೇ ಮಹಡಿ ಬಳಕೆಯಾಗದೆ ಇರುವುದನ್ನು ಗಮನಿಸಿ, ಸಂಪೂರ್ಣ ಮಹಡಿ ಸದ್ಬಳಕೆ ಮಾಡಿಕೊಳ್ಳುವ ಸಲುವಾಗಿ ಯೋಜನೆ ರೂಪಿಸಲು ಸೂಚನೆ ನೀಡಿದರು. ಹಾಗೂ ಮಾರುಕಟ್ಟೆ ಕಂದಾಯ ಕಛೇರಿ ಹಾಗೂ ತ್ಯಾಜ್ಯ ನಿರ್ವಹಣೆ ಕಛೇರಿ ಸ್ಥಾಪನೆಗೆ ಕ್ರಮ ವಹಿಸಲು ಸೂಚನೆ ನೀಡಿದರು.

# ಎಸ್‌ಐಆರ್ ನೋಂದಣಿಗೆ ಸಮಯಾವಕಾಶ ನೀಡುವಂತೆ ಡಿಸಿಗೆ ಒತ್ತಾಯ

ಕೋಲಾರ



ಎಸ್.ಐ.ಆರ್. ಸಂಬಂಧ ಜನರು ಮತದಾನದ ಹಕ್ಕು ಕಳೆದುಕೊಳ್ಳದಂತೆ ಸೂಕ್ತವಾದ ಕ್ರಮಗಳನ್ನು ವಹಿಸಿ ಸಮಯಾವಕಾಶ ನೀಡುವಂತೆ ಒತ್ತಾಯಿಸಿ ಜಿಲ್ಲಾಧಿಕಾರಿ ಎಂ.ಆರ್ ರವಿ ಅವರಿಗೆ ಜಿಲ್ಲೆಯ ಎಡ, ದಲಿತ, ಅಲ್ಪಸಂಖ್ಯಾತರ, ರೈತ, ಕಾರ್ಮಿಕ (ಜನಪರ ಸಂಘಟನೆಗಳು) ಮನವಿ ನೀಡಿ ಒತ್ತಾಯಿಸಿದರು.

ಸಿಐಟಿಯು ಜಿಲ್ಲಾ ಉಪಾಧ್ಯಕ್ಷ ಗಾಂಧಿನಗರನಾರಾಯಣಸ್ವಾಮಿ ಮಾತನಾಡಿ ಎಸ್.ಐ.ಆರ್. ಬಗ್ಗೆ ಸಂವಿಧಾನದ ಜನ ಪ್ರಾತಿನಿಧ್ಯ ಕಾಯ್ದೆಯ ಅನುಸಾರ ತೀವ್ರ ಪರಿಷ್ಕರಣೆ ಮಾಡಲು ಅವಕಾಶವಿದೆ. ಆದರೆ ಪ್ರಸ್ತುತ ವಿಶೇಷ ಎಂಬ ಪದ ಸೇರಿಸಿ ಈಗ ಮಾಡುತ್ತಿರುವ ಎಸ್.ಐ.ಆರ್. ಪ್ರಕ್ರಿಯೆಗಳು ಚುನಾವಣಾ ಆಯೋಗ ಕೇಳುತ್ತಿರುವ ದಾಖಲೆಗಳನ್ನು ಒದಗಿಸಲಾಗದೆ ದೊಡ್ಡ ಸಂಖ್ಯೆಯಲ್ಲಿ ಅರ್ಹರಿದ್ದರೂ ಮತದಾರರ ಪಟ್ಟಿಯಿಂದ ಕೈಬಿಡಲ್ಪಟ್ಟಿದ್ದಾರೆ. ಒತ್ತಾಯ ಪೂರ್ವಕವಾಗಿ ಹೇರಲಾಗಿದ್ದು ಕೂಡಲೇ ಪರಿಪಡಿಸಬೇಕು ಎಂದು ಒತ್ತಾಯಿಸಿದರು.

ಕರ್ನಾಟಕ ರಾಜ್ಯದಲ್ಲಿ ಚುನಾವಣೆಗೆ ಇನ್ನು ಎರಡು ವರ್ಷ ಇರುವುದರಿಂದ ಎಸ್‌ಐಆರ್ ಮಾಡಲು ಇರುವ ಕಾಲಾವಕಾಶವನ್ನು ವಿಸ್ತರಣೆ ಮಾಡಬೇಕು, ತಾರ್ಕಿಕ ವ್ಯತ್ಯಾಸ ಲಾಜಿಕಲ್ ಡಿಸ್ಕ್ರಿಪೆನ್ಸಿಯನ್ನು ಕರ್ನಾಟಕದಲ್ಲಿ ಆಳವಡಿಸಬಾರದು. ಹೆಸರುಗಳ ವ್ಯತ್ಯಾಸ ಸರ್ ನೇಮ್, ಇನಿಷಿಯಲ್‌ಗಳಲ್ಲಿನ ವ್ಯತ್ಯಾಸಗಳನ್ನು ಮತದಾರರ ತಪ್ಪೆಂದು ಪರಿಗಣಿಸಿ ನೋಟೀಸ್ ಕೊಡುವುದನ್ನು ಮಾಡಬಾರದು ಈಗಾಗಲೇ ಮ್ಯಾಪಿಂಗ್-ಮ್ಯಾಚಿಂಗ್ ಮಾಡಲಾಗಿದೆ ಎಂಬ ಮಾಹಿತಿಯನ್ನು ಚುನಾವಣಾ ಆಯೋಗ ಕೊಟ್ಟಿದ್ದು, ನಗರ ಪ್ರದೇಶದಲ್ಲಿ ಕಡಿಮೆ ಪ್ರಮಾಣದಲ್ಲಿ ಎಂದು ಮನವಿ ಮಾಡಿದರು.

ಸಿಪಿಐಎಂ ಜಿಲ್ಲಾ ಕಾರ್ಯದರ್ಶಿ ಪಿ.ಆರ್ ಸೂರ್ಯನಾರಾಯಣ ಮಾತನಾಡಿ ಜನರಿಗೆ ಅನುಕೂಲವಾಗುವ ಹಾಗೆ ಗ್ರಾಮ ಪಂಚಾಯಿತಿ, ವಾರ್ಡುವಾರು ಪ್ರದೇಶಗಳಲ್ಲಿ ಸೇವಾ ಕೇಂದ್ರಗಳನ್ನು ತೆರೆಯಬೇಕು ಮತದಾರರ ಚೀಟಿಯೂ ಒಳಗೊಂಡಂತೆ ಸಾಮಾನ್ಯವಾಗಿ ಜನರ ಬಳಿ ಇರಬಹುದಾದ ದಾಖಲೆಗಳನ್ನು ಒಪ್ಪದ ಚುನಾವಣಾ ಆಯೋಗ ಇಪ್ಪುತ್ತಿಲ್ಲ ಹಿಂದಿನ ಚುನಾವಣಾ ಗುರುತಿನ ಚೀಟಿ ಸೇರಿದಂತೆ ಸರ್ಕಾರದ ಸಕ್ಷಮ ಪ್ರಾಧಿಕಾರ ನೀಡುವ ಇತರ ಎಲ್ಲಾ ದಾಖಲೆಗಳನ್ನು ಪರಿಗಣಿಸಬೇಕು ಇತ್ಯಾದಿ ಅಗತ್ಯ ದಾಖಲೆಗಳನ್ನು ಪಡೆಯಲು ಅರ್ಜಿ ಸಲ್ಲಿಸಿದಾಗ ವಿಶೇಷ ಸಂದರ್ಭ ಎಂದು ಪರಿಗಣಿಸಿ ಕೂಡಲೇ ದಾಖಲೆಗಳನ್ನು ಪೂರೈಸಲು ವಿಶೇಷ ತಂಡಗಳನ್ನು ರಚನೆ ಮಾಡಬೇಕು ಎಂದು ಮನವಿ ಮಾಡಿದರು.

ದಸಂಸ ರಾಜ್ಯ ಸಂಚಾಲಕ ಎನ್ ಮುನಿಸ್ವಾಮಿ ಮಾತನಾಡಿ ಎಸ್.ಐ.ಆರ್ ಗಾಗಿ ಜನ್ಮ ದಿನಾಂಕಕ್ಕೆ ಸಂಬಂಧಿಸಿದ ಇತರ ದಾಖಲೆ ಇಲ್ಲದಿರುವಾಗ ಅವರ ಅಥವಾ ಅವರ ತಂದೆ ಅಥವಾ ತಾಯಿಯ ಜನನ ಪ್ರಮಾಣ ಪತ್ರ ದಾಖಲೆಯನ್ನು ಮತದಾರರು ಸಲ್ಲಿಸಬೇಕಿರುವುದರಿಂದ, ಪ್ರಸ್ತುತ ವಕೀಲರ ಮೂಲಕ ನ್ಯಾಯಾಲಯಕ್ಕೆ ಹೋಗಿ ಆದೇಶ ಪ್ರತಿ ಪಡೆದು ಜನನ ಪ್ರಮಾಣ ಪತ್ರ ಪಡೆಯಬೇಕೆಂದು ಇರುವ ಪದ್ಧತಿಯನ್ನು ಎಸ್.ಐ.ಆರ್.ಗೆ ಅನ್ವಯಿಸಬಾರದು. ಕರ್ನಾಟಕದಲ್ಲಿ ಸರ್ಕಾರದ ಪ್ರಕಾರವೇ 30 ವರ್ಷದ ಹಿಂದೆ 45% ರಷ್ಟು ಬಾಲ್ಯ ವಿವಾಹಗಳು ನಡೆಯುತ್ತಿದ್ದವು. ಇದರಿಂದ ಸಹಜವಾಗಿ ತಾಯಿ ಮತ್ತು ಮಕ್ಕಳ ವಯಸ್ಸಿನ ಅಂತರ ಕಡಿಮೆ ಇರುತ್ತದೆ. ಈ ಸಂದರ್ಭದಲ್ಲಿ ಅಂಥಹ ಮತದಾರರನ್ನ ಪಟ್ಟಿಯಿಂದ ಕೈ ಬಿಡಬಾರದು ಎಂದು ಮನವಿ ಮಾಡಿದರು

ಮನವಿ ಸಲ್ಲಿಸುವ ಸಂದರ್ಭದಲ್ಲಿ ಸಿಐಟಿಯು ಎಂ.ವಿಜಯಕೃಷ್ಣ, ಸಿ.ವಿ.ಮುನಿವೆಂಕಟಪ್ಪ, ಹೂವರಸನಹಳ್ಳಿ ರಾಜಪ್ಪ, ದೇವರಾಜ್, ನರಸಿಂಹರಾಜು, ಮುನಿಯಪ್ಪ, ಗಂಗಮ್ಮ, ಎನ್ ಎನ್ ಶ್ರೀರಾಮ್, ವಿ.ನಾರಾಯಣರೆಡ್ಡಿ, ಸಿಂಗಪುರ್ ನಾರಾಯಣಸ್ವಾಮಿ, ಸಾಧಿಕ್ ಅಹ್ಮದ್, ನರಸಿಂಹಮೂರ್ತಿ ಮುಂತಾದವರು ಇದ್ದರು.

12/06/2026

ಭಾರತ ಸಾರಥಿ

BHARATHA SARATHI KANNADA DAILY NEWS PAPER

ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಅನಧಿಕೃತ ಶೆಡ್‌ಗಳ ತೆರವು: ಅಂದಾಜು 2ಕೋಟಿ ಮೌಲ್ಯದ ಜಾಗ ಪಾಲಿಕೆ ವಶಕ್ಕೆ

ಬೆಂಗಳೂರು

ಬೆಂಗಳೂರು ದಕ್ಷಿಣ ನಗರ ಪಾಲಿಕೆಯ ಜಯನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಜೆ.ಪಿ.ನಗರ 2ನೇ ಹಂತದಲ್ಲಿ ಒತ್ತುವರಿಯಾಗಿದ್ದ ಕೋಟ್ಯಂತರ ರೂಪಾಯಿ ಮೌಲ್ಯದ ಸಾರ್ವಜನಿಕ ಆಸ್ತಿಯನ್ನು ಪಾಲಿಕೆ ಅಧಿಕಾರಿಗಳು ಇಂದು ಯಶಸ್ವಿಯಾಗಿ ತೆರವುಗೊಳಿಸಿ, ತಮ್ಮ ವಶಕ್ಕೆ ಪಡೆದುಕೊಂಡಿದ್ದಾರೆ.

ಜೆ.ಪಿ.ನಗರದ ಕೆ.ಎಸ್.ಆರ್.ಟಿ.ಸಿ. ಲೇಔಟ್ 5ನೇ ಅಡ್ಡರಸ್ತೆಯ ಹೆಚ್.ಟಿ.ಲೈನ್ ಕೆಳಭಾಗದಲ್ಲಿ ಈ ತೆರವು ಕಾರ್ಯಾಚರಣೆ ನಡೆದಿದೆ.

ಕೆ.ಎಸ್.ಆರ್.ಟಿ.ಸಿ. ಬಡಾವಣೆಯ ಈ ಪ್ರದೇಶವನ್ನು ಸಾರ್ವಜನಿಕ ಉದ್ಯಾನವನಕ್ಕಾಗಿ (ಪಾರ್ಕ್) ಮೀಸಲಿಡಲಾಗಿತ್ತು. ಆದರೆ, ಈ ಜಾಗವನ್ನು ಕೆಲವು ಅನಾಮಧೇಯ ವ್ಯಕ್ತಿಗಳು ಕಾನೂನುಬಾಹಿರವಾಗಿ ಒತ್ತುವರಿ ಮಾಡಿಕೊಂಡಿರುವುದಾಗಿ ಸಾರ್ವಜನಿಕರಿಂದ ವ್ಯಾಪಕ ದೂರುಗಳು ಕೇಳಿಬಂದಿದ್ದವು.



ಈ ಹಿನ್ನೆಲೆಯಲ್ಲಿ ತಕ್ಷಣವೇ ಕಾರ್ಯಪ್ರವೃತ್ತರಾದ ಪಾಲಿಕೆ ಆಯುಕ್ತರಾದ ಕೆ.ಎನ್. ರಮೇಶ್ ಅವರ ಕಟ್ಟುನಿಟ್ಟಿನ ನಿರ್ದೇಶನದ ಮೇರೆಗೆ ಅಧಿಕಾರಿಗಳ ತಂಡ ಸ್ಥಳ ಪರಿಶೀಲನೆ ನಡೆಸಿ ಒತ್ತುವರಿ ತೆರವುಗೊಳಿಸಲು ಮುಂದಾಯಿತು.

ಉದ್ಯಾನವನಕ್ಕಾಗಿ ಕಾಯ್ದಿರಿಸಲಾಗಿದ್ದ ಒಟ್ಟು 1495 ಚದರ ಅಡಿ ವಿಸ್ತೀರ್ಣದ ಜಾಗದಲ್ಲಿ ಕೆಲವು ವ್ಯಕ್ತಿಗಳು ಅನಧಿಕೃತವಾಗಿ ಶೆಡ್‌ಗಳನ್ನು ನಿರ್ಮಿಸಿಕೊಂಡಿದ್ದರು. ಈ ಆಸ್ತಿಯ ಅಂದಾಜು ಮೌಲ್ಯ ಸುಮಾರು 2 ಕೋಟಿ ರೂಪಾಯಿ ಎನ್ನಲಾಗಿದೆ.

ಮಂಗಳವಾರ ಭರ್ಜರಿ ಕಾರ್ಯಾಚರಣೆ ನಡೆಸಿದ ಅಧಿಕಾರಿಗಳು ಜಾಗದಲ್ಲಿದ್ದ ಎಲ್ಲಾ ಅನಧಿಕೃತ ಶೆಡ್‌ಗಳನ್ನು ಸಂಪೂರ್ಣವಾಗಿ ನೆಲಸಮಗೊಳಿಸಿ, ಜಾಗವನ್ನು ಪಾಲಿಕೆಯ ಸುಪರ್ದಿಗೆ ಪಡೆದರು.

ಇನ್ನು ಮುಂದೆ ಈ ಪಾಲಿಕೆ ಜಾಗವು ಮತ್ತೆ ಒತ್ತುವರಿಯಾಗದಂತೆ ಕಾವಲು ಕಾಯಲು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ವಹಿಸಲಾಗುವುದು ಎಂದು ಪಾಲಿಕೆ ಅಧಿಕಾರಿಗಳು ತಿಳಿಸಿದ್ದಾರೆ.

ಈ ಪ್ರಮುಖ ತೆರವು ಕಾರ್ಯಾಚರಣೆಯ ಸಂದರ್ಭದಲ್ಲಿ ಪಾಲಿಕೆಯ ತೋಟಗಾರಿಕೆ ವಿಭಾಗದ ಹಿರಿಯ ಅಧಿಕಾರಿಗಳು ಹಾಗೂ ಜೆ.ಪಿ.ನಗರ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು ಉಪಸ್ಥಿತರಿದ್ದರು.

# ಕುಂದು ಕೊರತೆ ಸಭೆ

ಕೊರಟಗೆರೆ

ತುಮಕೂರು ಲೋಕಾಯುಕ್ತ ಪೊಲೀಸ್ ಅಧೀಕ್ಷಕರವರ ನೇತೃತ್ವದಲ್ಲಿ ಲೋಕಾಯುಕ್ತ ಅಧಿಕಾರಿಗಳು ಸರ್ವಜನಿಕರ ಕುಂದು-ಕೊರತೆ ಸಭೆ ಹಾಗೂ ಅಹವಾಲು ಸ್ವೀಕಾರ ಸಭೆಯನ್ನು ಮತ್ತು ತಾಲೂಕು ಮಟ್ಟದ ಅಧಿಕಾರಿಗಳ ಸಭೆಯನ್ನು ಕೊರಟಗೆರೆಯ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಜೂ 10 ರಂದು ಬೆಳಿಗ್ಗೆ 11ಯಿಂದ ಮಧ್ಯಾಹ್ನ 2 ಗಂಟೆಯವರೆಗೆ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ಸದುಪಯೋಗ ಪಡೆದುಕೊಳ್ಳಬೇಕೆಂದು ಪೊಲೀಸ್ ಅಧೀಕ್ಷಕರು ತಿಳಿಸಿದ್ದಾರೆ.

# ಯುಪಿಎಸ್‌ಸಿ ತರಬೇತಿ

ತಿಪಟೂರು

ವಾಸವಿ ಅಕಾಡೆಮಿ ಕರ್ನಾಟಕ ಆರ್ಯವೈಶ್ಯ ಮಹಾಸಭೆಯ ಮೂಲಕ ಶಿಕ್ಷಣ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಒಂದು ಸೇವಾ ಸಂಸ್ಥೆ. 1908 ರಿಂದಲೂ ಸಮಾಜದ ಸರ್ವಾಂಗೀಣ ಅಭಿವೃದ್ಧಿಗಾಗಿ ಶಿಕ್ಷಣ, ಸಾಮಾಜಿಕ ಕ್ಷೇತ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಾ ಸಾವಿರ ಸಾವಿರ ವಿದ್ಯಾರ್ಥಿಗಳ ಕುಟುಂಬಗಳ ಉನ್ನತಿಗೆ ಕಾರ್ಯನಿರ್ವಹಿಸುತ್ತಿದೆ.

ನಮ್ಮ ಸಂಸ್ಥೆಯ ಮೂಲಕ ಲೋಕಸೇವಾ ಆಯೋಗದ ಪರೀಕ್ಷೆಗಳನ್ನು ಅಂದರೆ IAS, IPS, ಇತ್ಯಾದಿ ಪರೀಕ್ಷೆಗಳನ್ನು ಬರೆಯಲು ಬಯಸುವ ವಿದ್ಯಾರ್ಥಿಗಳಿಗೆ ಅತ್ಯುತ್ತಮವಾದ ತರಬೇತಿ, ಮಾರ್ಗದರ್ಶನ ನೀಡಲಾಗುತ್ತದೆ.



2027ರ ಲೋಕಸೇವಾ ಆಯೋಗದ ಪರೀಕ್ಷೆಗಳನ್ನು ಬರೆಯಲು ಇಚ್ಛಿಸುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅವಕಾಶ ವಿದೆ. ವಾಸವಿ ಅಕಾಡಮಿ ನಡೆಸುವ ಪ್ರವೇಶ ಪರೀಕ್ಷೆಗಳಲ್ಲಿ ಉತ್ತಮ ಅಂಕಗಳಿಸಿದ ಉತ್ತೀರ್ಣರಾಗುವ ಮೊದಲ 30 ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸಂಪೂರ್ಣ ಉಚಿತವಾದ ಶಿಕ್ಷಣ ನೀಡಲಾಗುತ್ತದೆ. ಯಾವುದೇ ಡಿಗ್ರಿ ಮತ್ತು ಸ್ನಾತಕೋತ್ತರ ಪದವಿ ಪಡೆದುಕೊಂಡಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅವಕಾಶವಿದೆ. ಅತ್ಯಂತ ಹಿರಿಯ, ಅನುಭವಿ, ಪರಿಣಿತ ಬೋಧಕ ತಂಡವನ್ನು ಹೊಂದಿರುವ ನಮ್ಮ ಸಂಸ್ಥೆಯ 8ನೇ ಬ್ಯಾಚ್‌ಗೆ ಸೇರಲು ಇಚ್ಛಿಸುವ ವಿದ್ಯಾರ್ಥಿಗಳಿಗೆ 19-07-2026 ಭಾನುವಾರ ಬೆಂಗಳೂರು ನಗರದಲ್ಲಿ ಪ್ರವೇಶ ಪರೀಕ್ಷೆ ನಂತರ ಅದೇ ದಿನ ಮೌಖಿಕ ಪರೀಕ್ಷೆಯೂ ಇರುತ್ತದೆ.

ಆಸಕ್ತ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : 30-06-2026. ವಿವರಗಳಿಗೆ ಸಂಪರ್ಕಿಸಿ ದೂರವಾಣಿ ಸಂಖ್ಯೆ : 9663900439 / 080-22206151 / 52 ಅಥವಾ ವೆಬ್‌ಸೈಟ್: https://vasaviacademy.com ಗೆ ಭೇಟಿ ನೀಡಲು ಕೋರಿದೆ. ಬಾಗೇಪಲ್ಲಿ ನಟರಾಜ್ ತಿಳಿಸಿದ್ದಾರೆ.

# ಫಲಾನುಭವಿಗಳ ಸಮೀಕ್ಷೆಯಲ್ಲಿ ಸೇರ್ಪಡೆಗೆ ಅರ್ಜಿ ಆಹ್ವಾನ

ರಾಮನಗರ

ಪ್ರಧಾನಮಂತ್ರಿ ಆವಾಸ್ (ನಗರ)-2.0 ಯೋಜನೆಯಡಿ ಸರ್ವರಿಗೂ ಸೂರು ಅಭಿಯಾನದಡಿ ಕೊಳಚೆ ನಿವಾಸಿಗಳನ್ನು ಒಳಗೊಂಡಂತೆ ನಗರ ಪ್ರದೇಶದ ವಸತಿ ರಹಿತ ಬಡವರು ಹಾಗೂ ಮಧ್ಯಮ ವರ್ಗದ ಕುಟುಂಬಗಳಿಗೆ ವಸತಿ ಸೌಲಭ್ಯ ಕಲ್ಪಿಸುವ ಉದ್ದೇಶ ಹೊಂದಲಾಗಿದ್ದು, ಮುಂದಿನ 5 ವರ್ಷಗಳಲ್ಲಿ ದೇಶಾದ್ಯಂತ ಒಂದು ಕೋಟಿ ನಗರ ಕುಟುಂಬಳಿಗೆ ಸಹಾಯಧನದ ಮೂಲಕ ಸೂರು ಒದಗಿಸುವ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿರುತ್ತದೆ.

ಈ ಯೋಜನೆಯ ಮಾರ್ಗಸೂಚಿಗಳನ್ವಯ ರಾಜ್ಯಾದ್ಯಂತ ವಸತಿ ರಹಿತ ಹಾಗೂ ನಿವೇಶನ ರಹಿತ ಫಲಾನುಭವಿಗಳ ಸಮೀಕ್ಷೆ ಕೈಗೊಳ್ಳಲು ಸೂಚಿಸಿರುವ ಮೇರೆಗೆ ಚನ್ನಪಟ್ಟಣ ನಗರಸಭೆ ಸಾರ್ವಜನಿಕರು ಈ ಯೋಜನೆಯ ಸದುಪಯೋಗವನ್ನು ಪಡೆದುಕೊಳ್ಳಬಹುದು.

ಪ್ರಧಾನಮಂತ್ರಿ ಆವಾಸ್ ನಗರ 1.0 ಯೋಜನೆಯ ಸಮೀಕ್ಷೆಯಲ್ಲಿ ಸೇರಿ ವಸತಿ ಸೌಲಭ್ಯ ಪಡೆಯದೇ ಉಳಿದಿರುವ ಎಲ್ಲಾ ಅರ್ಹ ಫಲಾನುಭವಿಗಳನ್ನು ಪ್ರಧಾನ ಮಂತ್ರಿ ಅವಾಸ್ ನಗರ 2.0ಸಮೀಕ್ಷೆಯಲ್ಲಿ ಸೇರಬಹುದು. ವಸತಿ ರಹಿತ ಫಲಾನುಭವಿಗಳು ಸ್ವಂತ ನಿವೇಶನ ಹೊಂದಿದ್ದಲ್ಲಿ ಹಕ್ಕುಪತ್ರ/ಕ್ರಯಪತ್ರ/ದಾನಪತ್ರ/ಉಡುಗೊರೆ ಪತ್ರ/ಖಾತಾ ಪತ್ರಗಳಲ್ಲಿ ಯಾವುದಾದರೂ ದಾಖಲೆಯನ್ನು ಹೊಂದಿರಬೇಕು.

ಈ ಹಿಂದೆ ಪ್ರಧಾನಮಂತ್ರಿ ಆವಾಸ್ ನಗರ ಯೋಜನೆಯಡಿ ಆಯ್ಕೆಯಾಗಿ ಮನೆ ನಿರ್ಮಿಸದೇ ದಿನಾಂಕ: 31-12-2023ರ ನಂತರ ಕೇಂದ್ರ ಸರ್ಕಾರದಿಂದ ಮನೆ ರದ್ದುಗೊಂಡ ಫಲಾನುಭವಿಗಳು ಸಮೀಕ್ಷೆಯಲ್ಲಿ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.

ರಾಜ್ಯ ಮತ್ತು ಕೇಂದ್ರ ಸರ್ಕಾರದ ವಸತಿ ಯೋಜನೆಯಡಿ ಈಗಾಗಲೇ ವಸತಿ ಸೌಲಭ್ಯ ಪಡೆದಿರುವ ಫಲಾನುಭವಿಗಳು ಸಮೀಕ್ಷೆಯಡಿ ಸೇರಲು ಅನರ್ಹರಾಗಿರುತ್ತಾರೆ.

ಆಸಕ್ತಿದಾಯಕ ಸಾರ್ವಜನಿಕರು ಈ ಯೋಜನೆಯ ಸಮೀಕ್ಷೆಯಲ್ಲಿ ಸೇರ್ಪಡೆಯಾಗಲು ಜೂ.30ರೊಳಗೆ ಕೇಂದ್ರ ಸರ್ಕಾರದ ಆನ್‌ಲೈನ್ ಪೋರ್ಟಲ್‌ನಲ್ಲಿ ಲಾಗಿನ್‌ನಲ್ಲಿ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗೆ ಚನ್ನಪಟ್ಟಣ ನಗರಸಭಾ ಕಾರ್ಯಾಲಯದ ವಸತಿ ಶಾಖೆಯ ಸಿಬ್ಬಂದಿಗಳನ್ನು ಸಂಪರ್ಕಿಸುವಂತೆ ಚನ್ನಪಟ್ಟಣ ನಗರಸಭೆಯ ಪೌರಾಯುಕ್ತರು ತಿಳಿಸಿದ್ದಾರೆ.

# ಕೆರೆ ಅಭಿವೃದ್ಧಿ ಕಾಮಗಾರಿ 15 ದಿನಗಳಲ್ಲಿ ಪೂರ್ಣಗೊಳಿಸಲು ಸೂಚನೆ

ಬೆಂಗಳೂರು

ಹಲಗೆವಡೇರಹಳ್ಳಿ ಕೆರೆಗೆ ಕೊಳಚೆ ನೀರು ಸೇರದಂತೆ ನಿರ್ಮಿಸುತ್ತಿರುವ ತಿರುವು ಗಾಲುವೆ ಕಾಮಗಾರಿಯನ್ನು 15 ದಿನಗಳಲ್ಲಿ ಪೂರ್ಣಗೊಳಿಸುವಂತೆ ಎಫ್.ಇ.ಸಿ.ಸಿ ವಿಶೇಷ ಆಯುಕ್ತರಾದ ಸುಷಮಾ ಗೋಡಬೋಲೆ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪಶ್ಚಿಮ ವಲಯದ ಆರ್.ಆರ್ ನಗರ ವ್ಯಾಪ್ತಿಯ ಪ್ರವಾಹ ಪೀಡಿತ ಪ್ರದೇಶಗಳು ಹಾಗೂ ಹಲಗೆವಡೇರಹಳ್ಳಿ ಕೆರೆಯನ್ನು ಪರಿಶೀಲಿಸಿದ ವೇಳೆ ಮಾತನಾಡಿದ ಅವರು, ಹಲಗೆವಡೇರಹಳ್ಳಿ ಕೆರೆಯ ಅಭಿವೃದ್ಧಿ ಕಾಮಗಾರಿ ಪ್ರಗತಿಯಲ್ಲಿದ್ದು, ವಾಕ್‌ವೇಗೆ ಗ್ರಾವೆಲ್ ಅಳವಡಿಸಬೇಕು ಹಾಗೂ ಬಾಕಿ ಉಳಿದಿರುವ ಫೆನ್ಸಿಂಗ್ ಕಾಮಗಾರಿಯನ್ನು ಕೂಡಲೇ ಪೂರ್ಣಗೊಳಿಸುವಂತೆ ಸೂಚನೆ ನೀಡಿದರು.

ಕೆರೆಗೆ ಕೊಳಚೆ ನೀರು ಸೇರದಂತೆ ತಿರುವು ಗಾಲುವೆ ನಿರ್ಮಾಣ ಕಾಮಗಾರಿ ಶೇ. 60ರಷ್ಟು ಪೂರ್ಣಗೊಂಡಿದ್ದು, ಉಳಿದ ಕಾಮಗಾರಿಯನ್ನು 15 ದಿನಗಳಲ್ಲಿ ಪೂರ್ಣಗೊಳಿಸಬೇಕು. ತೋಟಗಾರಿಕಾ ವಿಭಾಗದೊಂದಿಗೆ ಸಮನ್ವಯ ಸಾಧಿಸಿ, ಕೆರೆಯ ಸುತ್ತಮುತ್ತ ಅಲಂಕಾರಿಕ ಹೂಬಿಡುವ ಸಸಿಗಳು ಹಾಗೂ ಹಣ್ಣಿನ ಸಸಿಗಳನ್ನು ನೆಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಹಲಗೆವಡೇರಹಳ್ಳಿ ಕೆರೆ ಸಮೀಪದಲ್ಲಿರುವ ಹಳೆಯ ಬಾವಿಯ ಪುನಶ್ಚೇತನ ಕಾಮಗಾರಿಗೆ ಸಂಬಂಧಿಸಿದಂತೆ ಪ್ರಸ್ತಾವನೆ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಯಿತು.



ಜೊತೆಗೆ ಜುಲೈ ಮೊದಲ ವಾರದೊಳಗೆ ಉದ್ಯಾನವನ ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸುವಂತೆ ನಿರ್ದೇಶನ ನೀಡಿದರು.

ರಾಜರಾಜೇಶ್ವರಿ ನಗರ ಆರ್ಚ್ ಸಮೀಪದ ರಾಜಕಾಲುವೆಯನ್ನು ಪರಿಶೀಲಿಸಿ, ಭಾರಿ ಮಳೆಯ ಸಂದರ್ಭದಲ್ಲಿ ಹೆಚ್ಚುವರಿ ನೀರು ಮುಖ್ಯ ರಸ್ತೆಗೆ ಹರಿದು ಪ್ರವಾಹ ಉಂಟಾಗುವುದನ್ನು ತಡೆಗಟ್ಟಲು ರಸ್ತೆಯ ಪಕ್ಕದಲ್ಲಿರುವ ರಾಜಕಾಲುವೆಯ ತಡೆಗೋಡೆಯ ಎತ್ತರವನ್ನು ಹೆಚ್ಚಿಸುವಂತೆ ಸಲಹೆ ನೀಡಲಾಯಿತು.

ನಾಗರಭಾವಿ ಮುಖ್ಯ ರಸ್ತೆಯ ಜಿ.ಎಂ. ಆಸ್ಪತ್ರೆ ಎದುರಿನ ಪ್ರವಾಹ ಪೀಡಿತ ಪ್ರದೇಶದಲ್ಲಿ ಚರಂಡಿಗಳ ಹೂಳೆತ್ತುವಿಕೆ ಕಾರ್ಯ ಕೈಗೊಂಡ ಪರಿಣಾಮ, ಆ ಭಾಗದಲ್ಲಿ ಉಂಟಾಗುತ್ತಿದ್ದ ಜಲಾವೃತ ಸಮಸ್ಯೆಯನ್ನು ನಿವಾರಿಸಲಾಗಿದೆ.

ಮೈಸೂರು ರಸ್ತೆಯ ನಾಯಂಡಹಳ್ಳಿ ಪೆಟ್ರೋಲ್ ಬಂಕ್ ಸಮೀಪದ ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ, ಚರಂಡಿಗಳ ದುರಸ್ತಿ ಹಾಗೂ ಹೂಳೆತ್ತುವಿಕೆ ಕಾರ್ಯಗಳನ್ನು ತ್ವರಿತವಾಗಿ ಕೈಗೊಳ್ಳುವಂತೆ ಸೂಚಿಸಲಾಯಿತು.

ಈ ಸಂದರ್ಭದಲ್ಲಿ ಕಾರ್ಯಪಾಲಕ ಅಭಿಯಂತರರು, ಸಹಾಯಕ ಕಾರ್ಯಪಾಲಕ ಅಭಿಯಂತರರು ಹಾಗೂ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

# ಪರಿಸರ ಉಳಿಸಿ ಜಾಥಾ

ತಿಪಟೂರು

ನಗರದ ಠಾಗೂರ್ ವಿದ್ಯಾ ಸಂಸ್ಥೆಯ ಆಂಗ್ಲ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಮಕ್ಕಳಿಂದ ಪರಿಸರ ದಿನಾಚರಣೆ ಅಂಗವಾಗಿ, ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಪರಿಸರ ಉಳಿಸಿ ಎಂಬ ಅರಿವಿನೊಂದಿಗೆ ಜಾಥಾ ಮತ್ತು ಸಾರ್ವಜನಿಕರಿಗೆ ಸುಮಾರು 150ಕ್ಕೂ ಹೆಚ್ಚು ವಿವಿಧ ತಳಿಯ ಗಿಡಗಳನ್ನು ವಿತರಿಸಲಾಯಿತು.

ಜಾಥಾ ಕಾರ್ಯಕ್ರಮದಲ್ಲಿ ನಗರದ ಜನತೆಗೆ ಪ್ಲಾಸ್ಟಿಕ್ ತ್ಯಾಜ್ಯದಿಂದಾಗುವ ಅನಾಹುತಗಳ ಬಗ್ಗೆ ಮತ್ತು ಪ್ಲಾಸ್ಟಿಕ್ ಅನ್ನು ಸಂಪೂರ್ಣವಾಗಿ ನಿಷೇಧಿಸಿ, ಬಳಸಿದಂತೆ ಜಾಗೃತಿ ಮೂಡಿಸಿ, ಪರಿಸರ ಉಳಿಸಿ ತಮ್ಮ ಮನೆಯ ಸುತ್ತ ಗಿಡ,ಮರಗಳನ್ನು ಬೆಳೆಸಿ ಎಂಬ ಸಂದೇಶವನ್ನು ಶಾಲಾ ವಿದ್ಯಾರ್ಥಿಗಳು ಸಾರ್ವಜನಿಕರಲ್ಲಿ ಅರಿವು ಮೂಡಿಸಿದರು.

ಸುಮಾರು 150ಕ್ಕೂ ಹೆಚ್ಚು ಸಸಿಗಳನ್ನು ಶಾಲಾ ಮಕ್ಕಳಿಂದ ನಗರದ ನಾಗರೀಕರಿಗೆ, ಆಟೋ ಚಾಲಕರಿಗೆ, ಬೀದಿ ಬದಿ ವ್ಯಾಪಾರಸ್ಥರಿಗೆ, ಹೂವಿನ ವ್ಯಾಪಾರಸ್ಥರಿಗೆ, ಹೋಟೆಲ್ ಸಿಬ್ಬಂದಿ, ಬ್ಯಾಂಕ್ ಸಿಬ್ಬಂದಿ, ಆಸ್ಪತ್ರೆ ಸಿಬ್ಬಂದಿ, ವೈದ್ಯರಿಗೆ, ಆರಕ್ಷಕ ಸಿಬ್ಬಂದಿ ಸೇರಿದಂತೆ ಹಲವರಿಗೆ ವಿತರಿಸಲಾಯಿತು.




ವಿದ್ಯಾರ್ಥಿಗಳು, ಸಾರ್ವಜನಿಕರ ಜೊತೆ ಸಂವಾದ ನಡೆಸಿ, ನಗರಸಭೆ ವೃತ್ತದಲ್ಲಿ ವಿದ್ಯಾರ್ಥಿಗಳು ಸಾರ್ವಜನಿಕರಲ್ಲಿ ಭಾಷಣದ ಮೂಲಕ ಅರಿವು ಮೂಡಿಸಿದರು.

ಶಾಲಾ ಮುಖ್ಯ ಶಿಕ್ಷಕ ಫಾರೂಕ್ ಸೇರಿದಂತೆ ವಿದ್ಯಾ ಸಂಸ್ಥೆಯ ಆಡಳಿತ ಮಂಡಳಿಯ ಪದಾಧಿಕಾರಿಗಳು, ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

# ತಿರುಮಗೊಂಡಹಳ್ಳಿಯ ರೈಲ್ವೇ ಗೇಟ್ ಬಳಿ ಮೇಲ್ಸೇತುವೆ ನಿರ್ಮಾಣಕ್ಕೆ ಆಗ್ರಹ

ದೊಡ್ಡಬಳ್ಳಾಪುರ

ತಾಲ್ಲೂಕಿನ ತೂಬಗೆರೆ ಹೋಬಳಿ ತಿರುಮಗೊಂಡ ಹಳ್ಳಿಯ ರೈಲ್ವೆ ಗೇಟ್ ಪದೇ ಪದೇ ಮುಚ್ಚುವುದರಿಂದ ಸುಮಾರು ಘಂಟೆಗಳ ಕಾಲ ಸಂಚಾರ ದಟ್ಟಣೆ ಉಂಟಾಗಿ, ವಾಹನ ಸವಾರರು, ಶಾಲಾ ಮಕ್ಕಳು ಹಾಗೂ ತುರ್ತು ಸೇವೆಗಳ ವಾಹನಗಳಿಗೆ ತೀವ್ರ ತೊಂದರೆಯಾಗಿದೆ. ಇದಕ್ಕೆ ದೀರ್ಘಕಾಲದ ಪರಿಹಾರವಾಗಿ ರೈಲ್ವೆ ಮೇಲ್ಸೇತುವೆ ನಿರ್ಮಿಸದಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.

ರೈಲ್ವೇ ಇಲಾಖೆಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ಜನಪ್ರತಿನಿಧಿಗಳಿಗೆ ಮನವಿ ಸಲ್ಲಿಸಿದರೂ ಪ್ರಯೋಜನವಾಗಿಲ್ಲ. ತೂಬಗೆರೆ ಹೋಬಳಿಯ ಶ್ರೀಕ್ಷೇತ್ರ ಘಾಟಿ ಸುಬ್ರಮಣ್ಯ ದೇವಾಲಯವು ರಾಜ್ಯದ ಪ್ರಮುಖ ಧಾರ್ಮಿಕ ಕ್ಷೇತ್ರಗಳಲ್ಲಿ ಒಂದು. ಧಾರ್ಮಿಕ ಹಾಗು ನಾಗಾರಾಧನೆಯ ಪ್ರಮುಖ ಕ್ಷೇತ್ರವು ಹೌದು.

ಬೆಂಗಳೂರಿನಿಂದ ಕೇವಲ 60ಕಿ.ಮೀ. ದೂರದಲ್ಲಿರುವ ಈ ಕ್ಷೇತ್ರಕ್ಕೆ ಪ್ರತಿದಿನ ಸಾವಿರಾರು ಭಕ್ತರು ಆಗಮಿಸುತ್ತಿದ್ದಾರೆ. ದೇವಸ್ಥಾನಕ್ಕೆ ಹೋಗಲು ರೈಲ್ವೆ ಗೇಟ್ ಪದೇ ಪದೇ ಮುಚ್ಚುವುದರಿಂದ ಸಮಸ್ಯೆಯಾಗಿದೆ. ದೂರದ ಊರಿನಿಂದ ಬಂದು ದೇವರ ದರ್ಶನ ಮುಗಿಸಿ ನಮ್ಮ ಕೆಲಸ ಕಾರ್ಯಗಳಿಗೆ ತುರ್ತಾಗಿ ಹೋಗಲು ರೈಲ್ವೆ ಗೇಟ್ ಮುಚ್ಚಿದಾಗ ವಾಹನಗಳು ಸಾಲುಗಟ್ಟಿ ನಿಲ್ಲುವುದರಿಂದ ಕಿಲೋ ಮೀಟರ್‌ಗಟ್ಟಲೆ ಸಂಚಾರ ದಟ್ಟಣೆ ಉಂಟಾಗುತ್ತದೆ. ಇದರಿಂದ ವಾಹನ ಸವಾರರು, ಪ್ರಯಾಣಿಕರಿಗೆ ಸಾಕಷ್ಟು ತೊಂದರೆಯಾಗುತ್ತಿದೆ.



ದೇವಸ್ಥಾನ, ಮಠಗಳು ಅಥವಾ ಧಾರ್ಮಿಕ ಕೇಂದ್ರಗಳಿಗೆ ಹೋಗುವ ಮಾರ್ಗಗಳಲ್ಲಿ ರೈಲ್ವೆ ಗೇಟ್ ಘಂಟೆ ಗಟ್ಟಲೆ ಮುಚ್ಚುವುದರಿಂದ ಭಕ್ತರು ಸಾಕಷ್ಟು ಸಮಯ ಕಾಯಬೇಕಾಗುತ್ತದೆ. ಇದರಿಂದ ದಟ್ಟಣೆ ಉಂಟಾಗಿ, ವಾಹನ ಸವಾರರು ಮತ್ತು ಪಾದಚಾರಿಗಳಿಗೆ ತೀವ್ರ ತೊಂದರೆಯಾಗುತ್ತದೆ. ರೈಲ್ವೆ ಇಲಾಖೆಯು ರೈಲುಗಳ ಸುರಕ್ಷತೆಗಾಗಿ ಗೇಟ್‌ಗಳನ್ನು ಮುಚ್ಚುವುದು ಅನಿವಾರ್ಯವಾದರೂ, ಸಾರ್ವಜನಿಕರ ಅನುಕೂಲಕ್ಕಾಗಿ ಇಂತಹ ಸ್ಥಳಗಳಲ್ಲಿ ಮೇಲ್ಸೇತುವೆ ಅಥವಾ ಸುರಂಗ ಮಾರ್ಗ ನಿರ್ಮಿಸುವುದು ಅತ್ಯಂತ ಅಗತ್ಯವಾಗಿದೆ.

-ರವಿಕುಮಾರ್, ಭಕ್ತ

ರೈಲ್ವೆ ಗೇಟ್ ಮುಚ್ಚುವುದರಿಂದ ಸಾರ್ವಜನಿಕರಿಗೆ ನಿತ್ಯವೂ ಸಾಕಷ್ಟು ತೊಂದರೆಗಳಾಗುತ್ತವೆ. ನಿರ್ದಿಷ್ಟವಾಗಿ ದೊಡ್ಡ ಪಟ್ಟಣಗಳು ಮತ್ತು ನಗರ ಪ್ರದೇಶಗಳಲ್ಲಿ ಇರುವ ಕಾರ್ಖಾನೆ ಹಾಗೂ ಕಛೇರಿಗಳಿಗೆ ತೆರಳಲು ಹಾಗು ದೈನಂದಿನ ಜೀವನದ ಮೇಲೆ ಗಂಭೀರ ಪರಿಣಾಮ ಬೀರುತ್ತದೆ.

-ಹಾಡೋನಹಳ್ಳಿ ಮುನೇಗೌಡ, ಕಟ್ಟಡ ಗುತ್ತಿಗೆದಾರ

ರೈಲ್ವೆ ಗೇಟ್ ಮುಚ್ಚುವುದರಿಂದ ಆಂಬ್ಯುಲೆನ್ಸ್ ನಂತಹ ತುರ್ತು ವಾಹನಗಳು ಸಿಲುಕಿ, ಗರ್ಭಿಣಿಯರು ಮತ್ತು ವೃದ್ಧರಿಗೆ ಆಸ್ಪತ್ರೆ ತಲುಪಲು ತೀವ್ರ ತಡವಾಗುವುದು. ತುರ್ತು ಸೇವೆಗಳಿಗೆ ತುಂಬಾ ತೊಂದರೆಯಾಗುತ್ತಿದ್ದು, ಗೇಟ್ ತೆರೆಯುವವರೆಗೆ ಕಾಯಬೇಕಾಗುತ್ತದೆಪರಿಸ್ಥಿತಿ ಎದುರಾಗಿದೆ.

ರೈಲ್ವೆ ಗೇಟ್ ಪದೇ ಪದೇ ಮುಚ್ಚುವುದರಿಂದ ತರಕಾರಿ ಸಾಗಾಟ ತಡವಾಗಿ ರೈತರಿಗೆ ಆರ್ಥಿಕ ನಷ್ಟವಾಗುತ್ತದೆ. ಸಮಯಕ್ಕೆ ಸರಿಯಾಗಿ ಮಾರುಕಟ್ಟೆ ತಲುಪದ ತರಕಾರಿಗಳು ಹಾಳಾಗುತ್ತವೆ. ಈ ಸಮಸ್ಯೆಗೆ ಪರಿಹಾರವಾಗಿ ರೈಲ್ವೆ ಮೇಲ್ಸೇತುವೆ ನಿರ್ಮಾಣ ಅಗತ್ಯವಾಗಿದೆ.


ಭಕ್ತರಿಗೂ ರೈತರಿಗೂ ತುರ್ತು ಸೇವೆಗಳಿಗೂ ರೈಲ್ವೆ ಗೇಟ್ ಮುಚ್ಚುವುದರಿಂದ ತೊಂದರೆಯಾಗುತ್ತಿದೆ ಎಂದು ಸಂಬಂಧಪಟ್ಟ ಅಧಿಕಾರಿಗಳಿಗೂ ಹಾಗು ಸಂಸದರಿಗೂ ತಿರುಮಗೊಂಡನಹಳ್ಳಿಯಲ್ಲಿ ರೈಲ್ವೆ ಮೇಲ್ಸೇತುವೆ ನಿರ್ಮಾಣ ಮಾಡಿ ಎಂದು ಸಾರ್ವಜನಿಕರಿಂದ ಮನವಿ ಸಲ್ಲಿಸಿದರೂ ಪ್ರಯೋಜನವಾಗುತ್ತಿಲ್ಲ ಎಂದು

# ಕೆಂಪೇಗೌಡರ ಎರಡೆರಡು ಜಯಂತಿಗೆ ಆಸ್ಪದ ಕಲ್ಪಿಸುವುದಿಲ್ಲ: ಎಂ ಮುನಿರಾಜು

ಬಂಗಾರಪೇಟೆ

ನಗರಸಭೆ ಸಭಾಂಗಣದಲ್ಲಿ ತಾಲ್ಲೂಕು ಆಡಳಿತ ಹಾಗೂ ರಾಷ್ಟ್ರೀಯ ಹಬ್ಬಗಳ ಆಚರಣೆ ಸಮಿತಿ ಆಯೋಜಿಸಲಾಗಿದ ನಾಡ ಪ್ರಭು ಕೆಂಪೇಗೌಡ ಅವರ ಜಯಂತಿ ಪೂರ್ವಭಾವಿ ಸಭೆಯಲ್ಲಿ ತಾಲೂಕಿನಲ್ಲಿ ನಾಡ ಪ್ರಭು ಕೆಂಪೇಗೌಡರ ಎರಡೆರಡು ಜಯಂತಿಗೆ ಆಸ್ಪದ ಕಲ್ಪಿಸುವುದಿಲ್ಲ ಎಂದು ತಾಲೂಕು ಕೆಂಪೇಗೌಡರ ಒಕ್ಕಲಿಗರ ಸಂಘದ ಅಧ್ಯಕ್ಷ ಎಂ ಮುನಿರಾಜು ತಿಳಿಸಿದರು.

ಸ್ಥಳೀಯ ನಗರಸಭೆ ಮುಂಭಾಗ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಬಾರಿ ಕೆಂಪೇಗೌಡ ಜಯಂತಿಯನ್ನು ಎರಡೆರಡು ಸಲ ಆಚರಣೆ ಮಾಡುವುದಿಲ್ಲ ಎಂದು ಸಭೆಯಲ್ಲಿ ಎಲ್ಲಾ ಸಮುದಾಯದ ಮುಖಂಡರು ಒಕ್ಕರಳಿನಿಂದ ಅಭಿಪ್ರಾಯ ಪಟ್ಟಿದ್ದಾರೆ. ಇದರೊಟ್ಟಿಗೆ ಸರ್ಕಾರ ನಿಗದಿಪಡಿಸಿರುವಂತಹ ದಿನಾಂಕದಂದೇ ನಾಡಪ್ರಭು ಕೆಂಪೇಗೌಡರ ಜಯಂತಿ ಆಚರಿಸಲು ಎಲ್ಲಾ ಸಮುದಾಯದ ಮುಖಂಡರು ತೀರ್ಮಾನಿಸಿದ್ದೇವೆ.



ಪಲ್ಲಕಿಗಳಿಗೆ ಧನ ಸಹಾಯ ತಾಲೂಕಿನಾದ್ಯಂತ ಹಳ್ಳಿಗಳಲ್ಲಿರುವ ಸಮುದಾಯದ ಮುಖಂಡರು ಪಲ್ಲಕ್ಕಿಗಳನ್ನು ಕಡ್ಡಾಯವಾಗಿ ತರಲು ಮನವಿ ಮಾಡುತ್ತಾ ಒಂದು ಪಲ್ಲಕ್ಕಿಗೆ 10 ಸಾವಿರ ಧನ ಸಹಾಯ ವನ್ನು ತಾಲ್ಲೂಕು ಕೆಂಪೇಗೌಡ ಒಕ್ಕಲಿಗರ ಸಂಘ ಮತ್ತು ಶಾಸಕರು ಮಾಡಲು ತೀರ್ಮಾನಿಸಲಾಗಿದೆ. ಇದರೊಟ್ಟಿಗೆ ಪ್ರತಿ ಹಳ್ಳಿಗಳಿಗೂ ನಾಯಕರು, ಮುಖಂಡರು ಭೇಟಿ ನೀಡಿ ಅದ್ದೂರಿ ಜಯಂತೋತ್ಸವಕ್ಕೆ ಕೈ ಜೋಡಿಸಲು ಸಹಕಾರ ಕೋರುತೇವೆ.

ಮುಖಂಡರಾದ ಚಂದ್ರಪ್ಪ ಮಾತನಾಡಿ ಮಾನ್ಯ ಶಾಸಕ ಎಸ್ ಎನ್ ನಾರಾಯಣ ಸ್ವಾಮಿ ಅವರು ಕೆಂಪೇಗೌಡ ತಾಲ್ಲೂಕು ಒಕ್ಕಲಿಗರ ಸಂಘಕ್ಕೆ 15 ಗುಂಟೆ ಜಮೀನು ಮಂಜೂರು ಮಾಡುತ್ತೇನೆ, ಈ ಜಾಗದಲ್ಲಿ ನಿರ್ಮಾಣವಾಗುವ ಕಲ್ಯಾಣ ಮಂಟಪ ಧನಸಹಾಯ ಮಾಡುತ್ತೇನೆ ಎಂದು ತಿಳಿಸಿದ್ದು ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ.

ಕಲ್ಯಾಣ ಮಂಟಪ ನಿರ್ಮಾಣ ಮಾಡಿ ಸಮುದಾಯದ ಜನರಿಗೆ ಹಾಗೂ ಬೇರೆ ಯಾವುದೇ ಸಮುದಾಯಗಳ ಕಾರ್ಯಕ್ರಮಗಳನ್ನು ಮಾಡಿಕೊಳ್ಳಲು ಯಾವುದೇ ರೀತಿಯ ಬಾಡಿಗೆ ಪಡೆಯದೆ ಕಲ್ಯಾಣ ಮಂಟಪವನ್ನು ಉಚಿತವಾಗಿ ನೀಡಲು ಸಮುದಾಯದ ಮುಖಂಡರು ತೀರ್ಮಾನಿಸಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಸಂಘದ ಗೌರವಾಧ್ಯಕ್ಷ ಡಾಕ್ಟರ್ ಪ್ರಕಾಶ್ ಎಚ್ ಕೆ ನಾರಾಯಣಸ್ವಾಮಿ ಶ್ರೀನಿವಾಸ್ ಜುಂಜುನಲ್ಲಿ ನಾರಾಯಣಸ್ವಾಮಿ ಲಕ್ಷ್ಮಣ್ ಮುದ್ದೇಗೌಡ ಮಂಜುನಾಥ್ ಮಹದೇವ್ ಹಾಗೂ ಸಮುದಾಯದ ಹಲವು ಮುಖಂಡರು ಉಪಸ್ಥಿತರಿದ್ದರು.

# ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ



ಬೇತಮಂಗಲ

ವಹ್ನಿಕುಲ ಕ್ಷತ್ರಿಯ ವೀರಕುಮಾರರ ಸೇವಾ ಸಂಘದ ವತಿಯಿಂದ ಬೇತಮಂಗಲದಲ್ಲಿ ಬೃಹತ್ ಮಹಾಸಭೆ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ ಸಮಾರಂಭವನ್ನು ಅದ್ದೂರಿಯಾಗಿ ಆಯೋಜಿಸಲಾಯಿತು.

ಪಟ್ಟಣದ ಶ್ರೀ ದ್ರೌಪದಾಂಬೆ ದೇವಸ್ಥಾನದ ಸಮುದಾಯದ ಭವನದಲ್ಲಿ ಆಯೋಜಿಸಲಾಗಿದ್ದ ವಹ್ನಿಕುಲ ಕ್ಷತ್ರಿಯ ಮಹಾಸಭೆ ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ ಕಾರ್ಯಕ್ರಮಕ್ಕೆ ಗಣ್ಯರು ಚಾಲನೆ ನೀಡಿದರು. ಈ ವೇಳೆ ಸಮುದಾಯದ ಮುಖಂಡರು ಮಾತನಾಡಿ, ವಿದ್ಯಾರ್ಥಿಗಳು ಶಿಕ್ಷಣದ ಮೂಲಕ ಉನ್ನತ ಸಾಧನೆ ಮಾಡಿ ಸಮಾಜಕ್ಕೆ ಕೀರ್ತಿ ತರಬೇಕು ಮತ್ತು ಸಮಾಜದ ಸಂಘಟನೆ ಹಾಗೂ ಏಕತೆಯೇ ಅಭಿವೃದ್ಧಿಗೆ ಮೂಲವಾಗಿದ್ದು, ಇಂತಹ ಕಾರ್ಯಕ್ರಮಗಳು ಯುವ ಪೀಳಿಗೆಗೆ ಪ್ರೇರಣೆಯಾಗುತ್ತವೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮಕ್ಕೆ ಸಮುದಾಯದ ಸದಸ್ಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದು ಹಿಂದಿನ ದಿನಗಳಲ್ಲಿ ಸಮಾಜ ಪ್ರತಿಭಾ ವಂತ ವಿದ್ಯಾರ್ಥಿಗಳನ್ನು ಗುರುತಿಸಿ ಜಿಲ್ಲಾ ಮಟ್ಟದಲ್ಲಿ ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತಿತ್ತು ಇದೀಗ ನಮ್ಮ ಕೆಜಿಎಫ್ ತಾಲ್ಲೂಕಿನಲ್ಲಿ ಮೊದಲನೇ ಬಾರಿಗೆ ವಹ್ನಿಕುಲ ಕ್ಷತ್ರಿಯರ ವತಿಯಿಂದ ಆಯೋಜನೆ ಮಾಡಲಾಗಿದೆ.

ಮುಂದಿನ ದಿನಗಳಲ್ಲಿ ಇನ್ನಷ್ಟು ಬೃಹತ್ ಮಟ್ಟದಲ್ಲಿ ನಿರಂತರವಾಗಿ ಮಾಡುವುದಾಗಿ ತಿಳಿಸಿದರು.

ಎಸ್‌ಎಸ್ ಎಲ್‌ಸಿ-ಪಿಯುಸಿ ಹಾಗೂ ಪದವಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕಗಳನ್ನು ಪಡೆದಿರುವ ಕ್ಷತ್ರಿಯ ಸಮುದಾಯದ ಸುಮಾರು 60 ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಶಾಲು ಹೊದಿಸಿ ಹೂ ಗುಚ್ಚ ನೀಡುವ ಮೂಲಕ ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ವಹ್ನಿಕುಲ ಕ್ಷತ್ರಿಯ ವೀರಕುಮಾರರ ಸಂಘದ ಪದಾಧಿಕಾರಿಗಳು ಮತ್ತು ಸಮಾಜದ ಮುಖಂಡರು ಹಾಗೂ ಹಿರಿಯರು ಯುವಕರು ವಿದ್ಯಾರ್ಥಿಗಳಿದ್ದರು.

# ಕಸ ಹಾಕುವವರ ವಿರುದ್ಧ ಎಫ್‌ಐಆರ್ ದಾಖಲಿಸಲು ಆಯುಕ್ತರ ಕಟ್ಟುನಿಟ್ಟಿನ ಆದೇಶ

ಬೆಂಗಳೂರು

ಉತ್ತರ ನಗರ ಪಾಲಿಕೆ ವ್ಯಾಪ್ತಿಯ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯು ಮಂಗಳವಾರ ನಗರ ಪಾಲಿಕೆಯ ಆಯುಕ್ತರ ಕಚೇರಿ ಸಭಾಂಗಣದಲ್ಲಿ ಆಯುಕ್ತರಾದ ಪೋಮ್ಮಲ ಸುನೀಲ್ ಕುಮಾರ್ ಅವರ ಅಧ್ಯಕ್ಷತೆಯಲ್ಲಿ ನಡೆಯಿತು.

ಸಭೆಯಲ್ಲಿ ಅಭಿವೃದ್ಧಿ ಕಾಮಗಾರಿಗಳು, ಸಾರ್ವಜನಿಕ ದೂರುಗಳ ನಿರ್ವಹಣೆ, ಮಳೆಗಾಲದ ಮುನ್ನೆಚ್ಚರಿಕೆ ಸೇರಿದಂತೆ ಹಲವು ಪ್ರಮುಖ ವಿಷಯಗಳ ಕುರಿತು ಸಮಗ್ರ ಪರಿಶೀಲನೆ ನಡೆಸಿ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಲಾಯಿತು.

ಸಾರ್ವಜನಿಕ ದೂರುಗಳಿಗೆ ಮೊದಲ ಆದ್ಯತೆ: ಸಹಾಯ ಪೋರ್ಟಲ್ ಹಾಗೂ



ಫೋನ್-ಇನ್ ಕಾರ್ಯಕ್ರಮಗಳ ಮೂಲಕ ಸ್ವೀಕರಿಸಲಾದ ಸಾರ್ವಜನಿಕ ದೂರುಗಳನ್ನು ಆದ್ಯತೆಯ ಮೇರೆಗೆ ಇತ್ಯರ್ಥಪಡಿಸಬೇಕು. ಅಧಿಕಾರಿಗಳ ಲಾಗಿನ್‌ನಲ್ಲಿ ಬಾಕಿ ಉಳಿದಿರುವ ಹಾಗೂ ಪುನರಾವರ್ತಿತ ದೂರುಗಳನ್ನು ತಕ್ಷಣ ಪರಿಹರಿಸಿ ಪ್ರಕರಣಗಳನ್ನು ಮುಕ್ತಾಯಗೊಳಿಸಬೇಕು. ವರ್ಗಾವಣೆಗೊಂಡಿರುವ ಅಧಿಕಾರಿಗಳ ಲಾಗಿನ್‌ನಲ್ಲಿರುವ ಬಾಕಿ ಪ್ರಕರಣಗಳನ್ನು ಸಂಬಂಧಿತ ಪ್ರಸ್ತುತ ಅಧಿಕಾರಿಗಳ ಲಾಗಿನ್‌ಗೆ ವರ್ಗಾಯಿಸಿ ಇತ್ಯರ್ಥಪಡಿಸುವಂತೆ ಆಯುಕ್ತರು ಸೂಚಿಸಿದರು. ಮಾರುಕಟ್ಟೆ ಪ್ರದೇಶಗಳು ಹಾಗೂ ಕಸದ ವಾಹನಗಳ ಸಮರ್ಪಕ ನಿರ್ವಹಣೆ ಇಲ್ಲದೆ ಉಂಟಾಗಿರುವ ಬ್ಲಾಕ್ ಸ್ಪಾಟ್‌ಗಳನ್ನು ತಕ್ಷಣ ಸ್ವಚ್ಛಗೊಳಿಸಬೇಕು. 'UB100' ಅಭಿಯಾನದಡಿ ಗುರುತಿಸಲಾದ ಸ್ಥಳಗಳಲ್ಲಿ ವಿಶೇಷ ಕಾರ್ಯಾಚರಣೆ ನಡೆಸಿ ಸಂಪೂರ್ಣ ಸ್ವಚ್ಛತೆ ಕಾಪಾಡಬೇಕು. ಸ್ವಚ್ಛಗೊಳಿಸಿದ ಸ್ಥಳಗಳಲ್ಲಿ ಪುನಃ ಕಸ ಹಾಕುವುದು ಕಂಡುಬಂದಲ್ಲಿ, ಸಾಕ್ಷ್ಯಾಧಾರಗಳೊಂದಿಗೆ ಅಂತಹವರ ವಿರುದ್ಧ ಕಡ್ಡಾಯವಾಗಿ ಎಫ್‌ಐಆರ್ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಯುಕ್ತರು ಎಚ್ಚರಿಸಿದರು.

ಆರ್ಟೀರಿಯಲ್ ಹಾಗೂ ಸಬ್-ಆರ್ಟೀರಿಯಲ್ ಮಳೆನೀರು ಕಾಲುವೆಗಳ ಹೂಳು ಎತ್ತುವ ಕಾರ್ಯವನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು. ಎಸ್‌ಐಪಿ ಹಾಗೂ ಸಿಎಂಐಡಿಪಿ ಯೋಜನೆಗಳ ಕಾಮಗಾರಿಗಳನ್ನು ನಿಗದಿತ ಅವಧಿಯಲ್ಲಿ ಮುಗಿಸಬೇಕು.

ಜೂನ್ 20 ಮತ್ತು 21 ರೊಳಗೆ 25 ಸಾವಿರಕ್ಕೂ ಹೆಚ್ಚು ಗಿಡಗಳನ್ನು ನೆಡುವ ಬೃಹತ್ ಕಾರ್ಯಕ್ಕೆ ಸಿದ್ಧತೆ ಮಾಡಿಕೊಳ್ಳಬೇಕು. ಜೂನ್ 15ರೊಳಗೆ ರಸ್ತೆ ಬದಿಯ ಮರದ ಅವಶೇಷಗಳು ಹಾಗೂ ತ್ಯಾಜ್ಯಗಳನ್ನು ತೆರವುಗೊಳಿಸಬೇಕು.

ಸಾರ್ವಜನಿಕ ಸುರಕ್ಷತೆ:

ನಗರದ ಅಪಾಯಕಾರಿ ಕಟ್ಟಡಗಳು ಹಾಗೂ ಕುಸಿಯುವ ಸ್ಥಿತಿಯಲ್ಲಿರುವ ಕಾಂಪೌಂಡ್‌ಗಳನ್ನು ಗುರುತಿಸಿ ತಕ್ಷಣ ತೆರವುಗೊಳಿಸಬೇಕು.

ಅನಧಿಕೃತ ವಾಹನ ನಿಲುಗಡೆ (ನೋ ಪಾರ್ಕಿಂಗ್) ವಿರುದ್ಧ ಟೋಯಿಂಗ್ ಕಾರ್ಯಾಚರಣೆಯನ್ನು ಮತ್ತಷ್ಟು ಬಲಪಡಿಸಬೇಕು.

ಪ್ರಾಣಿ ಕಲ್ಯಾಣ ವಿಭಾಗಕ್ಕೆ ಸಂಬಂಧಿಸಿದಂತೆ, ಅರ್ಹ ಎನ್‌ಜಿಒಗಳನ್ನು ಆಯ್ಕೆ ಮಾಡಿ ಕಾರ್ಯಾದೇಶ ನೀಡಬೇಕು ಹಾಗೂ ಪ್ರತಿದಿನ ಕನಿಷ್ಠ 40 ಶ್ವಾನಗಳಿಗೆ ಸಂತಾನಹರಣ ಶಸ್ತ್ರಚಿಕಿತ್ಸೆ ನಡೆಸುವ ಗುರಿ ತಲುಪಬೇಕು ಎಂದು ತಿಳಿಸಿದರು.

ಅನುಮೋದಿತ ಕಟ್ಟಡ ನಕ್ಷೆ ಉಲ್ಲಂಘನೆಗಳ ವಿರುದ್ಧ ಟೌನ್ ಪ್ಲಾನಿಂಗ್ ವಿಭಾಗ ಹಾಗೂ ಉದ್ಯಾನಗಳ ಉತ್ತಮ ನಿರ್ವಹಣೆಗೆ ತೋಟಗಾರಿಕೆ ವಿಭಾಗ ಕಟ್ಟುನಿಟ್ಟಿನ ನಿಗಾವಹಿಸಬೇಕು ಎಂದು ಆಯುಕ್ತರು ನಿರ್ದೇಶನ ನೀಡಿದರು.

ಸಭೆಯಲ್ಲಿ ಅಪರ ಆಯುಕ್ತರಾದ ಪಲ್ಲವಿ, ಜಂಟಿ ಆಯುಕ್ತ ಮೊಹಮ್ಮದ್ ನಯೀಮ್ ಮೊಮಿನ್, ಉಪ ಆಯುಕ್ತರಾದ ಸೋಮಶೇಖರ್, ಅಮರೇಗೌಡ ಪಾಟೀಲ್, ಮುಖ್ಯ ಅಭಿಯಂತರರಾದ ರಾಘವೇಂದ್ರ ಪ್ರಸಾದ್, ಯಮುನಾ ಸೇರಿದಂತೆ ವಿವಿಧ ವಿಭಾಗಗಳ ಮುಖ್ಯಸ್ಥರು ಉಪಸ್ಥಿತರಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy